ಸಂಪುಟ: 14 Volume ಸಂಚಿಕೆ: 47 Issue ಪುಟಗಳು 08 Pages ಶನಿವಾರ 23 ಮೇ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ


ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಅನ್ಯರನ್ನು ಆಳು ಮಾಡದೆ, ತನ್ನ ತಾನಾಳಿದರೆ ಅದೇ ಬಿಡುಗಡೆ.

–ದ.ರಾ.ಬೇಂದ್ರೆ

## ಕೆಬಿಎನ್: ಉಚಿತ ಥೈರಾಡ ಪರೀಕ್ಷೆ




**ಕಲಬುರಗಿ:** ನಗರದ ಪ್ರಸಿದ್ಧ ಖಾಜಾ ಬದಾನವಾಜ ಆಸ್ಪತ್ರೆಯ ಜನರಲ್ ಮೆಡಿಸಿನ ವಿಭಾಗದಿಂದ ಇದೇ ತಿಂಗಳಿನ 25 ರಂದು ವಿಶ್ವ ಥೈರಾಡದಿನದ ಅಂಗವಾಗಿ ಉಚಿತ ಥೈರಾಡ ಪರೀಕ್ಷೆ ಶಿಬಿರವನ್ನು ಕೆಬಿಎನ್ ಆಸ್ಪತ್ರೆ ಒಪಿಡಿ ನಂಬರ 2 ರಲ್ಲಿ ಮುಂಜಾನೆ 9 ರಿಂದ ಮಧ್ಯಾಹ್ನ 1 ಘಂಟೆವರೆಗೆ ನಡೆಸಲಾಗುವುದು ಎಂದು ಆಡಳಿತ ಮಂಡಳಿ ತಿಳಿಸಿದೆ. ಥೈರಾಡ ಕಂಡು ಬಂದವರಲ್ಲಿ ವಿಭಾಗದ ವೈದ್ಯರಿಂದ ಚಿಕಿತ್ಸೆ ಕೂಡ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 99802 81862ರನ್ನು ಸಂಪರ್ಕಿಸಬಹುದು.



ಗೋರಟಾ ಶ್ರೀ ಸಂಗೀತ ರುದ್ರೇಶ್ವರ 4ನೇ ಜಾತ್ರಾ, ಪೂಜ್ಯ ಶ್ರೀ ವೀರಮ್ಮ ಶ್ರೀ ವಿರೂಪಾಕ್ಷಯ್ಯ ಸ್ವಾಮಿಗಳ ಪುಣ್ಯಾರಾಧನೆ, ಕಲ್ಯಾಣ ಕರ್ನಾಟಕ ಪ್ರಾಂತೀಯ 7ನೇ ಸಂಗೀತ ಸಮ್ಮೇಳನ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟೀಯ ಪುರಸ್ಕಾರ ಪ್ರದಾನ ಸಮಾರಂಭದ ಅವಿಸ್ಮರಣೀಯ ಕ್ಷಣ.

## ಕಾರ್ಯದರ್ಶಿಯಾಗಿ ಸುದೀಪ್ ಆಯ್ಕೆ



**ವಿಜಯಪುರ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾ ಸಭಾದ ಜಿಲ್ಲಾ ಕಾರ್ಯದರ್ಶಿಯಾಗಿ ಬಿಜೆಪಿ ಯುವ ಮುಖಂಡರನದ ಸುದೀಪ್ ದೇಶಪಾಂಡೆ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಮಹಾ ಸಭಾದ ವತಿಯಂದ ಅಧಿಕೃತವನಗಿ ಘೋಷಿಸಿದೆ. ಈ ಕುರಿತು ಮಹಾ ಸಭಾದ ಪ್ರಮುಖರಾದ M K ಭಟ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈದ್ಯರ ಮೇಲೆ ಹಲ್ಲೆ: ಕ್ರಮಕ್ಕೆ ಸೂಚನೆ



**ಬೀದರ್:** ಜಿಲ್ಲಾಸ್ಪತ್ರೆ ಬ್ರಿಮ್ಸ್ ನಲ್ಲಿ ನಿನ್ನೆ ತಡರಾತ್ರಿ ಕೆಲವರು ವೈದ್ಯರ ಮೇಲೆ ಹಲ್ಲೆ ಮಾಡಿರುವುದು ಸಮರ್ಥನೀಯವಲ್ಲ ಎಂದಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ. ಯಾರಿಗೂ ಕಾನೂನು ಕೈಗೆ ತೆಗೆದುಕೊಳ್ಳಲು ಅವಕಾಶ ಇರುವುದಿಲ್ಲ. ಇಂತಹ ಪ್ರಕರಣಗಳು ವೈದ್ಯರ ಆತ್ಮಸ್ಥೈರ್ಯವನ್ನೇ ಕುಗ್ಗಿಸುತ್ತವೆ. ಈ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಹಾಗೂ ಜಿಲ್ಲಾಸ್ಪತ್ರೆಗೆ ಹೆಚ್ಚಿನ ಭದ್ರತೆ ನಡಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ಸೂಚಿಸಿದ್ದಾರೆ.

## ಏಕಾಗ್ರತೆ ಆತ್ಮವಿಶ್ವಾಸ ವೃದ್ಧಿಗೆ ಪ್ರಜ್ಞಾಯೋಗ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ



ಪ್ರತಿಯೊಬ್ಬರಲ್ಲೂ ಸುಪ್ತವಾಗಿರುವ ಜ್ಞಾನ ಮತ್ತು ಅಂತಃಪ್ರಜ್ಞೆಯನ್ನು ಜಾಗೃತಗೊಳಿಸುವ ಪ್ರಕ್ರಿಯೆಯೆ ಪ್ರಜ್ಞಾಯೋಗವಾಗಿದೆ ಎಂದು ಆರ್ಟ್ ಆಫ್ ಲಿವಿಂಗ್‌ನ ಜಿಲ್ಲಾ ಸಂಯೋಜಕ ಎಸ್.ಎಚ್.ರೆಡ್ಡಿ ಹೇಳಿದರು.

ಪಟ್ಟಣದ ಶ್ರೀ ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ 5 ರಿಂದ 18 ವರ್ಷದ ಒಳಗಿನ ಮಕ್ಕಳಿಗಾಗಿ ನಾಲ್ಕು ದಿನಗಳ ಕಾಲ ಹಮ್ಮಿಕೊಂಡಿದ್ದ ಪ್ರಜ್ಞಾಯೋಗದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು. ಪ್ರಜ್ಞಾಯೋಗದಿಂದ ಸರಿಯಾದ ನಿರ್ಧಾರ ಸರಿಯಾದ ಸಮಯದಲ್ಲಿ ಸರಿಯಾದ ಆಲೋಚನೆ ಬರುವಂತೆ ಮಾಡುತ್ತದೆ, ಏಕಾಗ್ರತೆ ಮತ್ತು ಗ್ರಹಿಕೆ : ಕಣ್ಣು ಮುಚ್ಚಿಯೇ ಬಣ್ಣಗಳನ್ನು ಗುರುತಿಸುವದು, ಓದುವದು ಮತ್ತು ಚಿತ್ರಗಳನ್ನು ಗ್ರಹಿಸುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ, ಆತ್ಮ ವಿಶ್ವಾಸವನ್ನು ವೃದ್ಧಿಸುವ ನಿಟ್ಟಿನಲ್ಲಿ ಶೈಕ್ಷಣಿಕ ಸಾಧನೆ, ನಿರ್ಧಾರ ತೆಗೆದುಕೊಳ್ಳುವಿಕೆ ಮತ್ತು ಮಕ್ಕಳಲ್ಲಿನ ಸೃಜನಶೀಲತೆಯನ್ನು ಸುಧಾರಿಸುತ್ತದೆ, ಮಾನಸಿಕ ಬೆಳವಣಿಗೆ ಸರಳ ಧ್ಯಾನ ಮೂಲಕ ಭಾವನಾತ್ಮಕ ಕೌಶಲ್ಯಗಳನ್ನು ಬೆಳೆಸುತ್ತದೆ ಎಂದು ತಿಳಿಸಿದರು. ಮೋಹನರೆಡ್ಡಿ ಡಿಗ್ಗಾವಿ ಮಾತನಾಡಿ, ಪ್ರತಿಯೊಬ್ಬ ಮಾನವನಲ್ಲೂ ಅಂತರಂಗ ಶಕ್ತಿ ಅಡಗಿದ್ದು, ಅದನ್ನು ಜಾಗೃತಗೊಳಿಸುವ ಉದ್ದೇಶದಿಂದ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ವಿಶೇಷ ತರಬೇತಿ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದೆ. ಇಂದಿನ ಮಕ್ಕಳು ಮೊಬೈಲ್ ಹಾಗೂ ಟಿವಿಗಳ ಗೀಳಿಗೆ ಒಳಗಾಗುತ್ತಿರುವ ಹಿನ್ನೆಲೆಯಲ್ಲಿ ಅವರನ್ನು ಇಂತಹ ಶಿಬಿರಗಳತ್ತ ಆಕರ್ಷಿಸುವುದು ಅಗತ್ಯವಾಗಿದೆ ಎಂದರು.

## ಜೆಸ್ಕಾಂನಲ್ಲಿ ಭಯೋತ್ಪಾದನಾ ವಿರೋಧಿ ದಿನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಭಯೋತ್ಪಾದನೆ ಹಾಗೂ ಹಿಂಸಾಚಾರದ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಜೆಸ್ಕಾಂ ಮುಖ್ಯ ಕಚೇರಿಯಲ್ಲಿ ಭಯೋತ್ಪಾದನಾ ವಿರೋಧಿ ದಿನ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜೆಸ್ಕಾಂನ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಪ್ರಮಾಣ ವಚನ ಬೋಧಿಸಲಾಯಿತು. ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯ ಮೇಲೆ ದೃಢ ವಿಶ್ವಾಸವಿರಿಸಿ, ಎಲ್ಲ ರೀತಿಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ತಮ್ಮೆಲ್ಲ ಶಕ್ತಿ ಹಾಗೂ ಸಾಮರ್ಥ್ಯದಿಂದ ಎದುರಿಸುವುದಾಗಿ ಸಿಬ್ಬಂದಿ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಸ್ವೀಕರಿಸಿದರು. ಜೊತೆಗೆ, ಸಮಾಜದಲ್ಲಿ ಶಾಂತಿ, ಸಾಮಾಜಿಕ ಸೌಹಾರ್ದತೆ ಹಾಗೂ ಪರಸ್ಪರ ಅರಿವು ಬೆಳೆಸಲು ಮತ್ತು ಮಾನವ ಜೀವ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ಸಂಕಲ್ಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕರಾದ ಶಶೀಧರ ಕುರೇರ, ನಿರ್ದೇಶಕರು (ತಾಂತ್ರಿಕ) ಚಂದ್ರಕಾಂತ ಪಾಟೀಲ್, ಮುಖ್ಯ ಆರ್ಥಿಕ ಸಲಹೆಗಾರರಾದ ಶಿವಶಂಕರ ಬಿ. ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

# ರಾಜ್ಯಸಭೆಗೆ ಮೈತ್ರಿ ಫೈಟ್

### ಆಯ್ಕೆಗಾಗಿ ಜೆಡಿಎಸ್ | ಬಿಜೆಪಿ ಅಭ್ಯರ್ಥಿಗಳ ಕಸರತ್ತು | ಸದಾನಂದ ಗೌಡ, ಮಾಜಿ ಪ್ರಧಾನಿಯವರ ಆಯ್ಕೆ?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜೂನ್ ಮಾಸಾಂತ್ಯಕ್ಕೆ ಕರ್ನಾಟಕದ ನಾಲ್ಕು ರಾಜ್ಯಸಭಾ ಸದಸ್ಯರ ಸದಸ್ಯತ್ವದ ಅವಧಿ ಮುಕ್ತಾಯಗೊಳ್ಳಲಿದೆ. ಕಾಂಗ್ರೆಸ್ಸಿನಿಂದ ಮೂವರು ಮತ್ತು ಬಿಜೆಪಿಯಿಂದ ಒಬ್ಬರು ಈಗಿನ ಸಂಖ್ಯಾಬಲದ ಆಧಾರದ ಮೇಲೆ ಗೆಲುವನ್ನು ಸಾಧಿಸಬಹುದು. ಜಾತ್ಯಾತೀಯ ಜನತಾದಳಕ್ಕೆ ಯಾವುದೇ ಸೀಟ್ ಗೆಲ್ಲಲು ಬೇಕಾದ ನಂಬರಿನ ಕೊರತೆಯಿದೆ. ಹಾಗಾಗಿ, ಬಿಜೆಪಿಯನ್ನು ಅವಲಂಬಿತವಾಗಬೇಕಿದೆ.

**ನೋಟಿಫಿಕೇಶನ್ ಜಾರಿ:** ರಾಜ್ಯಸಭಾ ಚುನಾವಣೆಗೆ ಸಂಬಂಧಿಸಿದಂತೆ, ಕೇಂದ್ರ ಚುನಾವಣಾ ಆಯೋಗ, ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿದೆ. ಜೂನ್ ಒಂದನೇ ತಾರೀಕಿಗೆ ಅನ್ವಯವಾಗುವಂತೆ ನೋಟಿಫಿಕೇಶನ್ ಜಾರಿಯಾಗಿದೆ. ಜೂನ್ ಎಂಟಕ್ಕೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ ಹದಿನೆಂಟಕ್ಕೆ ಮತದಾನವು ಬೆಳಗ್ಗೆ ಒಂಬತ್ತರಿಂದ ಸಂಜೆ ನಾಲ್ಕರವರೆಗೆ ನಡೆಯಲಿದೆ. ಇದಾದ ನಂತರ ಅಂದೇ, ಫಲಿತಾಂಶ ಪ್ರಕಟವಾಗಲಿದೆ. ಕರ್ನಾಟಕದಲ್ಲಿ ಬಿಜೆಪಿ ಗೆಲ್ಲಬಹುದಾದ ಒಂದು ಸ್ಥಾನಕ್ಕೆ ಇಬ್ಬರ ನಡುವೆ ಪೈಪೋಟಿ ಏರ್ಪಟ್ಟಿದೆ.

**ಸದಸ್ಯತ್ವದ ಅವಧಿ ಮುಕ್ತಾಯ:** ಬಿಜೆಪಿಯ ಈರಣ್ಣ ಕಡಾಡಿ, ನಾರಾಯಣ ಕೊರಗಪ್ಪ, ಜೆಡಿಎಸ್'ನ ಎಚ್.ಡಿ.ದೇವೇಗೌಡರು ಮತ್ತು ಕಾಂಗ್ರೆಸ್ಸಿನ ಮಲ್ಲಿಕಾರ್ಜುನ ಖರ್ಗೆಯವರ, ರಾಜ್ಯಸಭೆಯ ಸದಸ್ಯತ್ವದ ಅವಧಿ, ಜೂನ್ 25ಕ್ಕೆ ಮುಕ್ತಾಯಗೊಳ್ಳಲಿದೆ. ಹಾಲೀ ಪಾರ್ಟಿಗಳ ಬಲಾಬಲದ ಪ್ರಕಾರ, ಕಾಂಗ್ರೆಸ್ಸಿನಿಂದು ಮೂವರು ಮತ್ತು ಬಿಜೆಪಿಯ ಒಬ್ಬರು, ರಾಜ್ಯಸಭೆಗೆ ಆಯ್ಕೆಯಾಗಬಹುದು. ಕಾಂಗ್ರೆಸ್ಸಿನಲ್ಲಿ ಈ ಸೀಟ್'ಗಾಗಿ ಭಾರೀ ಪೈಪೋಟಿ ಏರ್ಪಟ್ಟಿದೆ.

### ಜೆಡಿಎಸ್ ಒತ್ತಾಯ

ಎನ್‌ಡಿಎ ಮೈತ್ರಿಕೂಟದ ಭಾಗವಾಗಿರುವ ಜೆಡಿಎಸ್ ಆಲೋಚನೆಯೇ ಬೇರೆ ಇದೆ. ಹಾಲೀ ರಾಜ್ಯಸಭಾ ಸದಸ್ಯರೂ ಆಗಿರುವ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರನ್ನು ಮತ್ತೆ ಆರಿಸಿ ಕಳುಹಿಸಬೇಕು ಎನ್ನುವುದು ಜೆಡಿಎಸ್ ನಾಯಕರ ಒತ್ತಾಯ. ಕಳೆದ ಬಾರಿ ಕಾಂಗ್ರೆಸ್ ಬೆಂಬಲದೊಂದಿಗೆ ದೇವೇಗೌಡ್ರು, ರಾಜ್ಯಸಭೆಗೆ ಆಯ್ಕೆಯಾಗಿದ್ದರು. ಈ ಬಾರಿ, ಬಿಜೆಪಿ ಬೆಂಬಲವನ್ನು ದೇವೇಗೌಡರು ಬಯಸುತ್ತಿದ್ದಾರೆ. ಈ ಸಂಬಂಧ, ಅಮಿತ್ ಶಾ ಮಟ್ಟದಲ್ಲಿ ಈಗಾಗಲೇ ಚರ್ಚೆ ನಡೆದಿದೆ ಎನ್ನುವ ಮಾಹಿತಿಯಿದೆ.





### ಒಂದು ಸೀಟಿಗಾಗಿ ಪೈಪೋಟಿ..!

ಇಬ್ಬರು ಒಕ್ಕಲಿಗ ಸಮುದಾಯದ ನಾಯಕರಾದ ಸದಾನಂದ ಗೌಡ ಮತ್ತು ದೇವೇಗೌಡ್ರ ನಡುವೆ, ಒಂದು ಸೀಟಿಗಾಗಿ ಪೈಪೋಟಿ ಏರ್ಪಟ್ಟಿದೆ. ರಾಜ್ಯ ಭಾರತೀಯ ಜನತಾ ಪಾರ್ಟಿಯು ಈ ಸಂಬಂಧ ಶಿಫಾರಸು ಮಾಡಲು ಮುಂದಾಗಿದೆ. ಆದರೆ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಯಾರ ಕಡೆ ಒಲವನ್ನು ತೋರುತ್ತಾರೆ ಎನ್ನುವುದನ್ನು ಕಾದು ನೋಡಬೇಕಿದೆ. ಯಾಕೆಂದರೆ, ಲೋಕಸಭೆಯಲ್ಲಿ ಸಂಖ್ಯಾಬಲದ ಲೆಕ್ಕಾಚಾರದಲ್ಲಿ ಜನತಾ ದಳ (JDS) ನಂಬರ್ ಕೂಡಾ ಬಿಜೆಪಿಗೆ ಮುಖ್ಯವಾಗಲಿದೆ.

### ಡಿವಿಎಸ್ ರಾಜ್ಯಸಭೆಗೆ..?

ಬಿಜೆಪಿಯ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಶಿವಪ್ರಕಾಶ್, ರಾಜ್ಯ ಉಸ್ತುವಾರಿ ರಾಧಾ ಮೋಹನದಾಸ್ ಅಗರವಾಲ್, ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಮ್ಮುಖದಲ್ಲಿ ಬಿಜೆಪಿ ಪ್ರಮುಖರ ಸಭೆ ಗುರುವಾರ ನಡೆದಿತ್ತು. ಈ ಸಭೆಯಲ್ಲಿ, ಮಾಜಿ ಮುಖ್ಯಮಂತ್ರಿ, ಕೇಂದ್ರ ಸಚಿವ ಡಿವಿ ಸದಾನಂದ ಗೌಡ ಅವರನ್ನು ರಾಜ್ಯದಿಂದ ಆರಿಸಿ ಕಳುಹಿಸೋಣ ಎನ್ನುವುದರ ಬಗ್ಗೆ ಚರ್ಚೆ ನಡೆದಿದೆ. ಹಲವು ಹುದ್ದೆಗಳನ್ನು ಅಲಂಕರಿಸಿರುವ ಸದಾನಂದ ಗೌಡರ ಆಯ್ಕೆಗೆ ಸಂಬಂಧಿಸಿದಂತೆ ಬಿಜೆಪಿಯಲ್ಲಿ ಯಾವುದೇ ಗೊಂದಲವಿಲ್ಲ.





### ಶಾ ಒಲವು ಯಾರ ಕಡೆಗೆ..?

ಇನ್ನೊಂದು ಕಡೆ, ದೇವೇಗೌಡರು ಮತ್ತೆ ರಾಜ್ಯಸಭೆ ಪ್ರವೇಶಕ್ಕೆ ಬಿಜೆಪಿ ಕಡೆಯಿಂದ ಪ್ರಯತ್ನವನ್ನು ಮಾಡುತ್ತಿದ್ದಾರೆ. ಸದ್ಯದ ಅಸೆಂಬ್ಲಿ ಬಲದ ಪ್ರಕಾರ, ಜೆಡಿಎಸ್ ಬಳಿ ಇರುವುದು ಕೇವಲ ಹದಿನೇಳು ಸ್ಥಾನ ಮಾತ್ರ, ಈ ನಂಬರ್'ನಿಂದ ರಾಜ್ಯಸಭೆ ಸ್ಥಾನ ಗೆಲ್ಲಲು ಸಾಧ್ಯವಾಗುವುದಿಲ್ಲ. ಹಾಗಾಗಿ, ಬಿಜೆಪಿಯ 63 ಶಾಸಕರ ಬೆಂಬಲದ ಅವಶ್ಯಕತೆಯಿದೆ. ದೇವೇಗೌಡರಿಗೆ ಟಿಕೆಟ್ ಸಿಗದೇ ಇದ್ದಲ್ಲಿ, ರಾಜ್ಯಸಭೆಯಲ್ಲಿ ಜೆಡಿಎಸ್ ಪಾರ್ಟಿಯ ಅಸ್ತಿತ್ವವೇ ಇಲ್ಲದಂತಾಗುತ್ತದೆ ಎನ್ನುವುದು ಪಾರ್ಟಿಯ ನಾಯಕರ ಅಭಿಪ್ರಾಯವಾಗಿದೆ.

## ಮಹಿಳೆಯ ಅನುಮಾನಾಸ್ಪದ ಸಾವು, ಕೊಲೆ ಶಂಕೆ!

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ಪಟ್ಟಣದ ಆಡಳಿದ ಸೌಧದ ಬಳಿಯ ಅಗ್ನಿಶಮಾಕ ಠಾಣೆಯ ಬಳಿ ಗುರುವಾರ ರಾತ್ರಿ ಸುಮಾರು 9 ರಿಂದ 10 ಗಂಟೆ ವೇಳೆಗೆ ಮಹಿಳೆಯ ಅನುಮಾನಾಸ್ಪದ ಸಾವು ಸಂಭವಿಸಿದ್ದು, ಕೊಲೆ ಶಂಕೆ ವ್ಯಕ್ತವಾಗಿದೆ.

ಘಟನಾ ಸ್ಥಳಕ್ಕೆ ವಿಜಯನಗರ ಎಸ್ಪಿ ಜಾನವಿ, ಡಿ ವೈ ಎಸ್ ಪಿ ಮಲ್ಲೇಶ್ ದೊಡ್ಮನಿ, ಸಿಪಿಐ ವಿಕಾಸ್ ಲಮಾಣಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಪಟ್ಟಣದ ರಾಮ್ ರಹೀಮ್ ನಗರದ ನಿವಾಸಿ ಪ್ರಿಯಾಂಕ 27 ವರ್ಷ ಎಂಬಾಕೆ ಕಳೆದ ಕೆಲವು ತಿಂಗಳಿನಿಂದ ಇಲ್ಲಿಯ ಮಿಯಾ ಫ್ಯಾಷನ್ ಎಂಬ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದು. ಗುರುವಾರ ರಾತ್ರಿ 8.30 ನಿಮಿಷದವರೆಗೂ ಅಂಗಡಿಯಲ್ಲಿ ಕೆಲಸ ನಿರ್ವಹಿಸಿದ್ದು ಆ ಬಳಿಕ ಇಬ್ಬರು ಯುವಕರೊಂದಿಗೆ ತೆರಳಿದ್ದು ಸುಮಾರು 9:00ಗೆ ಪಟ್ಟಣದ ವರವಲಯದಲ್ಲಿ ಘಟನೆ ಸಂಭವಿಸಿದೆ.

## ಬಕ್ರೀದ್ ಹಬ್ಬ ಹಿನ್ನೆಲೆ ಶಾಂತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಬಕ್ರೀದ್ ಹಬ್ಬದ ಪ್ರಯುಕ್ತ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ಸಂಜೆ ಶಾಂತಿ ಸಭೆ ನಡೆಯಿತು. ನೂತನ ಪೊಲೀಸ್ ಇನ್ಸ್‌ಪೆಕ್ಟರ್ ದೌಲತ್ ಎನ್. ಕುರಿ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ವಿವಿಧ ಸಮಾಜಗಳ ಮುಖಂಡರು ಭಾಗವಹಿಸಿದ್ದರು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಪಿಐ ದೌಲತ್ ಎನ್. ಕುರಿ ಅವರು, "ಪಟ್ಟಣದಲ್ಲಿ ಯಾವುದೇ ಗಲಭೆಗಳಿಗೆ ಅವಕಾಶ ನೀಡುವುದಿಲ್ಲ. ಸಾರ್ವಜನಿಕರು ಶಾಂತಿಯುತವಾಗಿ ಹಬ್ಬವನ್ನು ಆಚರಿಸಬೇಕು. ಯಾವುದೇ ಅಹಿತಕರ ಘಟನೆಗಳು ನಡೆದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಮಸ್ಯೆಗಳು ಕಂಡು ಬಂದಲ್ಲಿ ಸಾರ್ವಜನಿಕರು ಕಾನೂನು ಕೈಗೆತ್ತಿಕೊಳ್ಳದೆ ನೇರವಾಗಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬೇಕು. ನಾವು ಸದಾ ನಿಮ್ಮೊಂದಿಗೆ ಇರುತ್ತೇವೆ" ಎಂದು ಭರವಸೆ ನೀಡಿದರು.

# ಮುಚ್ಚದೆ ದುರ್ನಾತ ಬೀರುತ್ತಿರುವ ಗುಂಡಿ, ಹಚ್ಚೊಳ್ಳಿ ಚರಂಡಿ

• ಚನ್ನಕೇಶವ, ಕಂಪ್ಲಿ/ ಸಿರುಗುಪ್ಪ




ಗಡಿ ಗ್ರಾಮ ಹಚ್ಚೊಳ್ಳಿಯಲ್ಲಿ ಸ್ವಚ್ಛತೆ ಮಾಯ, ಚರಂಡಿ ನೀರು ರಸ್ತೆ ಮೇಲೆ ಹರಿದು ದುರ್ವಾಸನೆ ಗ್ರಾಮವನ್ನೇ ಆವರಿಸಿದೆ. "ಚರಂಡಿಯ ದುರ್ನಾತವೇ ಇಲ್ಲಿನ ಪಂಚಾಯತಿ ಆಡಳಿತದ ದೊಡ್ಡ ಸಾಧನೆ" ಎಂದು ಸ್ಥಳೀಯರು ಆಕ್ರೋಶ ಹೊರಹಾಕಿದ್ದಾರೆ.

**12 ವರ್ಷದಿಂದ ಅಲುಗದ ಕುರ್ಚಿ:** ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕಿನ ಗಡಿ ಗ್ರಾಮವಾದ ಹಚ್ಚೊಳ್ಳಿ ಗ್ರಾಮ ಪಂಚಾಯತಿಯಲ್ಲಿ ಪಿಡಿಒ ಮಂಜುಳಾ ಕಳೆದ 12 ವರ್ಷದಿಂದ ಒಂದೇ ಸ್ಥಳದಲ್ಲಿ ಠಿಕಾಣಿ ಹೂಡಿದ್ದಾರೆ. "ದಪ್ಪ ಚರ್ಮದ" ಆಡಳಿತದಿಂದ ಮೂಲಭೂತ ಸೌಕರ್ಯಗಳು ಮರೀಚಿಕೆಯಾಗಿವೆ. ಚರಂಡಿ ವ್ಯವಸ್ಥೆ ಇಲ್ಲದೇ ಕೊಳಚೆ ನೀರು ನೇರ ರಸ್ತೆಗೆ ಹರಿಯುತ್ತಿದ್ದು, ಹಂದಿಗಳು ಅದೇ ನೀರಿನಲ್ಲಿ ಮಲಗುವ ಪರಿಸ್ಥಿತಿ ನಿರ್ಮಾಣವಾಗಿದೆ.

**ನರೇಗಾ ಹಣ ಲೂಟಿ ಆರೋಪ:** ನರೇಗಾ ಯೋಜನೆಯ ಕೋಟಿ ಗಟ್ಟಲೆ ಹಣ ಲೂಟಿ ಹೊಡೆದರೂ ಕನಿಷ್ಠ ಮೂಲಭೂತ ಸೌಕರ್ಯ ಒದಗಿಸದ ಪಂಚಾಯತಿ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಗಂಭೀರ ಆರೋಪ ಮಾಡಿದ್ದಾರೆ. ರೋಗ–

### ಇಲಾಖೆ ಜಾಣ ಕುರುಡು, ಅಧಿಕಾರಿಗಳು ಕಣ್ಮರೆ

1. ಸಿಇಒ ಹ್ಯಾರಿಸ್: ಸಾರ್ವಜನಿಕರ ಅಳಲನ್ನು ಸುದ್ದಿ ಮೂಲಕ ಇಲಾಖೆ ಗಮನಕ್ಕೆ ತಂದರೂ ಜಿಲ್ಲಾ ಪಂಚಾಯತ್ ಸಿಇಒ ಹ್ಯಾರಿಸ್ ಕ್ಯಾರೆ ಎನ್ನುತ್ತಿಲ್ಲ.
2. ಇಒ ಪವನ್ ಕುಮಾರ್: ಅಧಿಕೃತ ದೂರು ನೀಡಿದರೂ ಇಒ ಪವನ್ ಕುಮಾರ್ ಸ್ಪಂದಿಸದೇ "ಎಲ್ಲಿದೀಯಪ್ಪಾ ಪವನ್ ಕುಮಾರ್" ಎಂದು ಜನ ಹುಡುಕುವ ಸ್ಥಿತಿ ಬಂದಿದೆ.
3. ಪೊರ್ಜರಿ ಹಗರಣ: ಪಂಚಾಯತಿಯಲ್ಲಿ ಪೊರ್ಜರಿ ದಾಖಲೆ ಸೃಷ್ಟಿಸಿ ಅಕ್ರಮವಾಗಿ ಆಸ್ತಿ ಹಕ್ಕು ಬದಲಾವಣೆ ಮಾಡಿದ ಸಿಬ್ಬಂದಿ ಮೇಲೆ ಕ್ರಮವೇ ಇಲ್ಲ.

### ಅಭಿವೃದ್ಧಿ ಕಡೆ ಗಮನ

ಇಡೀ ಇಲಾಖೆ ಸಿಬ್ಬಂದಿ ಕೆಳಹಂತದ ಅಧಿಕಾರಿಯ ತಪ್ಪನ್ನು ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. "ಒಣ ರಾಜಕೀಯ ಬಿಟ್ಟು ಅಭಿವೃದ್ಧಿ ಕಡೆ ಗಮನ ನೀಡಿ ಖರ್ಗೆ ಸಾಹೇಬರೇ" ಎಂದು ಜನ ನೇರವಾಗಿ ಪ್ರಶ್ನಿಸಿದ್ದಾರೆ.

### ಜನರ ಅಂತಿಮ ಒತ್ತಾಯ

ಗಡಿ ಭಾಗದ ಗ್ರಾಮವೆಂದು ನಿಷ್ಕಾಳಜಿ ತೋರದೆ, ಇಲಾಖೆ ಎಚ್ಚೆತ್ತು ಕೂಡಲೇ ಕ್ರಮ ಕೈಗೊಳ್ಳಬೇಕು. 12 ವರ್ಷದಿಂದ ಕುರ್ಚಿಗೆ ಅಂಟಿಕೊಂಡಿರುವ ಪಿಡಿಒ ಮಂಜುಳಾ ವಿರುದ್ಧ ತನಿಖೆ ನಡೆಸಿ, ನರೇಗಾ ಹಣ ದುರ್ಬಳಕೆ, ಆಸ್ತಿ ಹಕ್ಕು ಅಕ್ರಮದ ಬಗ್ಗೆ ಉನ್ನತ ಮಟ್ಟದ ತನಿಖೆಯಾಗಬೇಕು. ಇಲ್ಲದಿದ್ದರೆ ಗ್ರಾಮಸ್ಥರು ಉಗ್ರ ಹೋರಾಟದ ಎಚ್ಚರಿಕೆ ನೀಡಿದ್ದಾರೆ.

**ಹಿಂದಿನದನ್ನು ಮರೆತುಬಿಡಿ, ಭವಿಷ್ಯದತ್ತ ಗಮನಹರಿಸಿ, ವಿಷನ್ 2047ಕ್ಕೆ ಒತ್ತು ನೀಡಿ': ಸಚಿವರಿಗೆ ಪ್ರಧಾನಿ ಮೋದಿ ಸಲಹೆ**

## ಅಧಿಕಾರಿಗಳು ಜನಸ್ನೇಹಿಯಾಗಿ ಕಾರ್ಯ ನಿರ್ವಹಿಸಬೇಕು

ಜನರ ಮೂಲಭೂತ ಅಗತ್ಯಗಳಲ್ಲಿ ವಿದ್ಯುತ್ ಅತ್ಯಂತ ಪ್ರಮುಖವಾಗಿದೆ. ರೈತರು, ವ್ಯಾಪಾರಸ್ಥರು, ವಿದ್ಯಾರ್ಥಿಗಳು ಹಾಗೂ ಸಾಮಾನ್ಯ ಕುಟುಂಬಗಳ ದೈನಂದಿನ ಬದುಕು ವಿದ್ಯುತ್ ಮೇಲೆಯೇ ಅವಲಂಬಿತವಾಗಿದೆ. ಇಂತಹ ಮಹತ್ವದ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಜನಸ್ನೇಹಿಯಾಗಿ ನಡೆದುಕೊಳ್ಳುವುದು ಕಾಲದ ಅಗತ್ಯವಾಗಿದೆ. ಆದರೆ ಹುಮನಾಬಾದ್ ಪ್ರದೇಶದಲ್ಲಿ ವಿದ್ಯುತ್ ಸಮಸ್ಯೆಗಳು ಹೆಚ್ಚುತ್ತಿರುವುದು ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಗ್ರಾಮೀಣ ಭಾಗಗಳಲ್ಲಿ ನಿರಂತರ ಲೋಡ್ ಶೆಡ್ಡಿಂಗ್, ಕಡಿಮೆ ವೋಲ್ಟೇಜ್ ಸಮಸ್ಯೆ, ಟ್ರಾನ್ಸ್‌ಫಾರ್ಮರ್ ದೋಷಗಳು ಮತ್ತು ದೂರುಗಳಿಗೆ ತಕ್ಷಣ ಸ್ಪಂದನೆ ಸಿಗದಿರುವುದು ಜನರನ್ನು ಸಂಕಷ್ಟಕ್ಕೆ ತಳ್ಳುತ್ತಿದೆ. ವಿಶೇಷವಾಗಿ ರೈತರು ಬೆಳೆಗಳಿಗೆ ನೀರು ಹಾಯಿಸಲು ರಾತ್ರಿ ವೇಳೆ ವಿದ್ಯುತ್ ಅವಲಂಬಿಸಬೇಕಾದ ಪರಿಸ್ಥಿತಿ ಇದೆ. ಇಂತಹ ಸಂದರ್ಭದಲ್ಲಿ ವಿದ್ಯುತ್ ವ್ಯತ್ಯಯ ಉಂಟಾದರೆ ರೈತರ ಬೆಳೆಗಳು ಹಾನಿಗೊಳಗಾಗುತ್ತವೆ.

ವಿದ್ಯುತ್ ಇಲಾಖೆಯ ಕೆಲ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ಜನರ ಆಕ್ರೋಶಕ್ಕೆ ಕಾರಣವಾಗುತ್ತಿದೆ. ಕಚೇರಿಗಳಿಗೆ ಹೋದ ಜನರಿಗೆ ಸರಿಯಾದ ಮಾಹಿತಿ ಸಿಗದೆ ಅಲೆದಾಡುವ ಪರಿಸ್ಥಿತಿ ಉಂಟಾಗಿದೆ ಎಂಬ ದೂರುಗಳು ಕೇಳಿಬರುತ್ತಿವೆ. ಜನರ ಸಮಸ್ಯೆಗಳನ್ನು ಕೇಳಿ ಪರಿಹರಿಸುವ ಮನೋಭಾವ ಅಧಿಕಾರಿಗಳಲ್ಲಿ ಬೆಳೆಬೇಕು. ಸಾರ್ವಜನಿಕ ಸೇವೆ ಎನ್ನುವುದು ಕೇವಲ ಕೆಲಸವಲ್ಲ, ಅದು ಜವಾಬ್ದಾರಿ ಎಂಬುದನ್ನು ಪ್ರತಿಯೊಬ್ಬ ಅಧಿಕಾರಿಯೂ ಅರಿತುಕೊಳ್ಳಬೇಕು.

ಸರ್ಕಾರವು ಕೂಡ ವಿದ್ಯುತ್ ಇಲಾಖೆಯಲ್ಲಿ ಜನಸ್ನೇಹಿ ಆಡಳಿತಕ್ಕೆ ಒತ್ತು ನೀಡಬೇಕು. ದೂರುಗಳಿಗೆ ತ್ವರಿತ ಸ್ಪಂದನೆ, ರೈತರಿಗೆ ಸಮಯಕ್ಕೆ ಸರಿಯಾದ ವಿದ್ಯುತ್ ಪೂರೈಕೆ, ಹಳೆಯ ವಿದ್ಯುತ್ ತಂತಿಗಳು ಹಾಗೂ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆ ಮುಂತಾದ ಕಾರ್ಯಗಳನ್ನು ಆದ್ಯತೆಯಾಗಿ ಕೈಗೊಳ್ಳಬೇಕು. ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿದರೆ ಇಲಾಖೆಯ ಮೇಲಿನ ನಂಬಿಕೆ ಹೆಚ್ಚುತ್ತದೆ.

ಹುಮನಾಬಾದ್ ತಾಲೂಕಿನ ಜನರು ಅಭಿವೃದ್ಧಿ ಮತ್ತು ಉತ್ತಮ ಸೇವೆಯನ್ನು ನಿರೀಕ್ಷಿಸುತ್ತಿದ್ದಾರೆ. ಆದ್ದರಿಂದ ವಿದ್ಯುತ್ ಇಲಾಖೆಯ ಅಧಿಕಾರಿಗಳು ಜನರ ನೋವುಗಳಿಗೆ ಸ್ಪಂದಿಸಿ, ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುವ ಮೂಲಕ ಜನಸ್ನೇಹಿ ಆಡಳಿತದ ಮಾದರಿಯಾಗಬೇಕು.

## ವಸತಿ ಕಾಲೇಜುಗಳ ಪ್ರಥಮ ಪಿಯುಸಿ ಪ್ರವೇಶಾತಿ ಕೌನ್ಸೆಲಿಂಗ್ 30ಕ್ಕೆ

**ಬೀದರ:** ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲ್ಪಡುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಹಾಗೂ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಕಾಲೇಜುಗಳ 2026–27ನೇ ಸಾಲಿನ ಪ್ರಥಮ ಪಿಯುಸಿ ಪ್ರವೇಶಾತಿಗಾಗಿ ಮೇ.30 ರಂದು ಬೆಳಿಗ್ಗೆ 9 ಗಂಟೆಗೆ ಮೌಲಾನಾ ಆಜಾದ್ ಭವನ, ಗುರುನಾನಕ್ ಝಿರಾದಿಂದ ಚಿಟಗುಪ್ಪ ರಿಂಗ್ ರಸ್ತೆ, ಬೀದರ ಇಲ್ಲಿ ಕೌನ್ಸೆಲಿಂಗ್ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳ ಮೆರಿಟ್ ಆಧಾರದ ಮೇಲೆ ಕೌನ್ಸೆಲಿಂಗ್ ಪ್ರಕ್ರಿಯೆ ನಡೆಯಲಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇಲ್ಲಿಗೆ ಭೇಟಿ ಮಾಡಬಹುದು ಅಥವಾ ಮೊಬೈಲ್ ಸಂಖ್ಯೆ 9739438240 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ24 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

**ಕಲಬುರಗಿ:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಕೆಳಕಂಡ ಫೀಡರ್‌ಗಳ ವ್ಯಾಪ್ತಿಯಲ್ಲಿನ ನಿರ್ವಹಣಾ ಕಾರ್ಯ ಕೈಗೊಳ್ಳುವ ಪ್ರಯುಕ್ತ ಇದೇ ಮೇ 24ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

**ಕಾರ್ಪೋರೇಶನ್ ಫೀಡರ್:** ಟ್ರಾಮ್‌ಕೇರ್, ಎಸ್.ಎನ್.ಸಿ.ಓ ಎಮ್.ಆರ್.ಎಮ್.ಸಿ ಮೆಡಿಕಲ್ ಕಾಲೇಜು, ಕ್ಯಾನ್ಸರ್ ಆಸ್ಪತ್ರೆ, ಜಯದೇವ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**ಜಿ.ಜಿ.ಹೆಚ್. ಫೀಡರ್:** ಜಿಲ್ಲಾ ಆಸ್ಪತ್ರೆ, ಜಯದೇವ ಆಸ್ಪತ್ರೆ, ಟ್ರಾಮಾ ಸೆಂಟರ್, ನರ್ಸ್ ಹಾಸ್ಟೇಲ್ ಹಾಗೂ ಸುತ್ತಮುತ್ತಲಿನ ಪ್ರದೇಶ.

**ವಿರೇಶ ನಗರ ಫೀಡರ್:** ವಿರೇಶ ನಗರ ಪೋಲಿಸ್ ಕ್ವಾಟರ್ಸ್, ಅಡ್ವಕೇಟ್ ಕಾಲೋನಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**ಎಸ್.ಟಿ.ಬಿ.ಟಿ. ಫೀಡರ್:** ಬಾಪು ನಗರ, ಸುಂದರ ನಗರ, ಭರತ ನಗರತಾಂಡಾ, ಎಮ್.ಆರ್.ಎಮ್.ಸಿ ಎದುರುಗಡೆ ಪ್ರದೇಶ ಸಂತ್ರಾಸವಾಡಿ ಮತ್ತು ಸುತ್ತಮುತ್ತಲಿನ ಪ್ರದೇಶಗಳು.

**ರಾಜಾಪೂರ ಫೀಡರ್:** ನಾಯ್ಡು ಲೇಔಟ್, ಜಿ.ಡಿ.ಎ.ರಾಜಾಪುರ, ಬಂಜಾರಾ ಲೇಔಟ್, ಶಾಬಾದ್ ಶಕ್ತಿ ನಗರ, ಮಾತಾ ಮಾಣಿಕೇಶ್ವರಿ ಕಾಲೋನಿ, ನೃಪತುಂಗಾ ಕಾಲೋನಿ, ಕೆಂಬ್ರಿಡ್ಜ್ ಶಾಲೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**ಜಿಮ್ಸ್ ಫೀಡರ್:** ಜಿಮ್ಸ್ ಕಾಲೇಜ, ಜಿಮ್ಸ್ ಅಡ್ಮಿನ್ ಕಟ್ಟಡ, ಮಹಿಳಾ ಹಾಸ್ಟೇಲ್ ಜಿಮ್ಸ್ ಹಾಗೂ ಸುತ್ತಮುತ್ತಲಿನ ಪ್ರದೇಶ.

**ಉಮರ್ ಕಾಲೋನಿ ಫೀಡರ್:** ಉಮರ ಕಾಲೋನಿ, ಅಬುಬಕರ್ ಕಾಲೋನಿ, ಆಜಾದಪೂರ ರಸ್ತೆ, ಅಹಮದ ನಗರ್, ಮಕ್ಕಾ ಕಾಲೋನಿ, ಮಹಾರಾಜಾ ಹೋಟೆಲ್, ವಾಟರ್‌ಟ್ಯಾಂಕ್, ಯದ್ದುಲ್ಲಾ ಕಾಲೋನಿ, ಕಮಾಲ ಎ ಮುಜರತ್, ಮಹಬೂಬ ನಗರ, ವೀರಭದ್ರೇಶ್ವರ ದೇವಾಲಯ, ಖಾನ್ ಕಂಪೌಂಡ್, ಟಿಪ್ಪು ಸುಲ್ತಾನ ಚೌಕ, ಸನಾ ಹೋಟೆಲ್, ಅಕಬರ್ ಭಾಗ್, ರಾಮಜೀ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**ಸಪ್ನಾ ಬೇಕರಿ ಫೀಡರ್:** ಜಮಜಮ ಕಾಲೋನಿ, ಸಿಟಿ ಸ್ಕೂಲ್ ಏರಿಯಾ, ತಬೇಲಾ, ಮಡ್ ಏರಿಯಾ, ಸೋನಿಯಾ ಗಾಂಧಿ ಕಾಲೋನಿ, ಅಮಾನ್ ನಗರ, ಇತಿಹಾದ್ ಕಾಲೋನಿ, ರೆಹಮತ್ ನಗರ, ಗುಲಶನ್ ಅರಾಫತ್ ಕಾಲೋನಿ, ಅಬುಬಕರ ಕಾಲೋನಿ, ಸಹಾರಾ ಸ್ಕೂಲ್ ಕಾಲೋನಿ, ಗರಿಬ್ ನವಾಜ್ ಕಾಲೋನಿ ನವಾಬ ಮೊಹಲ್ಲಾ ಎಮ್ ಕೆ ನಗರ, ಆರಿಫಖಾನ್ ಲೇಔಟ್, ಸುಗಂಧಿ ಲೇಔಟ್, ಹಾಗರಗಾ ಕ್ರಾಸ್ ಏರಿಯಾ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು.

# ಪಾರ್ಕ್ ಕಾಮಗಾರಿ ಚುರುಕುಗೊಳಿಸಲು ತೀರ್ಮಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಮುಖ್ಯಮಂತ್ರಿಗಳು ಈ ಬಾರಿಯ ಆಯವ್ಯಯದಲ್ಲಿ ಘೋಷಿಸಿರುವಂತೆ ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ ಮಿತ್ರ ಜವಳಿ ಪಾರ್ಕ್' ಯೋಜನೆಯ ಕಾಮಗಾರಿಗಳನ್ನು ಅತ್ಯಂತ ವೇಗವಾಗಿ ಮುಗಿಸಲು ನಿರ್ಧರಿಸಲಾಯಿತು.

ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ರಾಜ್ಯದ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶಾಲಿನಿ ರಜನೀಶ್ ಅವರು ಕೈಮಗ್ಗ ಮತ್ತು ಜವಳಿ ಇಲಾಖೆ ಹಾಗೂ ಕೈಗಾರಿಕಾ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ನಡೆಸಿದ ಮಹತ್ವದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಆಯವ್ಯಯದ ಘೋಷಣೆಯನ್ನು ಕಾಲಮಿತಿಯಲ್ಲಿ ಜಾರಿಗೆ ತರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಸಭೆಯಲ್ಲಿ ಕೈಗಾರಿಕ ಹಾಗೂ ವಾಣಿಜ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್, ಜವಳಿ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬು ಘೋಯಲ್ ಚೌಧರಿ, ಜವಳಿ ಇಲಾಖೆಯ ಆಯುಕ್ತ ಕೆ.ಬಿ.ಬಸವರಾಜ್, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ ಹಾಗೂ ಇನ್ನಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.

**ಪರಿಷ್ಕೃತ ಯೋಜನಾ ವರದಿ (DPR) ಸಿದ್ಧತೆ:** ಕಲಬುರಗಿ ಪಾರ್ಕ್‌ನ ಬಾಹ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಒಳಗೊಂಡಂತೆ ಸಮಗ್ರ ಯೋಜನಾ ವರದಿಯನ್ನು (DPR) ತಕ್ಷಣವೇ ಪರಿಷ್ಕರಿಸಿ, ಭಾರತ ಸರ್ಕಾರದ ಯೋಜನಾ ಅನುಮೋದನೆ ಸಮಿತಿ (PAC) ಗೆ ಸಲ್ಲಿಸಲು ಕೈಮಗ್ಗ ಮತ್ತು ಜವಳಿ ಇಲಾಖೆಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

**ಭೂಮಿ ಹಂಚಿಕೆ ಮತ್ತು ಆಂತರಿಕ ಕಾಮಗಾರಿ:** ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (KIADB) ಮೂಲಕ ಪಾರ್ಕ್‌ನ ಮೊದಲ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ತಕ್ಷಣವೇ ಆರಂಭಿಸಲು ಸಭೆಯಲ್ಲಿ ಚರ್ಚಿಸಲಾಯಿತು. ಮೊದಲ ಹಂತದ ಯಶಸ್ವಿ ಅನುಷ್ಠಾನದ ನಂತರವಷ್ಟೇ, ಉದ್ಯೋಗ ಸೃಷ್ಟಿ ಮತ್ತು ಹೂಡಿಕೆ ಪ್ರಮಾಣವನ್ನು ಆಧರಿಸಿ ಎರಡನೇ ಹಂತದ ಅಭಿವೃದ್ಧಿಗೆ ಚಾಲನೆ ನೀಡಲು ಸಭೆ ನಿರ್ಧರಿಸಿತು ಎಂದೂ ಸಚಿವರು ವಿವರಗಳನ್ನು ನೀಡಿದ್ದಾರೆ.

ಕೇಂದ್ರ ಸರ್ಕಾರದ 'ಅಭಿವೃದ್ಧಿ ಬಂಡವಾಳ ಬೆಂಬಲ' (DCS) ಯೋಜನೆಯಡಿ ಒಟ್ಟು ಯೋಜನಾ ವೆಚ್ಚದ ಶೇ. 30 ರಷ್ಟು (ಗರಿಷ್ಠ ₹500 ಕೋಟಿ) ಧನಸಹಾಯ ಲಭ್ಯವಾಗಲಿದ್ದು, ಇದನ್ನು ಎರಡು ಹಂತಗಳಲ್ಲಿ ಬಳಸಿಕೊಳ್ಳಲಾಗುವುದು. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ, ಪಾರ್ಕ್‌ನ ಗೇಟ್‌ನಿಂದ ಹೊರಗಡೆ ನಡೆಯುವ ಬಾಹ್ಯ ಕಾಮಗಾರಿಗಳನ್ನು ಒಟ್ಟಾರೆ ಅನುದಾನದ ಅರ್ಹತೆಗಾಗಿ ಪರಿಗಣಿಸಬಹುದಾದರೂ, ಕೇಂದ್ರದ ನಿಜವಾದ ಧನಸಹಾಯವನ್ನು ಕೇವಲ ಪಾರ್ಕ್‌ನ ಒಳಗಿನ ಆಂತರಿಕ ಮೂಲಸೌಕರ್ಯಗಳಾದ ರಸ್ತೆ, ನೀರು, ವಿದ್ಯುತ್, ತ್ಯಾಜ್ಯ ನೀರು ಸಂಸ್ಕರಣಾ ಘಟಕ (CETP) ಮತ್ತು ವಸತಿ ನಿಲಯಗಳಿಗಾಗಿ ಬಳಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಕಲಬುರಗಿ ಜಿಲ್ಲೆಯ ಆರ್ಥಿಕ ಚಿತ್ರಣವನ್ನೇ ಬದಲಿಸಬಲ್ಲ ಮತ್ತು ಸಾವಿರಾರು ಜನರಿಗೆ ಉದ್ಯೋಗ ನೀಡಬಲ್ಲ ಈ ಬೃಹತ್ ಜವಳಿ ಪಾರ್ಕ್ ಯೋಜನೆಯ ಮೊದಲ ಕಂತಿನ ಹಣ ಬಿಡುಗಡೆಗೆ ಅನುವಾಗುವಂತೆ, ರಾಜ್ಯ ಅನುಷ್ಠಾನ ಸಂಸ್ಥೆಯು ಕನಿಷ್ಠ ₹25 ಕೋಟಿ ಹಣವನ್ನು ಭೌತಿಕ ಮೂಲಸೌಕರ್ಯಗಳಿಗಾಗಿ ವಿನಿಯೋಗಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಲಾಯಿತು ಎಂದೂ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ದುರಂತಕ್ಕೆ ಆಹ್ವಾನ ತುಕ್ಕು ಹಿಡಿದ ವಿದ್ಯುತ್ ಕಂಬ

• ಮಲ್ಲಮ್ಮ ನುಡಿ ವಾರ್ತೆ ಬೀದರ



ತಾಲ್ಲೂಕಿನ ಇಸ್ಲಾಂಪುರ ಗ್ರಾಮದ ಬಸವೇಶ್ವರ ವೃತ್ತದ ಹತ್ತಿರ ರಸ್ತೆ ಬದಿಯಲ್ಲಿರುವ ವಿದ್ಯುತ್ ಕಂಬವೊಂದು ಸಂಪೂರ್ಣವಾಗಿ ಜರ್ಜರಿತಗೊಂಡು, ಒಳಗಿನ ಕಬ್ಬಿಣದ ಕಂಬಿಗಳು ತುಕ್ಕು ಹಿಡಿದು ಎದ್ದು ಕಾಣಿಸುತ್ತಿವೆ. ಕಂಬದ ಕಾಂಕ್ರೀಟ್ ಭಾಗವು ಸಂಪೂರ್ಣವಾಗಿ ಉದುರಿ ಹೋಗಿದ್ದು, ಕಂಬವು ಅತ್ಯಂತ ದುರ್ಬಲ ಸ್ಥಿತಿಗೆ ತಲುಪಿದೆ. ಇಷ್ಟಾದರೂ ವಿದ್ಯುತ್ ಇಲಾಖೆಯ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿರುವುದು ಸಾರ್ವಜನಿಕರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಕಂಬದ ಬೇರು ಮಟ್ಟದಲ್ಲೇ ಕಾಂಕ್ರೀಟ್ ಶಕ್ತಿ ಕಳೆದುಕೊಂಡಿದೆ. ಕಂಬವು ದುರ್ಬಲಗೊಂಡಿದ್ದರಿಂದ ವಾಲಿ ಬಿದ್ದರೆ, ಅದರ ಮೇಲಿರುವ ಹೈ–ವೋಲ್ಟೇಜ್ ವಿದ್ಯುತ್ ತಂತಿಗಳು ರಸ್ತೆಯ ಮೇಲೆ ಹರಿದು ಬೀಳಲಿವೆ. ಇದು ಸಾರ್ವಜನಿಕರು ಅಥವಾ ಮೂಕ ಪ್ರಾಣಿಗಳ ಮೇಲೆ ಬಿದ್ದರೆ ತಕ್ಷಣದ ಪ್ರಾಣಹಾನಿ ನಿಶ್ಚಿತವಾಗಿದೆ. ಸಣ್ಣ ಗಾಳಿ–ಮಳೆ ಬಂದರೂ ಈ ಕಂಬ ಮುರಿದು ಬೀಳುವ ಎಲ್ಲಾ ಲಕ್ಷಣಗಳೂ ಕಾಣಿಸುತ್ತಿವೆ. ಇದು ಜನವಸತಿ ಪ್ರದೇಶವಾಗಿದ್ದರಿಂದ ಪ್ರತಿನಿತ್ಯ ಈ ಭಾಗದಲ್ಲಿ ನೂರಾರು ಜನರು ಮತ್ತು ವಾಹನ ಸವಾರರು ತಮ್ಮ ಜೀವ ಕೈಯಲ್ಲಿ ಹಿಡಿದು ಸಂಚರಿಸುತ್ತಿದ್ದಾರೆ. ಇತ್ತೀಚಿಗೆ ಗಾಳಿ–ಮಳೆ–ಹೆಚ್ಚಾಗುತ್ತಿರುವುದರಿಂದ ಕಂಬ ಬೀಳುಬ ಅಪಾಯವು ಹೆಚ್ಚಾಗಿದೆ.

**ಕಂಬ ಶಿಥಿಲಗೊಂಡಿದರಿಂದ ಓಣಿಯ ಜನರು ಜೀವ ಕೈಯಲ್ಲಿ ಹಿಡಿದು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಂಬದ ತಂತಿಗಳು ಈಗ ನಮ್ಮ ಮನೆಯ ಕಡೆ ವಾಲುತ್ತಿವೆ. ಇದರಿಂದಾಗಿ ದಿನಾಲು ಜೀವ ಭಯದಿಂದ ಜೀವನ ಸಾಗಿಸುವಂತಾಗಿದೆ. ಈ ಸಮಸ್ಯ ಆಲಿಸಿ ಜೆಸ್ಕಾಂ ಅಧಿಕಾರಿಗಳು ಕೂಡಲೇ ಈ ಕಂಬವನ್ನು ತೆರವುಗೊಳಿಸಬೇಕು.**

**–ದತ್ತಾತ್ರೇಯ ವಾಗಮೋರೆ, ಇಸ್ಲಾಂಪುರ ಗ್ರಾಮಸ್ಥರು**

**ಶಿಥಿಲಗೊಂಡ ಕಂಬವನ್ನು ತೆರವುಗೊಳಿಸುವಂತೆ ಸಾಕಷ್ಟು ಬಾರಿ ಜೆಸ್ಕಾಂ ಅಧಿಕಾರಿಗಳಿಗೆ ಮನವಿ ಮಾಡಿದರು ಅವರು ಪೊಳ್ಳು ಭರವಸೆ ನೀಡುತ್ತಿದ್ದಾರೆ ಹೊರತು ಸಮಸ್ಯೆಗೆ ಪರಿಹಾರ ಒದಗಿಸುತ್ತಿಲ್ಲ. ಈಗಾಗಲೇ ಕಂಬದ ಸಮೇತ ಒಂದು ಬಾರಿ ಸ್ಥಳಕ್ಕೆ ಬಂದು ಕಂಬಕ್ಕಾಗಿ ತೆಗ್ಗವನ್ನು ಕೊರೆದು ಬೇರೆ ಕಡೆ ಕೆಲಸವಿದೆ ಎಂದು ಹೇಳಿ ಅರ್ಧಕ್ಕೆ ಕೆಲಸ ನಿಲ್ಲಿಸಿ ಕಂಬವನ್ನು ತೆಗೆದುಕೊಂಡು ಹೋಗಿದ್ದಾರೆ. ತದನಂತರ ಸುಮಾರು ಹದಿನೈದು ದಿನ ಕಳೆದರು ಈ ಕಡೆ ತಿರುಗಿನೋಡಿಲ್ಲ. ಜೇಸ್ಕಾಂ ಅಧಿಕಾರಿಗಳು ಹೆಣ ಬೀಳುವವರೆಗೂ ಕಾಯುತ್ತಿದ್ದಾರೆಯೇ.? ನನಗಂತೂ ತಿಳಿಯುತ್ತಿಲ್ಲ. ಉನ್ನತ ಮಟ್ಟದ ಅಧಿಕಾರಿಗಳು ಗಮನ ಹರಿಸಿ ಶಿಥಿಲಗೊಂಡ ಕಂಬವನ್ನು ತೆರವುಗೊಳಿಸಬೇಕು. ತೆರವುಗೊಳಿಸುವ ಮುನ್ನ ಅನಾಹುತ ಸಂಭವಿಸಿದರೆ ಅದಕ್ಕೆ ಜೆಸ್ಕಾಂ ಅಧಿಕಾರಿಗಳೇ ಜವಾಬ್ದಾರರು.**

**–ಚಂದ್ರಕಾಂತ್ ಮಡಿವಾಳ, ಇಸ್ಲಾಂಪುರ ಗ್ರಾಮಸ್ಥರು**

# ಮನೆ ಕುಸಿತ ಸಂತ್ರಸ್ತ ಕುಟುಂಬಕ್ಕೆ ಶಾಸಕ ನೆರವು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಬಂಡಿಹಟ್ಟಿ ಮುಖ್ಯರಸ್ತೆಯ ಬಂದರ್ ಶಾ ಬಾಬಾ ದರ್ಗಾ ಸಮೀಪ ಭಾರೀ ಮಳೆಯಿಂದ ಮನೆ ಕುಸಿದು ಸಂಕಷ್ಟಕ್ಕೆ ಸಿಲುಕಿದ್ದ ಕುಟುಂಬಕ್ಕೆ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಃ. ಓಚಿರಿಜಟಿಜಡಿಚಿ ಮಾನವೀಯ ನೆರವಿನ ಕೈಚಾಚಿದ್ದಾರೆ.

ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ವಾರ್ಡ್ 30ರಲ್ಲಿರುವ ಮನೆ ಏಕಾಏಕಿ ಕುಸಿದು ಬಿದ್ದ ಪರಿಣಾಮ ಕುಟುಂಬದ ಸದಸ್ಯರು ಭಯಭೀತರಾಗಿದ್ದು, ಮನೆಯಲ್ಲಿದ್ದ ಗೃಹೋಪಯೋಗಿ ವಸ್ತುಗಳು ಹಾನಿಗೊಳಗಾಗಿವೆ. ಮನೆ ಕಳೆದುಕೊಂಡ ಕುಟುಂಬ ತಾತ್ಕಾಲಿಕ ಆಶ್ರಯದಲ್ಲಿ ದಿನ ಕಳೆಯುವಂತ ಪರಿಸ್ಥಿತಿ ನಿರ್ಮಾಣವಾಗಿತ್ತು.

ಸಂತ್ರಸ್ತ ಕುಟುಂಬದ ದುಸ್ಥಿತಿಯ ಮಾಹಿತಿ ತಿಳಿದ ತಕ್ಷಣ ಶಾಸಕ ನಾಗೇಂದ್ರ ಅವರು ಸ್ಪಂದಿಸಿ ಆರ್ಥಿಕ ನೆರವು ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ತಮ್ಮ ಇತರ ಕಾರ್ಯಕ್ರಮಗಳಲ್ಲಿ ನಿರತರಾಗಿದ್ದ ಹಿನ್ನೆಲೆಯಲ್ಲಿ ಅವರ ಪರವಾಗಿ ಬೆಂಬಲಿಗರು ಸ್ಥಳಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಚೆಕ್ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬೆಂಬಲಿಗರು, "ಮಳೆ ಹಾನಿಯಿಂದ ಸಂಕಷ್ಟದಲ್ಲಿರುವ ಜನರ ನೆರವಿಗೆ ಶಾಸಕ ನಾಗೇಂದ್ರ ಅವರು ಸದಾ ಸ್ಪಂದಿಸುತ್ತಾರೆ. ಸಂತ್ರಸ್ತ ಕುಟುಂಬಕ್ಕೆ ತುರ್ತು ನೆರವು ಒದಗಿಸುವ ಉದ್ದೇಶದಿಂದ ಆರ್ಥಿಕ ಸಹಾಯ ನೀಡಲಾಗಿದೆ" ಎಂದು ಹೇಳಿದರು.

ಸ್ಥಳೀಯ ನಿವಾಸಿಗಳು ಕೂಡ ಶಾಸಕ ನಾಗೇಂದ್ರ ಅವರ ನೆರವಿನ ಕಾರ್ಯವನ್ನು ಮೆಚ್ಚುಗೆ ವ್ಯಕ್ತಪಡಿಸಿದರು. "ಮನೆ ಕುಸಿತದಿಂದ ಕುಟುಂಬ ತೀವ್ರ ಆತಂಕಕ್ಕೆ ಒಳಗಾಗಿತ್ತು. ಇಂತಹ ಸಂದರ್ಭದಲ್ಲಿ ಜನಪ್ರತಿನಿಧಿಗಳು ಸ್ಪಂದಿಸಿರುವುದು ಧೈರ್ಯ ತುಂಬುವ ಕೆಲಸವಾಗಿದೆ" ಎಂದು ಹೇಳಿದರು.

ಮಳೆ ಹಾನಿಯಿಂದ ನಗರದಲ್ಲಿ ಹಲವು ಪ್ರದೇಶಗಳಲ್ಲಿ ಮನೆಗಳಿಗೆ ಹಾನಿಯಾಗಿರುವುದರಿಂದ ಸರ್ಕಾರ ಮತ್ತು ಸ್ಥಳೀಯ ಆಡಳಿತ ಮತ್ತಷ್ಟು ಪರಿಹಾರ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹವೂ ಸಾರ್ವಜನಿಕ ವಲಯದಿಂದ ಕೇಳಿಬರುತ್ತಿದೆ.

# ಹಲ್ಲೆ: ಪ್ರತಿಭಟನೆ, ಏಳು ಜನ ಆರೋಪಿಗಳ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಬೀದರ್




ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬ್ರಿಮ್ಸ್) ವೈದ್ಯನ ಮೇಲೆ ಕ್ಷುಲ್ಲಕ ಕಾರಣಕ್ಕೆ ಮಾರಣಾಂತಿಕ ಹಲ್ಲೆ ನಡೆಸಿದ 7 ಜನ ಯುವಕರನ್ನು ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ.

ಬೀದರ್ ತಾಲ್ಲೂಕಿನ ತಾಜಲಾಪುರ ಗ್ರಾಮದ ಆದಿತ್ಯ ಕೃಷ್ಣಾಜಿ ಗುಮ್ಮಳ (21), ಚಾಂಬೋಳ ಗ್ರಾಮದ ವಿನೋದ್ ಬಸವರಾಜ ಕೋಳಿ (26), ಬೆನಕನಳ್ಳಿಯ ಗೋವಿಂದ್ ಕೇಶವರಾವ್ ಚವಾಣ್ (28), ಮಹಾದೇವ್ ಚತ್ರಭುಜ ಚವಾಣ್ (23) ಹಾಗೂ ಮಹಾರಾಷ್ಟ್ರದ ಲಾತೂರ್ ಜಿಲ್ಲೆಯ ಅಹಮ್ಮದಪುರದ ಅನಿಲ್ ದಿಲೀಪ್ ಕಚವೆ (25) ಹಾಗೂ ತಾಜಲಾಪುರದ ಬಾಲಾಜಿ ಮತ್ತು ಚಾಂಬೋಳ್ ಗ್ರಾಮದ ಪವನ್ ಬಂಧಿತರು.

ಬೀದರ್ ತಾಲ್ಲೂಕಿನ ತಾಜಲಾಪುರದ ಬಾಲಾಜಿ, ಚಾಂಬೋಳ್ ಗ್ರಾಮದ ಪವನ್ ಹಾಗೂ ಇನ್ನಿತರರ ಪತ್ತೆ ಕಾರ್ಯ ನಡೆದಿದೆ. ಹಲ್ಲೆಗೊಳಗಾದ ಬ್ರಿಮ್ಸ್ ವೈದ್ಯ ಡಾ. ತುಕಾರಾಮ ಮಚೆಂದರ್ ಎಂಬುವರು ಕೊಟ್ಟಿರುವ ದೂರು ಆಧರಿಸಿ ಬಂಧಿಸಲಾಗಿದೆ. ಈ ಸಂಬಂಧ ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ಏನು ಎಂದು ಬೆನಕನಳ್ಳಿ ಗ್ರಾಮದ ವಿಜಯಸಿಂಗ್ ತುಕಾರಾಮ ಚವಾಣ್ ಬೈಕ್‌ನಿಂದ ಬಿದ್ದು ಗಾಯಗೊಂಡಿದ್ದರು. ಗುರುವಾರ (ಮೇ 21) ರಾತ್ರಿ 12.30ರಿಂದ 1 ಗಂಟೆ ಸುಮಾರಿಗೆ ಅವರನ್ನು ಬ್ರಿಮ್ಸ್‌ಗೆ ಕರೆತರಲಾಗಿತ್ತು. ಕರ್ತವ್ಯದಲ್ಲಿದ್ದ ಡಾ. ತುಕಾರಾಮ ಮಚೆಂದರ್ ಅವರು ಗಾಯಾಳುವಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ, ಸ್ಕ್ಯಾನಿಂಗ್‌ಗೆ ಕಳಿಸಿದ್ದಾರೆ.

ಸ್ಕ್ಯಾನಿಂಗ್‌ನವರು ವೈದ್ಯರಿಂದ ಚೀಟಿ ಮೇಲೆ ಎಂಎಲ್‌ಸಿ ಎಂದು ಬರೆಸಿಕೊಳ್ಳುವಂತೆ ವಿಜಯ್‌ಸಿಂಗ್ ಅವರೊಂದಿಗಿದ್ದ ಅವರ ಗೆಳೆಯರಿಗೆ ಹೇಳಿದ್ದಾರೆ. ಅವರೆಲ್ಲ ವೈದ್ಯರ ಬಳಿಗೆ ಹೋಗಿ ಎಂಎಲ್‌ಸಿ ಏಕೆ ಬರೆದುಕೊಟ್ಟಿಲ್ಲ ಎಂದು ಪ್ರಶ್ನಿಸಿದ್ದಾರೆ. ಇದು ತೀರ ಸಣ್ಣ ಪ್ರಮಾಣದ ಗಾಯ ಇರುವುದರಿಂದ ಎಂಎಲ್‌ಸಿ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

ಏನೇನೋ ಹೇಳಿ ನಮಗೆ ಸತಾಯಿಸುತ್ತಿದ್ದೀರಿ. ಚಿಕಿತ್ಸೆಗೆ ವಿಳಂಬ ಮಾಡುತ್ತಿದ್ದೀರಿ ಎಂದು ಹೇಳಿ ವೈದ್ಯ ತುಕಾರಾಮ ಅವರನ್ನು ವಿಜಯಸಿಂಗ್ ಸ್ನೇಹಿತರೆಲ್ಲ ಸೇರಿಕೊಂಡು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಆಸ್ಪತ್ರೆಯ ಸಿಬ್ಬಂದಿ ಬಂದು ಜಗಳ ಬಿಡಿಸಿದ್ದಾರೆ. ಈ ವೇಳೆ ಭದ್ರತಾ ಸಿಬ್ಬಂದಿ ಇರಲಿಲ್ಲ. ಯುವಕರೆಲ್ಲ ಕುಡಿದ ಮತ್ತಿನಲ್ಲಿದ್ದರು ಎಂದು ಗೊತ್ತಾಗಿದೆ. ಗಂಭೀರವಾಗಿ ಗಾಯಗೊಂಡ ತುಕಾರಾಮ ಅವರಿಗೆ ಚಿಕಿತ್ಸೆ ನೀಡಲಾಯಿತು ಎಂದು ಆಸ್ಪತ್ರೆಯ ಮೂಲಗಳು ತಿಳಿಸಿವೆ.

**ಆಸ್ಪತ್ರೆ ಮುಂದೆ ವೈದ್ಯರ ಪ್ರತಿಭಟನೆ:** ಆಸ್ಪತ್ರೆಯ ವೈದ್ಯ ಡಾ.ತುಕಾರಾಮ ಮಚೆಂದರ್ ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ವಿಷಯ ತಿಳಿದು ಕಿರಿಯ ವೈದ್ಯರು ಬ್ರಿಮ್ಸ್ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು. ಹಲ್ಲೆ ನಡೆಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಬ್ರಿಮ್ಸ್‌ನಲ್ಲಿ ಭದ್ರತೆ ಹೆಚ್ಚಿಸಬೇಕೆಂದು ಹಕ್ಕೊತ್ತಾಯ ಮಾಡಿದರು.

ಸ್ಥಳಕ್ಕಾಗಮಿಸಿದ ಬ್ರಿಮ್ಸ್ ನಿರ್ದೇಶಕಿ ಡಾ. ಶಾಂತಲಾ ಕೌಜಲಗಿ, ವೈದ್ಯರ ಮನವಿ ಆಲಿಸಿದರು. ಬ್ರಿಮ್ಸ್‌ಗೆ ಹೆಚ್ಚಿನ ಭದ್ರತೆ ಕಲ್ಪಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಮನವಿ ಸಲ್ಲಿಸಲಾಗುವುದು. ನಮ್ಮ ವೈದ್ಯರ ಮೇಲಿನ ಹಲ್ಲೆ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಭವಿಷ್ಯದಲ್ಲಿ ಇಂಥ ಘಟನೆ ಮರುಕಳಿಸದಂತೆ ಅಗತ್ಯ ಕ್ರಮ ಜರುಗಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಜಿಲ್ಲಾಧಿಕಾರಿ ಆಗಮಿಸಬೇಕು ಎಂದು ವೈದ್ಯರು ಪಟ್ಟು ಹಿಡಿದಿದರು.

# ಡಿಕೆ ಸುಪರ್ ಮಾರ್ಟ್ ಉದ್ಘಾಟನೆ ಇಂದು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಇಲ್ಲಿಯ ಚನ್ನಬಸವೇಶ್ವರ ಕಾಲೇಜು ಎದುರುಗಡೆ ಡಿಕೆ ಸೂಪರ್ ಮಾರ್ಟ್ ಶನಿವಾರ ಸಾಯಂಕಾಲ 5 ಗಂಟೆಗೆ ಉದ್ಘಾಟನೆಗೊಳ್ಳಲಿದೆ.

ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಈ ಡಿಕೆ ಮಾರ್ಟ್ ಉದ್ಘಾಟಿಸಲಿದ್ದಾರೆ.

ಭಾತಂಬ್ರಾ ಜಗದ್ಗುರು ನಿರಂಜನ ಸಂಸ್ಥಾನ ಮಠದ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ, ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ, ಭಾಲ್ಕಿಯ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು, ಮೆಹಕರ್–ತಡೋಳಾ ಗುರು ರಾಚೋಟೇಶ್ವರ ಮಠದ ರಾಜೇಶ್ವರ ಶಿವಾಚಾರ್ಯ, ಹಲಬರ್ಗಾ ರಾಚೋಟೇಶ್ವರ ಮಠದ ಹಾವಗಿಲಿಂಗೇಶ್ವರ ಶಿವಾಚಾರ್ಯ ದಿವ್ಯ ಸಮ್ಮುಖ ವಹಿಸಲಿದ್ದಾರೆ. ಡಾ.ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ, ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಡಿ.ಕೆ.ಗಣಪತಿ, ವಿಜಯಲಕ್ಷ್ಮಿ ಅಣ್ಣಾರಾವ ದೇಶಮುಖ, ಡಾ.ಮಹಾಲಕ್ಷ್ಮಿ ಲಖನ್ ಬಡೂರೆ, ಬ್ರಹ್ಮಾನಂದ ದೇಶಮುಖ, ಮಲ್ಲಪ್ಪ ದೇಶಮುಖ ಸೇರಿದಂತೆ ಹಲವರು ಭಾಗಿಯಾಗಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಾಯಿಗಾಂವ ಶ್ರೀಗಳಿಗೆ ಸೈಂಟಿಫಿಕ್ ಸಮಿಟ್ ಫೆಲೋಶಿಪ್ ಪ್ರಶಸ್ತಿ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ಗಡಿಭಾಗದ ಸಾಯಿಗಾಂವ ಗ್ರಾಮದ ಗುರುಬಸವೇಶ್ವರ ವಿರಕ್ತ ಮಠದ ಪೀಠಾಧಿಪತಿ ಶಿವಾನಂದ ಸ್ವಾಮೀಜಿ ಅವರಿಗೆ 2026ನೇ ಸಾಲಿನ ಇಂಡೋ ನಾಮ್ ಸೈಂಟಿಫಿಕ್ ಸಮಿಟ್ ಫೆಲೋಶಿಪ್ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ವಿಯೆಟ್ನಾಂನಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ವತಿಯಿಂದ ಶುಕ್ರವಾರ ನಡೆದ ಇಂಡೋ–ವಿಯೆಟ್ನಾಂ ಅಂತರರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನದಲ್ಲಿ ಈ ಫೆಲೋಶಿಪ್ ಪ್ರದಾನ ಮಾಡಲಾಗಿದೆ.

> ವಿಯೆಟ್ನಾಂ ದೇಶದಲ್ಲಿ ನಡೆದ ಇಂಡೋ–ವಿಯೆಟ್ನಾಂ ಅಂತರರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನದಲ್ಲಿ ತಮ್ಮ ಸೇವೆಯನ್ನು ಗುರುತಿಸಿ ನೀಡಿರುವ 2026ನೇ ಸಾಲಿನ ಇಂಡೋ ನಾಮ್ ಸೈಂಟಿಫಿಕ್ ಸಮಿಟ್ ಫೆಲೋಶಿಪ್ ಪ್ರಶಸ್ತಿಯನ್ನು ಭಕ್ತರಿಗೆ ಸಮರ್ಪಿಸುತ್ತೇನೆ. ಈ ಪುರಸ್ಕಾರದಿಂದ ಜವಾಬ್ದಾರಿ ಮತ್ತಷ್ಟು ಹೆಚ್ಚಿದೆ.
>
> **– ಶಿವಾನಂದ ಸ್ವಾಮೀಜಿ ಗುರುಬಸವೇಶ್ವರ ಮಠ ಸಾಯಿಗಾಂವ**

ಗಡಿಭಾಗದಲ್ಲಿ ಪರಮ ಪೂಜ್ಯರು ಕಳೆದ ಎರಡು ದಶಕಗಳಿಂದ ಬಸವತತ್ವ ಪ್ರಚಾರ ಪ್ರಸಾರ ಕೈಗೊಂಡು ಮೂಢನಂಬಿಕೆ ವಿರುದ್ಧ ಜಾಗೃತಿ ಮೂಡಿಸುತ್ತಿದ್ದಾರೆ. ಜತೆಗೆ ಧಾರ್ಮಿಕ, ಸಮಾಜ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸುತ್ತಿದ್ದಾರೆ.

ಇಂತಹ ವಿಶಿಷ್ಟ ಸೇವೆಯನ್ನು ಗುರುತಿಸಿ ಪರಮ ಪೂಜ್ಯರಿಗೆ ವಿದೇಶದಲ್ಲಿ ಅಂತರರಾಷ್ಟ್ರೀಯ ಮಟ್ಟದ ಸೈಂಟಿಫಿಕ್ ಸಮಿಟ್ ಫೆಲೋಶಿಪ್ ನೀಡಿ, ಗೌರವಿಸಲಾಗಿದೆ.

# ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಅಹ್ವಾನ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಸಮಾಜ ಕಲ್ಯಾಣ ಇಲಾಖೆಯ ಹುಮನಾಬಾದ/ಚಿಟಗುಪ್ಪಾ ತಾಲೂಕಿನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ/ಮೆಟ್ರಿಕ ನಂತರ ಬಾಲಕರ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕಾಗಿ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಆದ್ದರಿಂದ ಆಸಕ್ತ 5ನೇ ತರಗತಿಯಿಂದ 10ನೇ ತರಗತಿಯವರೆಗೆ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಶಾಲೆಗಳ ಸಮೀಪವಿರುವ ವಸತಿ ನಿಲಯದಲ್ಲಿ ಪ್ರವೇಶಕ್ಕಾಗಿ ಹಾಗೂ ಮೆಟ್ರಿಕ ನಂತರದ ವಸತಿ ನಿಲಯಗಳಿಗೆ ಪಿ.ಯು.ಸಿ. ಪದವಿ, ಹಾಗೂ ತಾಂತ್ರಿಕ್ ಕೋರ್ಸಗಳಲ್ಲಿ ಅಭ್ಯಾಸ ಮಾಡುತ್ತಿರುವ ವಸತಿ ನಿಲಯ ಇಚ್ಛೆವುಳ್ಳ https://swdhmis.karnataka.gov.in/ಪೋರ್ಟಲ್ ಮೂಲಕ ಮೆಟ್ರಿಕ ಪೂರ್ವ ವಸತಿ ನಿಲಯಗಳಿಗೆ ಜೂನ್ 30 ಮತ್ತು ಮೆಟ್ರಿಕ ನಂತರದ ವಸತಿ ನಿಲಯಗಳಿಗೆ ಜುಲೈ 31ರ ವರೆಗೆ ಅರ್ಜಿಗಳನ್ನು ಸಲ್ಲಿಸಿ ಆನಲೈನ್ ಸ್ವೀಕೃತಿ ಪ್ರತಿಯನ್ನು ಅಗತ್ಯ ದಾಖಲೆಗಳೊಂದಿಗೆ ಲಗತ್ತಿಸಿ ಪ್ರವೇಶ ಬಯಸುವ ವಸತಿ ನಿಲಯಗಳಿಗೆ ನೇರವಾಗಿ ದಾಖಲಾತಿಗಳನ್ನು ಸಲ್ಲಿಸಬೇಕು ಇಂತಾ ಸುವರ್ಣಾವಕಾಶವನ್ನು ಮಕ್ಕಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ನಿಂಗರಾಜ್ ಅರಸ್ ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ ಹುಮನಾಬಾದ ರವರು ಪ್ರಕಟಣೆಯಲ್ಲಿ ತಿಳಿಸಿದರು.

# ಜೆಇಇ ಮೇನ್ಸ ರೀಕ್ಷೆಯಲ್ಲಿ ಪ್ರಿಯಾಗೆ ಉತ್ತಮ ಅಂಕ : ಕಸಾಪ ವತಿಯಿಂದ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಭಾರತದ ಟಾಪ್ ಇಂಜನೀಯರಿಂಗ್ ಕಾಲೇಜುಗಳಾದ ಐಐಟಿ, ಎನ್ ಆಯ್ ಟಿ, ಐಐಐಟಿಗೆ ಸೇರೋಕೆ ಇರುವ ರಾಷ್ಟ್ರ ಮಟ್ಟದ ಜೆಇಇ ಮೇನ್ ಪರೀಕ್ಷೆಯಲ್ಲಿ ಪಟ್ಟಣದ ಶಿಕ್ಷಕ ಭೀಮರಾಯ್ ವ್ಹಿ. ಚಕ್ರಮನಿ ಅವರ ಪುತ್ರಿ ಹುಬ್ಬಳ್ಳಿಯ ಚೇತನಾ ಪಿಯು ಕಾಲೇಜಿನ ವಿದ್ಯಾರ್ಥಿನಿ ಪ್ರಿಯಾ ಶೇ. 86.30 ಅಂಕ ಗಳಿಸಿ, ದೇಶಕ್ಕೆ 58000 ನೇ ಸ್ಥಾನ ಗಳಿಸಿದ ಹಿನ್ನಲೆಯಲ್ಲಿ ಪಟ್ಟಣದ ಅವರ ನಿವಾಸದಲ್ಲಿ ತಂದೆ ತಾಯಿಯೊಂದಿಗೆ ಶುಕ್ರವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ತಾಲೂಕಾ ಅಧ್ಯಕ್ಷ ಶಿವಾನಂದ ಈ ಡೋಣುರ ಪರೀಕ್ಷೆಯಲ್ಲಿ ಅದ್ಭುತ ಸಾಧನೆ ಮಾಡಿ ಹೆಮ್ಮೆ ತಂದಿದ್ದಾಳೆ.ನಿನ್ನ ಕಠಿಣ ಪರಿಶ್ರಮಕ್ಕೆ ಸಿಕ್ಕ ಫಲ ಇದು.

# ಎಸ್. ಎಸ್. ಎಲ್. ಸಿ. ಮರುಮೌಲ್ಯಮಾಪನದಲ್ಲಿ ಲಿಟಲ್ ಹಾರ್ಟ್ಸ್‌ನ ನವ್ಯ ಕುಲಕರ್ಣಿ ಗಂಗಾವತಿ ಟಾಪರ್

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

2025–26 ನೇ ಸಾಲಿನ ಎಸ್. ಎಸ್. ಎಲ್.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಪಡೆದ ಅಂಕಗಳಿಗೆ ತೃಪ್ತಿ ಹೊಂದದ ಹಲವಾರು ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದರು. ಮರುಮೌಲ್ಯಮಾಪನದ ಅಂಕಗಳು ಈ ದಿನ ಪ್ರಕಟವಾಗಿದ್ದು ನಮ್ಮ ಲಿಟಲ್ ಹಾರ್ಟ್ಸ್ ಸ್ಕೂಲ್‌ನ ಏಳು ವಿದ್ಯಾರ್ಥಿಗಳು ಹೆಚ್ಚುವರಿ ಅಂಕಗಳನ್ನು ಪಡೆದಿದ್ದಾರೆ ಎಂದು ತಿಳಿಸಲು ಸಂತೋಷವೆನಿಸುತ್ತಿದೆ. ಅದರಲ್ಲಿ ಈ ಮೊದಲು 625 ಕ್ಕೆ 612 ಅಂಕಗಳನ್ನು ಪಡೆದಿದ್ದ ಕುಮಾರಿ *ನವ್ಯ ಕುಲಕರ್ಣಿ* ಇಂಗ್ಲೀಷ್ ವಿಷಯದಲ್ಲಿ 5 ಹೆಚ್ಚುವರಿ ಅಂಕಗಳನ್ನು ಪಡೆದು 617 ಅಂಕಗಳೊಂದಿಗೆ ಗಂಗಾವತಿಗೆ *ಮೊದಲನೇ ಟಾಪರ್ ಆಗಿ ಹೊರಹೊಮ್ಮಿದ್ದಾಳೆ.*ಅದೇರೀತಿ ಸಮನ ಸಿದ್ಧಾಂತಿ ಇಂಗ್ಲೀಷ್ ವಿಷಯದಲ್ಲಿ 5 ಹೆಚ್ಚುವರಿ ಅಂಕಗಳನ್ನು ಪಡೆದು 610 ಅಂಕಗಳೊಂದಿಗೆ 97.6%, ಸ್ನೇಹ ತಾಂಡ್ಲೆ 5 ಹೆಚ್ಚುವರಿ ಅಂಕಗಳನ್ನು ಪಡೆದು 602 ಅಂಕಗಳೊಂದಿಗೆ 96.32%, ಪ್ರಥಮ್



ಗೌಡ ಹಿಂದಿ ವಿಷಯದಲ್ಲಿ 5 ಹೆಚ್ಚುವರಿ ಅಂಕಗಳನ್ನು ಪಡೆದು 598 ಅಂಕಗಳೊಂದಿಗೆ 95.68%, ಸೃಷ್ಟಿ ಸಜ್ಜನ್ ಇಂಗ್ಲೀಷ್ ನಲ್ಲಿ 5 ಅಂಕಗಳು ಮತ್ತು ಕನ್ನಡದಲ್ಲಿ 1 ಅಂಕವನ್ನು ಹೆಚ್ಚುವರಿಯಾಗಿ ಪಡೆದು 594 ಅಂಕಗಳೊಂದಿಗೆ 95.04%, ಆರ್ ಜೀವಿತಾ ಗಣಿತದಲ್ಲಿ 5 ಅಂಕಗಳನ್ನು, ವಿಜ್ಞಾನದಲ್ಲಿ 2 ಅಂಕಗಳನ್ನು ಮತ್ತು ಸಮಾಜ ವಿಜ್ಞಾನದಲ್ಲಿ 5 ಅಂಕಗಳನ್ನು ಹೆಚ್ಚುವರಿಯಾಗಿ ಪಡೆದು 580 ಅಂಕಗಳೊಂದಿಗೆ 92.8% ಮತ್ತು ತನುಶ್ರೀ ಹಿಂದಿಯಲ್ಲಿ 7 ಅಂಕಗಳನ್ನು ಹೆಚ್ಚುವರಿಯಾಗಿ ಪಡೆದು 568 ಅಂಕಗಳೊಂದಿಗೆ 90.88% ಪಡೆಯುವುದರ ಮುಖಾಂತರ ಅವರ ವೈಯಕ್ತಿಕ ಪರ್ಸಂಟೇಜ್ ಹೆಚ್ಚು ಮಾಡಿಕೊಳ್ಳುವುದರ ಜೊತೆಗೆ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಈ ಎಲ್ಲಾ ಮಕ್ಕಳಿಗೆ ಹಾಗೂ ಶಿಕ್ಷಕ/ಕಿಯರಿಗೆ ಶಾಲೆಯ ಕಾರ್ಯದರ್ಶಿ ಜಗನ್ನಾಥ ಆಲಂಪಲ್ಲಿ ಹಾಗೂ ಮುಖ್ಯೋಪಾಧ್ಯಾಯನಿ ಶ್ರೀಮತಿ ಪ್ರಿಯಾಕುಮಾರಿ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಗುಣಮಟ್ಟದಲ್ಲಿ ಲೋಪವಾದರೆ ಸಹಿಸುವುದಿಲ್ಲ: ಶಾಸಕ ಪ್ರಭು ಚವ್ಹಾಣ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಶುಕ್ರವಾರ ಔರಾದ ವಿಧಾನ ಸಭಾ ವ್ಯಾಪ್ತಿಯ ಕಮಲನಗರ ತಾಲೂಕಿನ ಹಲವು ಗ್ರಾಮಗಳಲ್ಲಿ ಸಂಚರಿಸಿ ಸುಮಾರು 7.5 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಸಾವರಗಾಂವ ಗ್ರಾಮದಲ್ಲಿ 30 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿ, ಬಾವಲಗಾಂವದಲ್ಲಿ 70 ಲಕ್ಷ ರೂ. ವೆಚ್ಚದ ಕೆರೆ ದುರಸ್ತಿ ಕಾಮಗಾರಿ, ಹೊಕ್ರಾಣಾದಲ್ಲಿ 50 ಲಕ್ಷ ರೂ. ವೆಚ್ಚದ ಪ್ರಾಥಮಿಕ ಉಪ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣ, ನಂದಿ ಬಿಜಲಗಾಂವದಲ್ಲಿ 40 ಲಕ್ಷ ರೂ. ವೆಚ್ಚದ ಬ್ರಿಜ್ ಕಂ ಬ್ಯಾರೇಜ್ ಕಾಮಗಾರಿ, 32 ಲಕ್ಷ ರೂ. ವೆಚ್ಚದ ಗ್ರಾಮ ವಿಕಾಸ ಯೋಜನೆಯ ಕಾಮಗಾರಿ, ನಾರಾಯಣಪೂರ ಗ್ರಾಮದಲ್ಲಿ ನಾರಾಯಾಣಪೂರದಿಂದ ಅಲ್ಲಾಪೂರವರೆಗೆ 5 ಕೋಟಿ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿ, ಬೋಂತಿ ಗ್ರಾಮದಲ್ಲಿ 30 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿ, ಸಾರ್ವಜನಿಕರ ಅನುಕೂಲಕ್ಕಾಗಿ ಮಹತ್ವದ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಎಲ್ಲ ಕಾಮಗಾರಿಗಳು ನಿಗದಿತ ಅವಧಿಯೊಳಗಾಗಿ ಮತ್ತು ಗುಣಮಟ್ಟದಿಂದ ಪೂರ್ಣಗೊಳಿಸಬೇಕು. ಮುಂದಿನ ದಿನಗಳಲ್ಲಿ ಕಾಮಗಾರಿಯ ಬಗ್ಗೆ ಯಾವುದೇ



ರೀತಿಯ ದೂರುಗಳು ಬಾರದ ಹಾಗೆ ಕೆಲಸ ಮಾಡಬೇಕು. ಸಾರ್ವಜನಿಕರು ಕೂಡ ತಮ್ಮ ಗ್ರಾಮದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ನಿಗಾ ವಹಿಸಬೇಕು. ಕೆಲಸ ಸರಿಯಾಗಿ ಆಗುವಂತೆ ನೋಡಿಕೊಳ್ಳಬೇಕು. ಏನಾದರೂ ದೋಷಗಳು ಕಾಣಿಸಿದರೆ ನನ್ನ ಗಮನಕ್ಕೆ ತಂದರೆ ಸರಿಪಡಿಸುತ್ತೇನೆ ಎಂದು ಹೇಳಿದರು.

ರಸ್ತೆ ಕಾಮಗಾರಿ ಪರಿಶೀಲನೆ: ಯನಗುಂದಾದಿಂದ ಕರಂಜಿ(ಕೆ) ಸೋಪೂರ ಬಾರ್ಡರ್‌ವರೆಗೆ ನಡೆಯುತ್ತಿರುವ ರಸ್ತೆ ಕಾಮಗಾರಿಯ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ರಸ್ತೆ ಕಾಮಗಾರಿಯ ಗುಣಮಟ್ಟ, ಬಳಸಲಾಗುತ್ತಿರುವ ಸಾಮಗ್ರಿಗಳು ಹಾಗೂ ಕಾಮಗಾರಿ ಪ್ರಗತಿ ಕುರಿತು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದ ಮಾಹಿತಿ ಪಡೆದರು.

ಯನಗುಂದಾ, ಕರಂಜಿ(ಬಿ), ರಾಯಪಳ್ಳಿ, ನಾಗಮಾರಪಳ್ಳಿ ಕ್ರಾಸ್, ಚಿಂತಾಕಿ ಕ್ರಾಸ್, ಕರಂಜಿ(ಕೆ) ಗ್ರಾಮಗಳಿಗೆ ಅನುಕೂಲವಾಗುವ ಮಹತ್ವದ ರಸ್ತೆ ಇದಾಗಿದ್ದು, ಗುಣಮಟ್ಟದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ನಡೆಯಬಾರದು. ರಸ್ತೆಗೆ ಬಳಕೆ ಮಾಡುತ್ತಿರುವ ಕಲ್ಲು, ಜಲ್ಲಿ ಹಾಗೂ ಇನ್ನಿತರೆ ಉಪಕರಣಗಳು ಗುಣಮಟ್ಟದಿಂದ ಕೂಡಿರಬೇಕು. ಡಾಂಬರೀಕರಣ ಸರಿಯಾಗಿ ಮಾಡಬೇಕು. ಸಾರ್ವಜನಿಕರ ಹಣದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ನಿಯಮಾನುಸಾರ ಹಾಗೂ ಗುಣಮಟ್ಟದಿಂದ ಪೂರ್ಣಗೊಳಿಸಬೇಕು. ಕಾಮಗಾರಿಯ ಗುಣಮಟ್ಟದ ಕುರಿತು ಯಾವುದೇ ರೀತಿಯ ದೂರುಗಳು ಬಂದರೆ ಸುಮ್ಮನಿರುವುದಿಲ್ಲವೆಂದು ಶಾಸಕರು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದರು. ಇದೇ ವೇಳೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ಸಾಂತ್ವನ: ತೋರ್ಣಾ, ತೇಗಂಪೂರ, ಕರಂಜಿ(ಬಿ) ಹಾಗೂ ಮತ್ತಿತರೆ ಗ್ರಾಮಗಳಲ್ಲಿ ಇತ್ತೀಚೆಗೆ ನಿಧನರಾದವರ ಕುಟುಂಬಗಳಿಗೆ ಭೇಟಿ ನೀಡಿ ಸಾಂತ್ವನ ಹೇಳಿದರು. ತೋರ್ಣಾದಲ್ಲಿ ವೆಂಕಟ ನಾಗನಾಥ ಕೋಟೆ, ತೇಗಂಪೂರನಲ್ಲಿ ಪಾರ್ವತಿ ನಾಗಶೆಟ್ಟಿ ಮಜಗೆ, ಕರಂಜಿ(ಬಿ) ಗ್ರಾಮದ ಪದ್ಮಮ್ಮ ಬಸರೆಡ್ಡಿ ಪಾಟೀಲ ಅವರ ಮನೆಗೆ ತೆರಳಿ ಕುಟುಂಬಸ್ಥರಿಗೆ ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಮಾರುತಿ ಚವ್ಹಾಣ, ಸತೀಷ ಪಾಟೀಲ, ಶಿವರಾಜ ಅಲ್ಮಾಜೆ, ಮೃತ್ಯುಂಜಯ ಬಿರಾದಾರ, ರವೀಂದ್ರರೆಡ್ಡಿ, ರಾಮ ರೆಡ್ಡಿ, ಸುರೇಶ ಭೋಸ್ಲೆ, ಅರಹಂತ ಸಾವಳೆ, ಸುನೀಲ ಮೋರ್ಗೆ, ಉದಯ ಸೋಲಾಪೂರೆ, ಸಂಜು ಮುರ್ಕೆ, ವಿಲಾಸ ರಾಠೋಡ, ಜಗದೀಶ್ ಪಾಟೀಲ, ಅನೀಲ ಬಿರಾದಾರ, ವೀರಾ ರೆಡ್ಡಿ, ಬಸರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.22–ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಮೇ 24 ರಂದು ಭಾನುವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಗೆ ಆಗಮಿಸಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಮೇ 25 ರಂದು ಸೋಮವಾರ ಮಧ್ಯಾಹ್ನ 12.30 ಗಂಟೆಗೆ ಸೇಡಂ ತಾಲೂಕಿನ ಕಾಚೂರ ಗ್ರಾಮದಲ್ಲಿ ಜೆಸ್ಕಾಂ ವತಿಯಿಂದ ನೂತನವಾಗಿ ನಿರ್ಮಿಸಲಾದ 110/33/11ಕೆವಿ, 2 ಘಿ 20ಎಮ್.ವಿ.ಎ., 110/11ಕೆ.ವಿ., 20ಎಮ್‌ವಿಎ 11/33ಕೆ.ವಿ. ಕೆ.ಪಿ.ಟಿ.ಸಿ.ಎಲ್. ಸ್ಟೇಷನ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ2 ಗಂಟೆಗೆ ಸೇಡಂ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಸ್.ಸಿ.ಪಿ./ಟಿ. ಎಸ್.ಪಿ. ಯೋಜನೆಯಡಿ ಗ್ರಂಥಾಲಯ ಕಟ್ಟಡ ನಿರ್ಮಾಣ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸೆಮಿನಾರ್ ಹಾಲ್ ಮತ್ತು ಪ್ರಯೋಗಾಲಯಗಳ ನಿರ್ಮಾಣ ಕಾಮಗಾರಿಯ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮಧ್ಯಾಹ್ನ 2.30 ಗಂಟೆಗೆ ಸೇಡಂ ಬಸ್ ನಿಲ್ದಾಣ ಎದುರುಗಡೆಯಲ್ಲಿ ಜಿಲ್ಲಾಡಳಿತ ಕಲಬುರಗಿ, ನಗರಸಭೆ ಕಾರ್ಯಾಲಯ ಸೇಡಂ ವತಿಯಿಂದ 2024–25ನೇ ಸಾಲಿನ ನಗರೋತ್ಥಾನ ಹಂತ–4 ಪ್ರೋತ್ಸಾಹಧನ ಯೋಜನೆಯಡಿ ಸೇಡಂ ನಗರದ ವಿವಿಧ ವಾರ್ಡ್‌ಗಳಲ್ಲಿ ರಸ್ತೆ ಚರಂಡಿ ಮತ್ತು ನೀರು ಶುದ್ಧೀಕರಣ ಘಟಕ ಕಾಮಗಾರಿಯ ಅಡಿಗಲ್ಲು ಸಮಾರಂಭದಲ್ಲಿ ಭಾಗವಹಿಸುವರು.

# ರೈತರಿಗೆ ಸಮರ್ಪಕ ರಸಗೊಬ್ಬರ ಪೂರೈಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮುಂಗಾರು ಹಂಗಾಮಿನ ಬಿತ್ತನೆ ಕಾರ್ಯ ಆರಂಭವಾಗುತ್ತಿರುವ ಹಿನ್ನೆಲೆ ಜಿಲ್ಲೆಯ ರೈತರಿಗೆ ರಸಗೊಬ್ಬರ ಕೊರತೆ ಉಂಟಾಗದಂತೆ ಜಿಲ್ಲಾಡಳಿತ ತಕ್ಷಣ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಚಂದ್ರಕಾಂತ ಪಿ. ಓಗೆ ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಕಳೆದ ನಾಲ್ಕೈದು ವರ್ಷಗಳಿಂದ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ಜಿಲ್ಲೆಯ ರೈತರು ತೀವ್ರ ಸಂಕಷ್ಟ ಅನುಭವಿಸಿದ್ದು, ಬೆಳೆದ ಬೆಳೆ ಕೈಗೆಟುಕದೇ ರೈತರು ಆರ್ಥಿಕವಾಗಿ ಸಂಪೂರ್ಣ ಕುಸಿದಿದ್ದಾರೆ. ಇಂತಹ ಪರಿಸ್ಥಿತಿಯಲ್ಲೂ ರೈತರಿಗೆ ಸಮರ್ಪಕ ರಸಗೊಬ್ಬರ ಪೂರೈಕೆ ಮಾಡದಿದ್ದರೆ ಜಿಲ್ಲಾಡಳಿತದ ವಿರುದ್ಧ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಕಳೆದ ವರ್ಷ ಜಿಲ್ಲೆಯ ಹಲವು ಭಾಗಗಳಲ್ಲಿ ರೈತರು ರಸಗೊಬ್ಬರಕ್ಕಾಗಿ ಅಂಗಡಿಗಳ ಮುಂದೆ ಹಗಲು– ರಾತ್ರಿ ಸಾಲಿನಲ್ಲಿ ನಿಂತು ಪರದಾಡಿದ ಘಟನೆಗಳು ನಡೆದಿದ್ದವು. ಕೆಲ ರಸಗೊಬ್ಬರ ವ್ಯಾಪಾರಸ್ಥರು ಯೂರಿಯಾ ಗೊಬ್ಬರದ ಕೃತಕ ಅಭಾವ ಸೃಷ್ಟಿಸಿ ಕಾಳಬಜಾರ್ ನಡೆಸಿ ರೈತರನ್ನು ಸಂಕಷ್ಟಕ್ಕೆ ದೂಡಿದ್ದರು. ಈ ಬಾರಿ ಅಂತಹ ಘಟನೆಗಳು ಮರುಕಳಿಸದಂತೆ ಜಿಲ್ಲಾಡಳಿತ ಹಾಗೂ ಕೃಷಿ ಇಲಾಖೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಅವರು ಒತ್ತಾಯಿಸಿದರು. ಮುಂಗಾರು ಹಂಗಾಮಿಗೆ ಅಗತ್ಯವಿರುವ ಯೂರಿಯಾ, ಡಿಎಪಿ ಸೇರಿದಂತೆ ಎಲ್ಲ ವಿಧದ ರಸಗೊಬ್ಬರಗಳನ್ನು ಜಿಲ್ಲೆಯ ಎಲ್ಲ ಸಹಕಾರ ಸಂಘಗಳು ಹಾಗೂ ಖಾಸಗಿ ಅಂಗಡಿಗಳಲ್ಲಿ ಸಮರ್ಪಕವಾಗಿ ಮತ್ತು ನಿರಂತರವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಒಂದು ಎಫ್‌ಐಡಿ ಖಾತೆಯ 1 ಎಕರೆ ಭೂಮಿಗೆ ಒಂದು ತಿಂಗಳಿಗೆ ಒಂದೇ ಯೂರಿಯಾ ಚೀಲ ಎಂಬ ನಿಯಮದಿಂದ ರೈತರಿಗೆ ಅನ್ಯಾಯವಾಗುತ್ತಿದ್ದು, ಈ ನಿಯಮವನ್ನು ಕೂಡಲೇ ರದ್ದುಪಡಿಸಿ ರೈತರ ಅವಶ್ಯಕತೆಗೆ ಅನುಗುಣವಾಗಿ ಗೊಬ್ಬರ ವಿತರಣೆ ಮಾಡುವಂತೆ ಅವರು ಒತ್ತಾಯಿಸಿದರು.

# ಯುವನಿಧಿ ಫಲಾನುಭವಿಗಳಿಗೆ ಕೌಶಲ ಉದ್ಯಮಶೀಲತೆ ತರಬೇತಿ ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯುವನಿಧಿ ಯೋಜನೆಯಡಿಯಲ್ಲಿ ನೋಂದಣಿಯಾದ ಫಲಾನುಭವಿಗಳು ಕಡ್ಡಾಯವಾಗಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಪಡೆಯಬೇಕು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ ಹಾಗೂ ಯುವತಿಯರಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿಟಿಟಿಸಿ, ಸಿಡಾಕ್, ಸರ್ಕಾರಿ ಐಟಿಐಗಳಲ್ಲಿ ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ನೀಡಲಾಗುತ್ತಿದ್ದು, ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ ಅಡಿಯಲ್ಲಿ ತರಬೇತಿ ಪಡೆಯುತ್ತಿರುವುದಿಲ್ಲ. ಆದಕಾರಣ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು https://skillmission.karnataka.gov.in/app/registration_type ಲಿಂಕ್‌ನ್ನು ಉಪಯೋಗಿಸಿ ತುರ್ತಾಗಿ ನೋಂದಾಯಿಸಿಕೊಂಡು ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿ ಪಡೆದು ಈ ಸುವರ್ಣಾಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೆ.ಜಿ.ಐ.ಡಿ ಕಚೇರಿ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು. ಪ್ರಸ್ತುತ ಯುವನಿಧಿ ಫಲಾನುಭವಿಗಳು ಯುವನಿಧಿ–ಪ್ಲಸ್ ಕಾರ್ಯಕ್ರಮದಡಿ ತರಬೇತಿ ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆ ಪಡೆಯಲು ಯಾವುದೇ ಅಡಚಣೆಗಳು ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರವೇಶ ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಪಟ್ಟಣದ ಶ್ರೀಮತಿ ಪದ್ಮಾವತಿಬಾಯಿ ರಾಘವೇಂದ್ರರಾವ್ ದೇಶಪಾಂಡೆ ಪಿಕಳಿಹಾಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಬಿಎ, ಬಿ.ಕಾಂ ಹಾಗೂ ಬಿಎಸ್‌ಸಿ ಪ್ರಥಮ ವರ್ಷದ ಪ್ರವೇಶಾತಿಗಳು ಪ್ರಾರಂಭವಾಗಿವೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಸಿದ್ದರಾಮ ಪಾಟೀಲ್ ಶುಕ್ರವಾರ ತಿಳಿಸಿದರು.



ಕಾಲೇಜಿನಲ್ಲಿ ಉನ್ನತ ವ್ಯಾಸಂಗ ಪಡೆದ ಸಹಾಯಕ ಹಾಗೂ ಸಹ ಪ್ರಾಧ್ಯಾಪಕರಿಂದ ಗುಣಮಟ್ಟದ ಬೋಧನೆ ನೀಡಲಾಗುತ್ತಿದೆ. ವಿದ್ಯಾರ್ಥಿಗಳಿಗಾಗಿ ಉತ್ತಮ ಗ್ರಂಥಾಲಯ, ಓದುವ ಕೋಣೆ, ಡಿಜಿಟಲ್ ಗ್ರಂಥಾಲಯ, ಇ–ಪುಸ್ತಕಗಳು ಹಾಗೂ ಇ–ಕಲಿಕಾ ಸಾಮಗ್ರಿಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಜೊತೆಗೆ ಉತ್ತಮ ಗುಣಮಟ್ಟದ ಕಂಪ್ಯೂಟರ್ ಲ್ಯಾಬ್, ಗಣಿತಶಾಸ್ತ್ರ ಹಾಗೂ ಭೌತಶಾಸ್ತ್ರ ಪ್ರಯೋಗಾಲಯ ಸೌಲಭ್ಯ ಲಭ್ಯವಿದೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ, ಸ್ಕೌಟ್ಸ್ & ಗೈಡ್ಸ್, ರೆಡ್ ಕ್ರಾಸ್, ಕ್ರೀಡೆ ಹಾಗೂ ಸಾಂಸ್ಕೃತಿಕ ವಿಭಾಗಗಳ ಮೂಲಕ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಅವಕಾಶ ಕಲ್ಪಿಸಲಾಗಿದೆ.

ಓಬಿಸಿ, ಎಸ್‌ಸಿ, ಎಸ್‌ಟಿ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಸೌಲಭ್ಯವಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಹಾಗೂ ಉದ್ಯೋಗ ಭರವಸೆ ಕೋಶದ ಮೂಲಕ ಪದವಿ ನಂತರ ಉದ್ಯೋಗ ಮಾರ್ಗದರ್ಶನ ನೀಡಲಾಗುತ್ತಿದೆ. ವಿದ್ಯಾರ್ಥಿಗಳ ಸುರಕ್ಷತೆಗಾಗಿ ಕಾಲೇಜು ಮತ್ತು ಬೋಧನಾ ಕೊಠಡಿಗಳಲ್ಲಿ ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 9880872383 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಔರಾದ್ ಹಾಗೂ ಕಮಲನಗರ ತಾಲೂಕಿನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

5ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಶಾಲೆಗಳ ಸಮೀಪದ ಮೆಟ್ರಿಕ್ ಪೂರ್ವ ವಸತಿ ನಿಲಯಗಳಲ್ಲಿ ಪ್ರವೇಶ ಪಡೆಯಬಹುದು. ಅದೇ ರೀತಿ ಪಿಯುಸಿ, ಪದವಿ ಹಾಗೂ ತಾಂತ್ರಿಕ ಕೋರ್ಸ್‌ಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸಬಹುದು.

ಅರ್ಹ ವಿದ್ಯಾರ್ಥಿಗಳು ಇಲಾಖೆಯ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಜೂನ್ 30, 2026ರವರೆಗೆ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಜುಲೈ 31, 2026ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

swdhmis.karnataka.gov.in

ಅರ್ಜಿದಾರರು ಆನ್‌ಲೈನ್ ಸ್ವೀಕೃತಿ ಪ್ರತಿಯನ್ನು ಅಗತ್ಯ ದಾಖಲೆಗಳೊಂದಿಗೆ ಲಗತ್ತಿಸಿ, ಪ್ರವೇಶ ಬಯಸುವ ವಸತಿ ನಿಲಯಗಳಿಗೆ ನೇರವಾಗಿ ಸಲ್ಲಿಸಬೇಕಾಗಿದೆ. ಈ ಸೌಲಭ್ಯದ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಔರಾದ್ ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್–1 ಸಹಾಯಕ ನಿರ್ದೇಶಕ ಡಾ. ಉತ್ತಮ ಎಸ್. ಸಂಘನಾಯಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಗವಿಸಿದ್ದಪ್ಪ ಹೊಸಮನಿ ಪದೋನ್ನತಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೊಪ್ಪಳ ಕಚೇರಿಯಲ್ಲಿ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿದ್ದ ಗವಿಸಿದ್ದಪ್ಪ ಹೊಸಮನಿ ಅವರು ಸಹಾಯಕ ನಿರ್ದೇಶಕರಾಗಿ ಪದೋನ್ನತಿ ಹೊಂದಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ರಾಯಚೂರು ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ವಾರ್ತಾ ಸಹಾಯಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಗವಿಸಿದ್ದಪ್ಪ ಅವರಿಗೆ ಸಹಾಯಕ ನಿರ್ದೇಶಕರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಿ, ಕೊಪ್ಪಳ ಜಿಲ್ಲೆಯ ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸ್ಥಳ ನಿಯುಕ್ತಿಗೊಳಿಸಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ ಅವರು ಮೇ16 ರಂದು ಅಧಿಸೂಚನೆ ಹೊರಡಿಸಿದ್ದಾರೆ. ಮೂಲತಃ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಗೊರೆಬಿಹಾಳ ಗ್ರಾಮದವರಾದ ಗವಿಸಿದ್ದಪ್ಪ ಹೊಸಮನಿ ಅವರು 2016ರಲ್ಲಿ ವಾರ್ತಾ ಇಲಾಖೆಗೆ ನೇಮಕಗೊಂಡು ವಾರ್ತಾ ಸಹಾಯಕರ ಹುದ್ದೆಯ ಜೊತೆಗೆ ಪ್ರಭಾರಿ ಜಿಲ್ಲಾ ವಾರ್ತಾಧಿಕಾರಿಯಾಗಿ ಬೀದರ, ವಿಜಯಪುರ, ರಾಯಚೂರು, ವಿಜಯನಗರ ಜಿಲ್ಲೆಗಳಲ್ಲಿ ಈ ಹಿಂದೆ ಕಾರ್ಯನಿರ್ವಹಿಸಿದ್ದಾರೆ.

# ಮತದಾರರ ಪಟ್ಟಿ ಯ ವಿಶೇಷ–ಸಮಗ್ರ ಪರಿಷ್ಕರಣೆ ಸಹಕಾರ ನೀಡಲು ರಾಜಕೀಯ ಪಕ್ಷಗಳಿಗೆ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ :22:ಮತದಾರರ ಪಟ್ಟಿಯ ವಿಶೇಷ, ಸಮಗ್ರ ಪರಿಷ್ಕರಣೆ ಪಾರದರ್ಶಕವಾಗಿ ಮಾಡಲಾಗುತ್ತಿದ್ದು,ಇದಕ್ಕಾಗಿ ರಾಜಕೀಯ ಪಕ್ಷಗಳವರು ಅವಶ್ಯಕ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ಶ್ರೀ ರಾಹುಲ್ ಪಾಂಡ್ವೆ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗದಿಂದ ರಾಜ್ಯದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ದಿನಾಂಕ 20/06/2026 ಪ್ರಾರಂಭಗೊಳಿಸಿದ್ದು, ವೇಳಾಪಟ್ಟಿಯನ್ನು ಪ್ರಕಟಿಸಿರುತ್ತದೆ ಎಂದು ಹೇಳಿದರು.

ಈ ಮಾಹಿತಿಯನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳವರು ಗಮನಿಸಬೇಕು. ಯಾವುದೇ ದೂರುಗಳಿಗೆ ಅವಕಾಶ ನೀಡದೆ, ಜಿಲ್ಲಾಡಳಿತಕ್ಕೆ ಸಹಕರಿಸಲು ಅವರು ಸಲಹೆ ನೀಡಿದರು.

ವಿಶೇಷ ಸಮಗ್ರ ಪರಿಷ್ಕರಣೆ ಸುಗಮವಾಗಿ ಕೈಗೊಳ್ಳಲು ಮತಗಟ್ಟೆ ಮಟ್ಟದ ಅಧಿಕಾರಿಗಳ ಜೊತೆ ಸಹಕರಿಸಲು ಬೂತ್ ಮಟ್ಟದ ಏಜೆಂಟರನ್ನು ನೇಮಕ ಮಾಡಿ ಸಲ್ಲಿಸುವಂತೆ ಹಾಗೂ ಖಖಖ ಪ್ರಕ್ರಿಯೆಯಲ್ಲಿ ರಾಜಕೀಯ ಪಕ್ಷಗಳ ಪಾತ್ರದ ಕುರಿತಾಗಿ ತಿಳಿಸಿದರು.

ಒಟ್ಟಿನಲ್ಲಿ ವಿಶೇಷ ಸಮಗ್ರ ಪರಿಷ್ಕರಣೆಯು ಪಾರದರ್ಶಕವಾಗಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸದರಿ ಸಭೆಯಲ್ಲಿ ಅಪರ ಜಿಲ್ಲಾ ಚುನಾವಣಾಧಿಕಾರಿ ರಮೇಶ ಕೋಲಾರ, ಸಹಾಯಕ ಆಯುಕ್ತರು ಶ್ರೀಧರ ಗೋಟೂರ,ಉಪವಿಭಾಗ,ಯಾದಗಿರಿ,ಕಾಂಗ್ರೆಸ್ ಪಕ್ಷದಿಂದ ಶ್ರೀ ಶ್ಯಾಮ್ಸನ್, ಭಾರತೀಯ ಜನತಾ ಪಕ್ಷದಿಂದ ಶ್ರೀ ಶಂಕರ್ ಸೂನಾರ್, ಬಹು ಜನ ಸಮಾಜ ಪಕ್ಷದಿಂದ ಶ್ರೀ ದೇವಾನಂದ್ ಕೊಳ್ಳಿ ಹಾಗೂ ಜನತಾ ದಳ (ಜಾತ್ಯತೀತ ) ಪಕ್ಷದಿಂದ ಶ್ರೀ ಶಾಂತಪ್ಪ ರವರು ಉಪಸ್ಥಿತರಿದ್ದರು.

# ಮೇ.27 ರಂದು ನೇರ ಸಂದರ್ಶನಕ್ಕೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 22: ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿದಿಂದ ಹಾಗೂ ಯಾದಗಿರಿ ಸ್ವತಂತ್ರ ಮೈಕ್ರೋ ಫೈನಾನ್ಸ್ ಪ್ರೈ.ಲಿ. ಸಹಯೋಗದೊಂದಿಗೆ 2026ರ ಮೇ 27 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

ಯಾದಗಿರಿ ಸ್ವತಂತ್ರ ಮೈಕ್ರೋ ಫೈನಾನ್ಸ್ ಪ್ರೈ.ಲಿ.ಯಲ್ಲಿ ಸ್ವತಂತ್ರ ಫೀಲ್ಡ್ ಆಫೀಸರ್ 25 ಹುದ್ದೆ ಖಾಲಿ ಇದ್ದು, ಅರ್ಹತೆ ಪಿಯುಸಿ, ಐಟಿಐ, ಹೊಂದಿರಬೇಕು. ಯಾದಗಿರಿ, ಗುರುಮಠಕಲ್, ಸೈದಾಪೂರು, ಮುದೋಳ ಉದ್ಯೋಗ ಸ್ಥಳವಾಗಿದೆ. 20 ರಿಂದ 28 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬೇಕು. ಬೈಕ್ ಮತ್ತು ಡಿ.ಎಲ್. ಹೊಂದಿದವರಿಗೆ ಮೊದಲ ಆಧ್ಯತೆ ಪಿ.ಎಫ್, ಇಎಸ್‌ಐ, ಉಚಿತ ವಸತಿ ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಿದೆ.

ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋ ಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬೇಕು, ಈ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ಯಾದಗಿರಿ ಗಾಂಧಿ ನಗರ ಎಮ್.ಡಿ.ಗೌಸ್ ಸಮೀಪ ರಾಹುಲ್ ಕಲೆಕ್ಷನ್ ಸ್ವತಂತ್ರ ಮೈಕ್ರೋ ಫೈನಾನ್ಸ್ ಪ್ರೈ.ಲಿ. ನೇರ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ತಾಪೂರು ರಸ್ತೆ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ–ಬ್ಲಾಕ್ ರೂ.ನಂ.ಬಿ1, ಬಿ2, 2ನೇ ಮಹಡಿ ದೂ.ಸಂ.08473253718, ಮೊ.ನಂ.9448566765ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಂತಿ ಹಾಗೂ ಸೌಹಾರ್ದಯುತವಾಗಿ ಬಕ್ರೀದ್ ಹಬ್ಬ ಆಚರಿಸಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮೇ:22: ಇದೇ ಮೇ 28 ರಂದು ಬಕ್ರೀದ್ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದಯುತವಾಗಿ ಆಚರಿಸಲು ನಿರ್ಧರಿಸಲಾಗಿದೆ.ಜಿಲ್ಲಾಧಿಕಾರಿ ಶ್ರೀ ರಾಹುಲ್ ಪಾಂಡ್ವೆ ಅವರ ಅಧ್ಯಕ್ಷತೆಯಲ್ಲಿ ಬಕ್ರೀದ್ ಹಬ್ಬ ಆಚರಣೆ ಕುರಿತು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಶಾಂತಿ ಸಮಿತಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶ್ರೀ ರಾಹುಲ್ ಪಾಂಡ್ವೆ ಅವರು, ಜಿಲ್ಲೆಯಲ್ಲಿ ಎಲ್ಲ ಹಬ್ಬಗಳನ್ನು ಸರ್ವಧರ್ಮಿಯರು ಶಾಂತಿ ಹಾಗೂ ಸೌಹಾರ್ದಯುತವಾಗಿ ಆಚರಿಸುತ್ತಾ ಬಂದಿದ್ದು, ಇದೇ ಮೇ 28ರಂದು ಇರುವ ಬಕ್ರೀದ್ ಹಬ್ಬವನ್ನು ಎಲ್ಲರೂ ಶಾಂತಿ ಹಾಗೂ ಸೌಹಾರ್ದಯುತವಾಗಿ ಆಚರಿಸುವಂತೆ ಅವರು ತಿಳಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ತಾವು ಹೆಚ್ಚಿನ ಸೇವೆ ಸಲ್ಲಿಸಿದ್ದು ಸರ್ವ ಧರ್ಮೀಯರು ಆಯಾ ಧರ್ಮದ ಹಬ್ಬಗಳಿಗೆ ಗೌರವ ನೀಡಿ ಶಾಂತಿಯುತವಾಗಿ ಆಚರಿಸಿಕೊಂಡು ಬರುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನ ಮತ್ತು ಜಿಲ್ಲಾಡಳಿತದಿಂದ ನೀಡಲಾಗುವ ನಿರ್ದೇಶನಗಳನ್ನು ಪಾಲಿಸುವಂತೆ ತಿಳಿಸಿದ ಅವರು, ಸಣ್ಣ ಪುಟ್ಟ ಘಟನೆಗಳಿಂದ ಯುವಕರು ಮೇಲೆ ಪ್ರಕರಣ ದಾಖಲಾಗುವುದು ಸರಿಯಲ್ಲ.ಈ ಹಿನ್ನೆಲೆಯಲ್ಲಿ ಶಾಂತಿ ಹಾಗೂ ಸಂತಸದಿಂದ ಈ ಹಬ್ಬ ಆಚರಿಸುವಂತೆ ಅವರು ತಿಳಿಸಿದರು.

ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅಕ್ರಮ ಗೋಹತ್ಯೆ, ಗೋ ಸಾಗಾಣಿಕೆ ಹಾಗೂ ಮಾರಾಟವಾಗಬಾರದು.ಈ ಕುರಿತು ಮುನ್ನೆಚ್ಚರಿಕೆ ವಹಿಸಲು ತಿಳಿಸಿದ ಅವರು ಹಬ್ಬದ ಸಂದರ್ಭದಲ್ಲಿ ಜಿಲ್ಲೆಯ ನಗರ ಸ್ಥಳಿಯ ಸಂಸ್ಥೆಗಳಿಗೆ ಘನತ್ಯಾಜ್ಯ ನಿರ್ವಹಣೆ , ಸ್ವಚ್ಛತೆ ,ಸಾಗಾಣಿಕೆಗೆ ಕಟ್ಟುನಿಟ್ಟಾಗಿ ಸೂಚಿಸಲಾಗುವುದೆಂದು ಅವರು ಹೇಳಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು , ಈ ಹಿಂದೆ ಹಿಂದೂ – ಮುಸ್ಲಿಂ ಬಾಂಧವರು ಶಾಂತಿಯುತವಾಗಿ ಹಬ್ಬಗಳನ್ನು ಆಚರಿಸಿಕೊಂಡು ಬಂದಿದ್ದು, ಈ ಬಾರಿಯ ಬಕ್ರೀದ್ ಹಬ್ಬ ಸಂತಸದಿಂದ ಶಾಂತಿಯುತವಾಗಿ ಆಚರಿಸಬೇಕು. ಸಣ್ಣ ಪುಟ್ಟ ಘಟನೆಗಳು ಜೀವನ ಪೂರ್ಣ ಪ್ರಭಾವ ಬೀರುವುದರಿಂದ ಯುವಕರು ಎಚ್ಚರಿಕೆಯಿಂದ ಇರಬೇಕು. ಶಾಂತಿ ಕದಡಿಸುವವರ ಬಗ್ಗೆ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು. ಶಾಂತಿ ಸುವ್ಯವಸ್ಥೆ ಕಾಪಾಡಲು ಅವಶ್ಯಕ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು ಎಂದರು.

ಇದಗಾಹ, ಪ್ರಾರ್ಥನಾ ಸ್ಥಳಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು. ಪ್ರತಿ ಉಪ ವಿಭಾಗಕ್ಕೆ ಈ ಬಾರಿ ಇಬ್ಬರು ಇನ್ಸ್ಪೆಕ್ಟರ್ ಗಳನ್ನು ನಿಯೋಜಿಸಲಾಗುವುದು. ಅಕ್ರಮ ಗೋ ಸಾಗಾಣಿಕೆ, ತಡೆಗೆ 12 ಚೆಕ್ ಪೋಸ್ಟ್ ಸ್ಥಾಪಿಸಲಾಗುವುದು. ನೈತಿಕ ಪೊಲೀಸ್ಗಿರಿ ಮಾಡದೆ ಪೊಲೀಸ್ ಇಲಾಖೆಯೊಂದಿಗೆ ಅವಶ್ಯಕ ಸಹಕಾರ ನೀಡಲು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ ಸ್ವಾಗತಿಸಿದರು. ಸಹಾಯಕ ಆಯುಕ್ತ ಶ್ರೀಧರ ಗೋಟೂರ, ಡಿಎಸ್ಪಿ ಸುರೇಶ್, ಯಾದಗಿರಿ ತಂಜುಮಿನ್ ಮುಸ್ಲಿಂಮಿನ್ ಅಧ್ಯಕ್ಷ ಶ್ರೀ ಇರ್ಫಾನ್ ಹುಸೇನ್ ಬಾದಲ್, ಉಪಾಧ್ಯಕ್ಷ ವಹೀದ್ ಮಿಯಾ,ಭಾವೈಕ್ಯತೆ ಸಮಿತಿಯ ವಿಶ್ವನಾಥ ಸಿರವಾಳ,ಡಿ ಎಸ್ ಎಸ್ ಸಂಚಾಲಕ ಭೀಮಣ್ಣ ಹೊಸಮನಿ, ಶರಣಪ್ಪ ಗುಳಿಗಿ, ಗುಲಾಮ್ ಜಿಲಾನಿ,ಸದ್ದಾಂ ಹುಸೇನ್,ಸಲೀಂ ಪಟೇಲ್, ಇತರರು ಉಪಸ್ಥಿತರಿದ್ದು, ಸೂಕ್ತ ಸಲಹೆ ಸೂಚನೆ ನೀಡಿದರು.

# ಗು.ವಿ.ಗು.ಗುತ್ತಿಗೆ ನೌಕರರ ಹೋರಾಟಕ್ಕೆ AIKKMS ಕಲಬುರಗಿಜಿಲ್ಲಾ ಸಮಿತಿಯ ಬೆಂಬಲ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಳೆದ 24 ದಿನಗಳಿಂದ ನಡೆಯುತ್ತಿರುವ ವಿಶ್ವವಿದ್ಯಾಲಯದ ಗುತ್ತಿಗೆ ಕಾರ್ಮಿಕರ ಹೋರಾಟವು ಇಂದಿಗೆ ನಾಲ್ಕು ದಿನಗಳಿಂದ ಉಪವಾಸ ಸತ್ಯಾಗ್ರಹಕ್ಕೆ ಕಾಲಿಟ್ಟಿದೆ. ಅವರ ಬೇಡಿಕೆಗಳಾದ 'ವೇತನವನ್ನು ಹೆಚ್ಚುಗೆ ಳಿಸುವುದು' ಮತ್ತು 'ವೇತನವನ್ನು ಸಂಚಿತ ವೇತನದ ರೂಪದಲ್ಲಿ ಕೊಡಬೇಕು ಅಂದರೆ, ಯಾವುದೇ ಮದ್ಯವರ್ತಿಗಳಿಲ್ಲದೆ ನೇರವಾಗಿ ವಿಶ್ವವಿದ್ಯಾಲಯವೇ ವೇತನ ಪಾವತಿಸುವಂತಹ ಜವಬ್ದಾರಿಯನ್ನು ತೆಗೆದುಕೊಳ್ಳಬೇಕು' ಎನ್ನುವ ಬೇಡಿಕೆಗಳು ಸಂಪೂರ್ಣವಾಗಿ ನ್ಯಾಯಯುತವಾಗಿವೆ. ಹಾಗೂ ಈ ಬೇಡಿಕೆಗಳನ್ನು ನಿರ್ಲಕ್ಷಿಸಿದ ವಿಶ್ವವಿದ್ಯಾಲಯದ ಕ್ರಮವು ಅತ್ಯಂತ ಕಾರ್ಮಿಕ ವಿರೋಧಿಯಾಗಿದೆ. ಇದನ್ನು AIKKMS ಕಲಬುರಗಿ ಜಿಲ್ಲಾ ಸಮಿತಿಯು ಉಗ್ರವಾಗಿ ಖಂಡಿಸುತ್ತದೆ.ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಕಾರ್ಯದರ್ಶಿಗಳಾದ ಮಹೇಶ್ ಎಸ್. ಬಿ.ಯವರು ಧರಣಿ ನಿರತ ಕಾರ್ಮಿಕರಿಗೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿ ಮಾತನಾಡುತ್ತಾ; ಕಾರ್ಮಿಕರು ಮತ್ತು ರೈತರ ಒಗ್ಗಟ್ಟು ಬೆಳೆಯಬೇಕು.ಈ ಹೋರಾಟದಲ್ಲಿ AIKKMS ಕಲಬುರಗಿ ಜಿಲ್ಲಾ ಸಮಿತಿಯು ಸಂಪೂರ್ಣ ನಿಮ್ಮೊಂದಿಗಿದೆ. ಹೋರಾಟವನ್ನು ರಾಜೀರಹಿತವಾಗಿ ಮುಂದುವರೆಸಿ ಎಂದು ಕರೆ ನೀಡಿದರು.ಒಂದುವೇಳೆ ವಿಶ್ವವಿದ್ಯಾಲಯದ ಆಡಳಿತವು ಅಥವಾ ಸರ್ಕಾರವು ನಿಮ್ಮ ಬೇಡಿಕೆಗಳನ್ನು ಈಡೇರಿಸದೇ ಇದ್ದರೆ ಮುಂದಿನ ದಿನಗಳಲ್ಲಿ ಉನ್ನತ ಹಂತದ ಉಗ್ರ ಹೋರಾಟದಲ್ಲಿ AIKKMS ಕಲಬುರಗಿ ಜಿಲ್ಲಾ ಸಮಿತಿಯು ಸಂಪೂರ್ಣವಾಗಿ ಗುತ್ತಿಗೆ ಕಾರ್ಮಿಕರ ಜೊತೆಗೆ ನಿಲ್ಲುತ್ತದೆ ಎಂದು ಭರವಸೆಯನ್ನು ನೀಡಿದರು.

# "ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯ ಪ್ರವೇಶಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.22–ಕಲಬುರಗಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಯಲ್ಲಿ ಸಹಕಾರ ಸಂಘ ಸಂಸ್ಥೆ/ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ("6 ತಿಂಗಳು/180" ದಿನಗಳ ಅವಧಿಯ) "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಜುಲೈ–2026 ರಿಂದ ಪ್ರಾರಂಭವಾಗುತ್ತಿದ್ದು. ಈ ತರಬೇತಿಯನ್ನು ಪಡೆಯಲಿಚ್ಚಿಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಕಲಬುರಗಿಯಲ್ಲಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆ ನಡೆಸುತ್ತಿದೆ. ಈ ತರಬೇತಿಯನ್ನು ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸಹಕಾರ ಸಂಘ/ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇಕಡ 18 ರಷ್ಟು ಸ್ಥಾನಗಳನ್ನು ತರಬೇತಿಗಾಗಿ ಮೀಸಲಿರಿಸಲಾಗಿರುತ್ತದೆ. ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು, ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ, ಸಹಕಾರಿ ಸಂಘಗಳಲ್ಲಿ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ಇಂತಹ ಅಭ್ಯರ್ಥಿಗಳು ಮಾತ್ರ ತರಬೇತಿಗಾಗಿ ಅರ್ಜಿ ಸಲ್ಲಿಸಬಹುದು. ಈ ತರಬೇತಿ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಮಾಹೆಯಾನ ರೂ.500 ಶಿಷ್ಯವೇತನವನ್ನು ನೀಡಲಾಗುತ್ತದೆ.

ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ("6 ತಿಂಗಳು/180 ದಿನಗಳ') ವಿಶೇಷ "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಸಹ ನೀಡಲಾಗುತ್ತದೆ. ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರವರ ಮೂಲಕ ಅಥವಾ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 16 ವರ್ಷಗಳಾಗಿರಬೇಕು. ಗರಿಷ್ಠ ವಯೋಮಿತಿ 30 ವರ್ಷಗಳು ಮೀರಿರಬಾರದು. ಈ ಅಭ್ಯರ್ಥಿಗಳಿಗೆ ಮಾಹೆಯಾನ ರೂ.600 ಶಿಷ್ಯವೇತನವನ್ನು ನೀಡಲಾಗುತ್ತದೆ.

ಈ ಡಿಪ್ಲೋಮಾ ತರಬೇತಿಯ ನಿಗದಿತ ಅರ್ಜಿ ನಮೂನೆ ಹಾಗೂ ವಿವರಣಾ ಪುಸ್ತಕವನ್ನು ಕಲಬುರಗಿ ತರಬೇತಿ ಸಂಸ್ಥೆಯಿಂದ ಹಾಗೂ ತರಬೇತಿ ಸಂಸ್ಥೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಸಹಕಾರ ಯೂನಿಯನ್‌ಗಳಲ್ಲಿ (ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಹೊಸಪೇಟ್) ದಿಂದ ಪಡೆಯಬಹುದಾಗಿದೆ. ಈ ತರಬೇತಿಯ ಅರ್ಜಿಯನ್ನು ಭರ್ತಿ ಮಾಡಿ 2026ರ ಜೂನ್ 30 ರೊಳಗಾಗಿ ಕಲಬುರಗಿ ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಆದರ್ಶನಗರ, ಪ್ರಗತಿ ಕಾಲೋನಿ, ಸೇಡಂ. ರಸ್ತೆ, ಕಲಬುರಗಿ–585 105 ವಿಳಾಸಕ್ಕೆ ಹಾಗೂ ದೂರವಾಣಿ ಸಂಖ್ಯೆ: 08472–245340/9916726886/9742307153/9113916753 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ರಿತೇಶ್ ಸಾವಿಗೆ ರೂ.25 ಲಕ್ಷ ಪರಿಹಾರಕ್ಕೆ ಆಗ್ರಹಿಸಿ ಬಂಜಾರಾ ಸೇವಾ ಸಮಾಜ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜಿಲ್ಲೆಯ ಚಿತ್ತಾಪುರ ತಾಲೂಕಿನ ಕೊಂಚೂರು ಗ್ರಾಮದಲ್ಲಿ ತೋಡಿರುವ ಹೊಂಡದಲ್ಲಿ ಈಜಲು ಹೋಗಿದ್ದ ಡಿಗ್ಗಿ ತಾಂಡಾದ 11 ವರ್ಷದ ಬಾಲಕ ರಿತೇಶ್ ಮೃತಪಟ್ಟಿರುವ ಹಿನ್ನೆಲೆಯಲ್ಲಿ, ಮೃತ ಬಾಲಕನ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ ರೂ.25 ಲಕ್ಷ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕಲಬುರಗಿ ಜಿಲ್ಲಾ ಬಂಜಾರಾ ಸೇವಾ ಸಮಾಜದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಸಿಎಂ ಅವರಿಗೆ ಮನವಿ ಸಲ್ಲಿಸಿದರು. ಜಿಲ್ಲೆಯ ಚಿತ್ತಾಪುರ ತಾಲೂಕಿನ ಕುಂಚೂರು ಗ್ರಾಮದ ಬಳಿ ರೈಲ್ವೆ ಅಭಿವೃದ್ಧಿ ಕಾಮಗಾರಿಗಾಗಿ ಮುರುಂ ಸಾಗಾಣಿಕೆ ಮಾಡಲು ತೋಡಲಾಗಿದ್ದ ಹೊಂಡದಲ್ಲಿ ನೀರು ತುಂಬಿಕೊಂಡಿದ್ದು, ಅದರಲ್ಲಿ ಈಜಲು ಹೋಗಿದ್ದ ಡಿಗ್ಗಿ ತಾಂಡಾದ 11 ವರ್ಷದ ರಿತೇಶ್ ಎಂಬ ಬಾಲಕ ದುರ್ಘಟನೆಯಲ್ಲಿ ಮೃತಪಟ್ಟಿರುವುದು ಅತ್ಯಂತ ದುಃಖಕರ ಮತ್ತು ಬೇಸರದ ಸಂಗತಿಯಾಗಿದೆ ಎಂದು ಕಲಬುರಗಿ ಜಿಲ್ಲಾ ಬಂಜಾರ (ಲಂಬಾಣಿ) ಸೇವಾ ಸಂಘದ ಅಧ್ಯಕ್ಷ ಬಿ.ಬಿ. ನಾಯಕ ಹೇಳಿದರು..

ಕಾಮಗಾರಿಗಾಗಿ ತೋಡಲಾಗಿದ್ದ ಹೊಂಡದಲ್ಲಿ ನೀರು ಸಂಗ್ರಹವಾಗಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಾಗಿತ್ತು. ಅಪಾಯದ ಸ್ಥಳದಲ್ಲಿ ಎಚ್ಚರಿಕೆ ಫಲಕಗಳನ್ನು ಅಳವಡಿಸುವುದು, ಕಾವಲುಗಾರರನ್ನು ನಿಯೋಜಿಸುವುದು ಹಾಗೂ ಸಾರ್ವಜನಿಕರು ಪ್ರವೇಶಿಸದಂತೆ ಭದ್ರತಾ ಕ್ರಮಗಳನ್ನು ಕೈಗೊಳ್ಳುವುದು ಅವರ ಜವಾಬ್ದಾರಿಯಾಗಿತ್ತು. ಆದರೆ ನಿರ್ಲಕ್ಷ್ಯದ ಪರಿಣಾಮವಾಗಿ ಅಮಾಯಕ ಬಾಲಕ ಪ್ರಾಣ ಕಳೆದುಕೊಂಡಿದ್ದಾನೆ ಎಂದು ಅವರು ಆರೋಪಿಸಿದ್ದಾರೆ.ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಮೃತ ಬಾಲಕ ರಿತೇಶ್ ಅವರ ಕುಟುಂಬಕ್ಕೆ ಮಾನವೀಯ ದೃಷ್ಟಿಯಿಂದ ರೂ.25 ಲಕ್ಷ ಪರಿಹಾರ ಧನ ನೀಡಬೇಕು. ಅಲ್ಲದೆ ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವ ಮೂಲಕ ಕುಟುಂಬಕ್ಕೆ ಆಸರೆಯಾಗಬೇಕು ಎಂದು ಸಂಘದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳದಿದ್ದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘವು ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಶಿಕ್ಷಣ ಚವ್ಹಾಣ, ಆನಂದ ಚವ್ಹಾಣ (ಚಿಂಚೋಳಿ), ಪ್ರಧಾನ ಕಾರ್ಯದರ್ಶಿ ರಮೇಶ ರಾಠೋಡ ಕಾರಭಾರಿ, ಕಾರ್ಯದರ್ಶಿ ವಿನೋದ ಚವ್ಹಾಣ (ಯಾಗಾಪೂರ) ಮತ್ತು ಖಜಾಂಚಿ ಲಾಲಪ್ಪ ರಾಠೋಡ, ನಿರ್ದೇಶಕರಾದ ತುಕಾರಾಮ ರಾಠೋಡ, ಕಿಶನ ನಾಯಕ, ಲಲಿತಾ ರಾಠೋಡ, ಖೀರು ನಾಯಕ ಹಾಗೂ ಗುರುನಾಥ ಚವ್ಹಾಣ, ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷ ರೇಣುಕಾ ರಾಠೋಡ, ಕಮಲಾಪೂರ ಘಟಕದ ಅಧ್ಯಕ್ಷ ಸುನೀತಾ ಪಿ. ಜಾಧವ ಹಾಗೂ ಅಫಜಲಪುರ ಘಟಕದ ಅಧ್ಯಕ್ಷೆ ಕವಿತಾ ಎಸ್. ರಾಠೋಡ ಸೇರಿದಂತೆ ಇತರರು ಇದ್ದರು.

# ಅಂಗನವಾಡಿ ಕಾರ್ಯಕರ್ತೆ ಹುದ್ದೆಯಿಂದ ಮೇಲ್ವಿಚಾರಕಿ ಹುದ್ದೆಗೆ ಮುಂಬಡ್ತಿ ಮಧ್ಯವರ್ತಿಗಳಿಂದ ಯಾವುದೇ ಮೋಸ ಹೋಗದಂತೆ ಎಚ್ಚರ ವಹಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.22–ಅಂಗನವಾಡಿ ಕಾರ್ಯಕರ್ತೆ ಹುದ್ದೆಯಿಂದ ಮೇಲ್ವಿಚಾರಕಿ ಹುದ್ದೆಗೆ ಮುಂಬಡ್ತಿಗೆ ಸಂಬಂಧಿಸಿದಂತೆ ಕಲಬುರಗಿ ಜಿಲ್ಲೆಯ 09 ಶಿಶು ಅಭಿವೃದ್ಧಿ ಯೋಜನೆಯಿಂದ ಅಂಗನವಾಡಿ ಕಾರ್ಯಕರ್ತೆಯರ ಜೇಷ್ಠತೆ ಮಾಹಿತಿ ಪಡೆದು ಪ್ರಧಾನ ಕಚೇರಿಗೆ ಸಲ್ಲಿಸುವ ಪ್ರಕ್ರಿಯೆ ನಡೆದಿದ್ದು, ಆದರೆ ಕೆಲವು ಮಧ್ಯವರ್ತಿಗಳು ಮುಂಬಡ್ತಿ ಮಾಡಿಸುವುದಾಗಿ ವಂಚಿಸುತ್ತಿರುವ ಹಾಗೂ ಹಣದ ಬೇಡಿಕೆ ಇಡುತ್ತಿರುವ ವಿಷಯವು ತಿಳಿದು ಬಂದಿರುತ್ತದೆ. ಆದ್ದರಿಂದ ಯಾವುದೇ ಮಧ್ಯವರ್ತಿಗಳಿಂದ ಮೋಸ ಹೋಗದಂತೆ ಎಚ್ಚರ ವಹಿಸಬೇಕೆಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಗೌರವಸೇವೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ ಹುದ್ದೆಯಿಂದ ಮೇಲ್ವಿಚಾರಕಿ ಹುದ್ದೆಗೆ ಮುಂಬಡ್ತಿ ನೀಡಲು ಬೆಂಗಳೂರಿನ ಮಹಿಳಾ ಮತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕರು ಕಲಬುರಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಜೇಷ್ಠತಾ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸಲು ತಿಳಿಸಿರುತ್ತಾರೆ.

ಆದ್ದರಿಂದ ಅಂಗನವಾಡಿ ಕಾರ್ಯಕರ್ತೆ ಹುದ್ದೆಯಿಂದ ಮೇಲ್ವಿಚಾರಕಿ ಹುದ್ದೆಗೆ ಮುಂಬಡ್ತಿಯನ್ನು ಪಾರದರ್ಶಕವಾಗಿ ಇಲಾಖೆಯ ಮಾರ್ಗಸೂಚಿಗೆ ಒಳಪಟ್ಟು ನಿಯಮಾನುಸಾರ ಮಾಡಲಾಗುತ್ತಿದ್ದು, ಯಾವುದೇ ಮಧ್ಯವರ್ತಿಗಳು,

ಅಧಿಕಾರಿ/ ಸಿಬ್ಬಂದಿಗಳು ಸುಳ್ಳು ಹೇಳಿ ವಂಚನೆ ಮಾಡುವುದರಿಂದ ಜಾಗರೂಕತೆಯಿಂದ ಇರಬೇಕು. ಅಂತಹ ಯಾವುದೇ ವ್ಯಕ್ತಿಗಳ ಬಗ್ಗೆ ಅನುಮಾನ ಬಂದಲ್ಲಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರನ್ನು ಹಾಗೂ ಕರ್ನಾಟಕ ಲೋಕಾಯುಕ್ತರವರಿಗೆ ನೇರವಾಗಿ ದೂರು ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.


# ವಾಯುಬಾರ ಕುಸಿತದ ಹಿನ್ನೆಲೆ, ಅಕಾಲಿಕ ಮಳೆ ಅವಧಿಗೂ ಮುನ್ನವೇ ಮೀನುಗಾರಿಕೆ ಸ್ಥಗಿತಗೊಳಿಸಲಿರುವ ಬೋಟ್‌ಗಳು


ನಾಗರಾಜ ಮಂಜಗುಣಿ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ವಾಯುಬಾರ ಕುಸಿತದಿಂದಾಗಿ ಅಕಾಲಿಕ ಮಳೆ ಹಾಗೂ ಗಾಳಿ ಉಂಟಾಗಿದ್ದು ಇದರಿಂದಾಗಿ ಮೀನುಗಾರಿಕಾ ಬೋಟ್‌ಗಳು ಸಮುದ್ರಕ್ಕೆ ಇಳಿಯದಂತಾಗಿದೆ. ಇನ್ನು ಜೂನ್ 1 ರಿಂದ ಆಳ ಮೀನುಗಾರಿಕೆಗೆ ನಿಷೇಧವಿದೆ. ಆದರೆ ಅವಧಿಗೂ ಮುನ್ನವೇ ಮೀನುಗಾರಿಕೆ ಸ್ಥಗಿತಗೊಳಿಸಬೇಕಾದ ಸ್ಥಿತಿ ಬಂದೊದಗಿದೆ. ಹಾಗೇ ನೋಡಿದರೆ ಮತ್ಸ್ಯಕ್ಷಾಮ ಕೂಡ ಈ ಬಾರಿ ಮೀನುಗಾರರಿಗೆ ಕಾಡಿದೆ.

ತದಡಿ ಬಂದರಿನಲ್ಲಿ ಸಾಕಷ್ಟು ಬೋಟ್‌ಗಳು ಲಂಗರು ಹಾಕಿವೆ. ಈ ಬಾರಿ ಈ ಹಿಂದಿನಗಿಂತ ಈ ವರ್ಷ ಮತ್ಸ್ಯಕ್ಷಾಮದಿಂದಾಗಿ ಮೀನುಗಾರರು ತಕ್ಕಮಟ್ಟಿಗೆ ನಷ್ಟ ಅನುಭವಿಸುವಂತಾಗಿದೆ.





ಹಾಗೇ ಇಲ್ಲಿಯ ಮೀನುಗಾರಿಕಾ ಶೆಡ್‌ಗಳು ಕೂಡ ಶೀತಲಗೊಂಡು ತೀರ ಅಪಾಯಕಾರಿಯಾಗಿವೆ. ಬಂದರು ಇಲಾಖೆ ಈ ಬಗ್ಗೆ ಗಮನ ಹರಿಸಬೇಕು ಎನ್ನುವುದು ಮೀನುಗಾರರ ಅಭಿಪ್ರಾಯವಾಗಿದೆ.

ಕೂಲಿಯಾಳುಗಳ ಸಮಸ್ಯೆಯಿಂದಾಗಿ ಬೋಟ್‌ನವರು ಓರಿಸ್ಸಾ ರಾಜ್ಯದ ಕಾರ್ಮಿಕರನ್ನು ಕರೆತಂದು ಬೋಟ್‌ನಲ್ಲಿ ಕೆಲಸಕ್ಕೆ ಇಟ್ಟುಕೊಂಡಿದ್ದಾರೆ. ಅವರು ಕೂಡ ಒಮ್ಮೆ ಬೋಟ್ ಆರಂಭಗೊಂಡ ಸಮಯದಲ್ಲಿ ಆಗಮಿಸಿದರೆ ನಂತರ ಮೀನುಗಾರಿಕೆ ನಿಷೇಧವಾಗುವರೆಗೆ ಇಲ್ಲಿಯೇ ಉಳಿದು ನಂತರ ಮನೆಗೆ ತೆರಳುತ್ತಾರೆ. ಆದರೆ ಮನೆಗೆ ತೆರಳುವ ಸ್ಥಳದಲ್ಲಿ ಎಲ್ಲ ಲೆಕ್ಕಾಚಾರಗಳು ಮುಗಿದು ಹಣವನ್ನು ತೆಗೆದು–ಕೊಂಡು ಹೋಗುತ್ತಾರೆ. ಆದರೆ ಈ ಬಾರಿ ಕೆಲವು ಬೋಟ್‌ಗಳು ನಷ್ಟವನ್ನು ಅನುಭವಿಸಿದ್ದರಿಂದಾಗಿ ಹೆಚ್ಚಿನ ಹಣವನ್ನು ತೆಗೆದುಕೊಂಡು ಹೋಗಲಾರದ ಸ್ಥಿತಿ ಕಾರ್ಮಿಕರದ್ದಾಗಿದೆ.

## ಗ್ರಾಮೀಣ ಭಾಗದಲ್ಲಿ ಮೇ.24ರಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.22: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11ಕೆವಿ ವಡವಟ್ಟಿ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.24ರ ಬೆಳಗ್ಗೆ 10ಗಂಟೆಯಿಂದ ಮಧ್ಯಾಹ್ನ 01:30 ಗಂಟೆವರೆಗೆ ಸಿಂಗನೋಡಿ ತಾಂಡ, ಮಂಡಲಗೇರಾ, ಬಾಯಿದೊಡ್ಡಿ, ಬಾಪೂರು ತಾಂಡ, ಇಂಡಸ್ಟ್ರಿಯಲ್ ಏರಿಯಾ, ದೇವಿನಗರ ಪ್ರದೇಶದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಬಕಾರಿ ಇಲಾಖೆಯಿಂದ ದಾಳಿ 24 ಲೀಟರ್ ಸೇಂಧಿ ವಶಕ್ಕೆ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.22: ರಾಯಚೂರು ಅಬಕಾರಿ ಉಪವಿಭಾಗದ ಉಪ ಅಧೀಕ್ಷಕರು ಹಾಗೂ ಅಬಕಾರಿ ರಾಯಚೂರು ವಲಯ ನಿರೀಕ್ಷಕರ ನೇತೃತ್ವದಲ್ಲಿ ಇತ್ತೀಚೆಗೆ ರಾಯಚೂರಿನ ರೈಲ್ವೇ ನಿಲ್ದಾಣದಲ್ಲಿ ಗಸ್ತು ಮಾಡುತ್ತಿರುವ ಸಮಯದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಲೋಖಪ್ಪ ಎಂಬ ಆರೋಪಿಯನ್ನು ವಶಕ್ಕೆ ಪಡೆದು ಗುನ್ನ ಸಂಖ್ಯೆ: 76/2025-26ರಡಿ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಕೊಳ್ಳಲಾಗಿದೆ. ದಾಳಿಯ ವೇಳೆಯಲ್ಲಿ ಸುಮಾರು 24 ಲೀಟರ್ ಸೇಂಧಿ ಪತ್ತೆಯಾಗಿದ್ದು, ಸೇಂಧಿಯನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಯು ರಾಯಚೂರು ತಾಲೂಕಿನ ಮಮದಾಪುರ ಗ್ರಾಮದ ನಿವಾಸಿಯಾಗಿದ್ದು, ಆರೋಪಿಯ ಮೇಲೆ ಸ್ಥಳದಲ್ಲಿಯೇ ಪಂಚನಾಮೆ ಅಡಿಯಲ್ಲಿ ರಾಯಚೂರಿನ ಅಬಕಾರಿ ಉಪ ನಿರೀಕ್ಷಕರು-1 ವಲಯ ರಾಯಚೂರು ಅವರು ಪ್ರಕರಣ ದಾಖಲು ಮಾಡಿಕೊಂಡಿದ್ದು ಕಾನೂನು ಕ್ರಮ ಕೈಗೊಳ್ಳಲಾಗಿದೆ. ದಾಳಿಯಲ್ಲಿ ಅಬಕಾರಿ ನಿರೀಕ್ಷಕರಾದ ಮಾರುತಿ, ಅಬಕಾರಿ ಉಪ ನಿರೀಕ್ಷಕ-01 ಅಮೃತಪ್ಪ, ಅಬಕಾರಿ ಪೇದೆ ತಿರುಪತಿ, ಗೃಹ ರಕ್ಷಕರಾದ ಚಂದ್ರಶೇಖರ, ನರೇಂದ್ರ, ಮಲ್ಲಮ್ಮ ಅವರು ಭಾಗಿಯಾಗಿದ್ದರು ಎಂದು ಅಬಕಾರಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಪುರಾತನ ಕಾಲದ ಹಸ್ತಪ್ರತಿ, ಶಾಸನಗಳ ಸಂಗ್ರಹ ಇದ್ದಲ್ಲಿ ಮಾಹಿತಿ ನೀಡಿ: ಪೂವಿತಾ ಎಸ್.

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮೇ.22: ಜಿಲ್ಲೆಯಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ರಗಳು, ಹಸ್ತಪ್ರತಿಗಳು, ಶಾಸನಗಳು ಹಾಗೂ ದಾಖಲೆಗಳ ಸಂಗ್ರಹವಿದ್ದಲ್ಲಿ ಮಾಹಿತಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್.ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮೇ.21ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜ್ಞಾನ ಭಾರತ ಮಿಷನ್ ಯೋಜನೆಯಡಿ ರಾಷ್ಟ್ರೀಯ ಹಸ್ತ ಪ್ರತಿ ಸಮೀಕ್ಷಾ ಕಾರ್ಯಕ್ಕೆ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.ಪ್ರಾಚೀನ ಕಾಲದ ಶಾಸನಗಳು, ಹಸ್ತ ಪ್ರತಿಗಳು, ಕೈಬರಹಗಳನ್ನು ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಅತ್ಯಂತ ಪುರಾತನ, ಹಳೆಯ ದಾಖಲೆಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ ಡಿಜಟಲೀಕರಣಗೊಳಿಸಲು ಸರ್ಕಾರವು ಜ್ಞಾನ ಭಾರತಂ ಮಿಷನ್ ಯೋಜನೆ ಜಾರಿಗೆ ತಂದಿದೆ ಎಂದರು.ರಾಷ್ಟ್ರ, ರಾಜ್ಯ, ಕರ್ನಾಟಕದ ಸೀಮಂತ ಸಂಸ್ಕೃತ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತ ಪ್ರತಿಗಳ ಸಂರಕ್ಷಣೆ ಹಾಗೂ ಡಿಜಟಲೀಕರಣಗೊಳಿಸಲಾಗುತ್ತಿದೆ ಎಂದರು.ಜಿಲ್ಲೆಯಾದ್ಯಂತ ಗ್ರಂಥಾಲಯಗಳು, ದೇವಾಲಯಗಳು, ಮಠಗಳು, ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಪ್ರಾಚೀನ ಸಂಸ್ಥಾನಗಳು, ಪ್ರಾಚೀನ ಮನೆತನಗಳಲ್ಲಿ ಪುರಾತನ ಕಾಲದ ಅಪರೂಪದ ಹಸ್ತ ಪ್ರತಿ, ದಾಖಲೆಗಳ ಸಂಗ್ರಹ ಇರಬಹುದು. ಅವುಗಳ ಬಗ್ಗೆ ಇತಿಹಾಸಕಾರರು, ಸಂಶೋಧಕರು, ಸಾರ್ವಜನಿಕರು ಮಾಹಿತಿ ನೀಡಿ ಸಮೀಕ್ಷಾ ಕಾರ್ಯಕ್ಕೆ ಸಹಕರಿಸಬೇಕೆಂದು ಜಿಲ್ಲಾಧಿಕಾರಿಗಳು ಕೋರಿದರು.

ಸಾರ್ವಜನಿಕರು ಹಸ್ತಪ್ರತಿಗಳ ಬಗ್ಗೆ ಮಾಹಿತಿ ನೀಡುವುದರಿಂದ ಸರ್ಕಾರ ಅವುಗಳನ್ನು ವಶಪಡಿಸಿಕೊಳ್ಳಲಿದೆ. ಸಮಸ್ಯೆ ಆಗುತ್ತದೆ ಎಂಬ ಆತಂಕ, ಗೊಂದಲ ಬೇಡ. ಮಾಲಿಕರ ಅನುಮತಿಯೊಂದಿಗೆ ಅವುಗಳ ಡಿಜಿಟಲೀಕರಣಗೊಳಿಸಿ ಮೂಲ ಪ್ರತಿ ಅವರ ಬಳಿಯೇ ಉಳಿಸಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮಾಹಿತಿ ಎಲ್ಲಿ ನೀಡಿ: ಸಾರ್ವಜನಿಕರು ಹಸ್ತ ಪ್ರತಿಗಳ ಬಗ್ಗೆ ಮಾಹಿತಿ ನೀಡಲು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು-584101 ದೂರವಾಣಿ ಸಂಖ್ಯೆ: 08532-200677 ಅಥವಾ ಇಮೇಲ್: ಜಿಜಣಣಿಡಿಟಟಿಡಿಖಿಡಿ@ರಟಚಿಟಿಟ.ಛಿಣಟ ಸಂಪರ್ಕ ಮಾಡಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಜೀರ್ ಅಹ್ಮದ್ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪುರಾತತ್ವ ಸಂರಕ್ಷಣಾಧಿಕಾರಿ ಶಿವಬಸವ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ಜಿ.ಹರೀಶ, ಪ್ರವಾಸೋದ್ಯಮ ಇಲಾಖೆಯ ಪ್ರಥಮ ದರ್ಜೆ ಸಹಾಯಕಿ ಕವಿತಾ ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಂಜೀವರಾಯನಕೋಟೆಯಲ್ಲಿ ಶ್ರೀ ಸದ್ಗುರು ಸಿದ್ಧಾರೂಡರ ಕಥಾಮೃತ ಪಾರಾಯಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ತಾಲೂಕಿನ ಸಂಜೀವರಾಯನಕೋಟೆ ಗ್ರಾಮದಲ್ಲಿ ಭಕ್ತಿಭಾವ ಮತ್ತು ಆಧ್ಯಾತ್ಮಿಕ ಚೈತನ್ಯ ತುಂಬಿದ ವಾತಾವರಣ ನಿರ್ಮಾಣವಾಗಿದ್ದು, ಗ್ರಾಮದ ಶ್ರೀ ನಂದ್ವಾರಪ್ಪ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ಸದ್ಗುರು ಸಿದ್ಧಾರೂಡರ ಕತಾಮೃತ ಪಾರಾಯಣ ಕಾರ್ಯಕ್ರಮ ಭಕ್ತಿಭಾವದಿಂದ ನಡೆ- ಯುತ್ತಿದೆ. ಪ್ರತಿದಿನ ಸಂಜೆ 6 ಗಂಟೆಯಿಂದ ಆರಂಭವಾಗುತ್ತಿರುವ ಈ ಧಾರ್ಮಿಕ ಕಾರ್ಯಕ್ರಮವು ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಭಾಗದ ಭಕ್ತರನ್ನು ಆಕರ್ಷಿಸುತ್ತಿದೆ.

ದಿನಾಂಕ 18-05-2026ರಿಂದ 26-05-2026ರವರೆಗೆ ನಡೆಯಲಿರುವ ಈ ಮಹೋತ್ಸವದಲ್ಲಿ ಶ್ರೀ ಸದ್ಗುರು ಸಿದ್ಧಾರೂಢರ ಜೀವನ ತತ್ವ, ಧರ್ಮೋಪದೇಶ, ಭಕ್ತಿ ಮಾರ್ಗ ಮತ್ತು ಸತ್ಸಂಗದ ಮಹತ್ವವನ್ನು ಕತಾಮೃತ ರೂಪದಲ್ಲಿ ಭಕ್ತರಿಗೆ ತಿಳಿಸಲಾಗುತ್ತಿದೆ. ದೇವಸ್ಥಾನದಲ್ಲಿ ನಿತ್ಯ ಭಜನೆ, ಮಂತ್ರೋಚ್ಚಾರಣೆ, ಪಾರಾಯಣ ಮತ್ತು ಪ್ರವಚನಗಳಿಂದ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುತ್ತಿದ್ದಾರೆ.

ಈ ವೇಳೆ ಎತ್ತಿನಬೂದಿಹಾಳ ಗ್ರಾಮದ ಪ್ರವಚನಕಾರ ಮುದ್ದೆ ನಾಗರಾಜ್ ಮಾತನಾಡಿ, "ಮಾನವ ಜನ್ಮ ಅತ್ಯಂತ ಅಪರೂಪವಾದುದು. 84 ಲಕ್ಷ ಜೀವ ರಾಶಿಗಳಲ್ಲಿ ಅನೇಕ ಜನ್ಮಗಳನ್ನು ಅನುಭವಿಸಿದ ನಂತರ ಮನುಷ್ಯ ಜನ್ಮ ದೊರೆಯುತ್ತದೆ. ಈ ಜನ್ಮವನ್ನು ಕೇವಲ ಭೌತಿಕ ಸುಖಗಳಿಗೆ ಮಾತ್ರ ಸೀಮಿತಗೊಳಿಸದೇ, ಧರ್ಮ, ದಾನ, ಭಕ್ತಿ ಹಾಗೂ ಸತ್ಸಂಗದ ಮೂಲಕ ಸಾರ್ಥಕ ಮಾಡಿಕೊಳ್ಳಬೇಕು. ಶ್ರೀ ಸದ್ಗುರು ಸಿದ್ಧಾರೂಢರು ಜನರ ಅಜ್ಞಾನವನ್ನು ಹೋಗಲಾಡಿಸಿ, ಸತ್ಯ ಮತ್ತು ಆತ್ಮಜ್ಞಾನಕ್ಕೆ ದಾರಿ ತೋರಿದ ಮಹಾನ್ ಸಂತರು. ಅವರ ಜೀವನವೇ ಮಾನವಕುಲಕ್ಕೆ ದೀಪಸ್ತಂಭವಾಗಿದೆ," ಎಂದು ಹೇಳಿದರು.

ಮುಂದುವರಿದು ಅವರು, "ಇಂದಿನ ಯಾಂತ್ರಿಕ ಬದುಕಿನಲ್ಲಿ ಮಾನವರು ಆತ್ಮಶಾಂತಿಯನ್ನು ಕಳೆದುಕೊಂಡಿದ್ದಾರೆ. ಅಂತಹ ಸಂದರ್ಭದಲ್ಲಿ 'ಓಂ ನಮಃ ಶಿವಾಯ' ಮಂತ್ರ ಪಠಣೆ ಮತ್ತು ಸತ್ಸಂಗದ ಮಾರ್ಗ ಮನಸ್ಸಿಗೆ ಶಾಂತಿ ನೀಡುತ್ತದೆ. ಸಿದ್ಧಾರೂಢರ ಕಥಾಮೃತವನ್ನು ಶ್ರದ್ಧೆಯಿಂದ ಓದಿದರೆ ಹಾಗೂ ಕೇಳಿದರೆ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳು ಸಿದ್ಧಿಸುತ್ತವೆ. ಈ ಪವಿತ್ರ ಗ್ರಂಥದಲ್ಲಿ ನಾಲ್ಕು ವೇದಗಳು, ಆರು ಶಾಸ್ತ್ರಗಳು, ಹದಿನೆಂಟು ಪುರಾಣಗಳು ಹಾಗೂ ಇಪ್ಪತ್ತೈದು ಆಗಮಗಳ ಸಾರ ಅಡಕವಾಗಿದೆ. ಪ್ರತಿಯೊಬ್ಬರ ಮನಸ್ಸಿನಲ್ಲಿರುವ ದುಷ್ಟ ಗುಣಗಳನ್ನು ದೂರ ಮಾಡಿ, ಒಳ್ಳೆಯ ಜೀವನದ ಮಾರ್ಗವನ್ನು ತೋರಿಸುವ ಶಕ್ತಿ ಸತ್ಸಂಗಕ್ಕಿದೆ," ಎಂದು ಭಕ್ತರಿಗೆ ಆಧ್ಯಾತ್ಮಿಕ ಸಂದೇಶ ನೀಡಿದರು.

ಇದೇ ವೇಳೆ ಕತಾಮೃತ ಪಾರಾಯಣ ಸೇವೆಯನ್ನು ನೆರವೇರಿಸುತ್ತಿರುವ ಗ್ರಾಮದ ಹೊನ್ನಪ್ಪನವರ ಮಗ ಈರಣ್ಣ ಮಾತನಾಡಿ, "ಗ್ರಾಮದಲ್ಲಿ ಇಂತಹ ಧಾರ್ಮಿಕ ಕಾರ್ಯಕ್ರಮಗಳು ನಡೆಯುವುದರಿಂದ ಯುವ ಪೀಳಿಗೆಗೆ ಸಂಸ್ಕಾರ ಮತ್ತು ಭಕ್ತಿಯ ಅರಿವು ಮೂಡುತ್ತದೆ. ಶ್ರೀ ಸದ್ಗುರು ಸಿದ್ಧಾರೂಢರ ಕೃಪೆಯಿಂದ ಈ ಕಾರ್ಯಕ್ರಮವನ್ನು ಆಯೋಜಿಸುವ ಅವಕಾಶ ದೊರೆತಿದ್ದು ನಮ್ಮ ಕುಟುಂಬಕ್ಕೆ ಇದು ಭಾಗ್ಯವಾಗಿದೆ. ಪ್ರತಿದಿನ ಭಕ್ತರು ಭಕ್ತಿಭಾವದಿಂದ ಭಾಗವಹಿಸುತ್ತಿರುವುದು ಸಂತಸ ತಂದಿದೆ," ಎಂದು ಹೇಳಿದರು.

ಅವರು ಮುಂದುವರಿದು, "ಇಂದಿನ ಕಾಲದಲ್ಲಿ ಜನರು ಒತ್ತಡದ ಬದುಕಿನಲ್ಲಿ ಆಧ್ಯಾತ್ಮಿಕತೆಯಿಂದ ದೂರವಾಗುತ್ತಿದ್ದಾರೆ. ಆದರೆ ಇಂತಹ ಕತಾಮೃತ ಪಾರಾಯಣಗಳು ಮನಸ್ಸಿಗೆ ನೆಮ್ಮದಿ ನೀಡುವುದರ ಜೊತೆಗೆ ಸಮಾಜದಲ್ಲಿ ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುತ್ತವೆ. ಎಲ್ಲ ಭಕ್ತರು ಕುಟುಂಬ ಸಮೇತರಾಗಿ ಭಾಗವಹಿಸಿ ಸದ್ಗುರುವಿನ ಕೃಪೆಗೆ ಪಾತ್ರರಾಗಬೇಕು," ಎಂದು ಮನವಿ ಮಾಡಿದರು.

ಶ್ರೀ ಸದ್ಗುರು ಶಿವಾನಂದ ಭಾರತಿ ಮಹಾಸ್ವಾಮಿಗಳ ಕೃಪಾಶೀರ್ವಾದದೊಂದಿಗೆ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಗುರುಹಿರಿಯರು, ಮಹಿಳೆಯರು, ಯುವಕರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡು ಧಾರ್ಮಿಕ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಿದ್ದಾರೆ.

ಕಾರ್ಯಕ್ರಮದ ಅಂಗವಾಗಿ ನಿತ್ಯ ಪ್ರಸಾದ ವಿನಿಯೋಗ, ಭಜನಾ ಕಾರ್ಯಕ್ರಮ ಹಾಗೂ ಸತ್ಸಂಗಗಳು ನಡೆಯುತ್ತಿದ್ದು, ಸಂಜೀವರಾಯನಕೋಟೆ ಗ್ರಾಮದಲ್ಲಿ ಸಂಪೂರ್ಣ ಭಕ್ತಿಮಯ ವಾತಾವರಣ ನಿರ್ಮಾಣವಾಗಿದೆ.

# 3 ಸ್ಟಾರ್ ರೇಟಿಂಗ್: ಸಾರ್ವಜನಿಕರು ಪಾಲಿಕೆಯೊಂದಿಗೆ ಕೈಜೋಡಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.22 : ರಾಯಚೂರು ಮಹಾನಗರ ಪಾಲಿಕೆ ಸ್ವಚ್ಛ ಸರ್ವೇಕ್ಷಣ್-2026ರ ಮೌಲ್ಯ ಮಾಪನದ ಅಡಿಯಲ್ಲಿ ಗಾರ್ಬೇಜ್ಫ್ರೀಸಿಟಿ (ಜಿ.ಎಫ್.ಸಿ) 3 ಸ್ಟಾರ್ ರೇಟಿಂಗ್ಗೆ ರಾಯಚೂರು ಮಹಾನಗರ ಪಾಲಿಕೆಯು ಅರ್ಜಿ ಸಲ್ಲಿಸುತ್ತಿದ್ದು, ಸಾರ್ವಜನಿರು ಪಾಲಿಕೆಯೊಂದಿಗೆ ಕೈಜೋಡಿಸಬೇಕೆಂದು ಕೋರಲಾಗಿದೆ.

ಎಲ್ಲಾ ನಾಗರಿಕರು ಪರಿಣಾಮಕಾರಿ ಘನತ್ಯಾಜ್ಯ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಸ್ವಚ್ಛತೆಯ ಮಾನದಂಡಗಳನ್ನು ಕಾಪಾಡಿಕೊಳ್ಳಲು ನಗರವು ಸಾಕಷ್ಟು ತ್ಯಾಜ್ಯ ಸಂಸ್ಕರಣಾ ಸೌಲಭ್ಯಗಳನ್ನು ಸ್ಥಾಪಿಸಿದೆ. ಸರಿಯಾದ ತ್ಯಾಜ್ಯ ವಿಂಗಡಣೆ ಪದ್ಧತಿಗಳನ್ನು ಅನುಸರಿಸುವ ಮೂಲಕ ಮತ್ತು ನಗರವನ್ನು ಸ್ವಚ್ಛ ಮತ್ತು ನೈರ್ಮಲ್ಯವಾಗಿಡಲು ಕೊಡುಗೆ ನೀಡುವ ಮೂಲಕ ಈ ಮೌಲ್ಯ ಮಾಪನ ಪ್ರಕ್ರಿಯೆಯಲ್ಲಿ ಎಲ್ಲಾ ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ ಕಡ್ಡಾಯವಾಗಿದ್ದು, ದಯವಿಟ್ಟು ನಿಮ್ಮ ಮನೆಯಲ್ಲಿಯೇ ಒಣ ಕಸ ಮತ್ತು ಆರ್ದ್ರಕಸವನ್ನು ಪ್ರತ್ಯೇಕವಾಗಿ ಎರಡು ಡಬ್ಬಗಳಲ್ಲಿ ಸಂಗ್ರಹಿಸಿ. ನಗರಸಭೆಯ ವಾಹನ ಬಂದಾಗ ಮಾತ್ರ ಹೊರಗಿಡಬೇಕು. ಒಣಕಸವನ್ನು ಪ್ಲಾಸ್ಟಿಕ್, ಕಾಗದ, ಗಾಜು ಎಂದೂ ಪ್ರತ್ಯೇಕಿಸಿದರೆ ಅದು ಮರು ಬಳಕೆಗೆ ಸಹಕಾರಿಯಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯಬೇಡಿ: ರಸ್ತೆ, ನಾಲಾ, ಖಾಲಿ ಜಾಗಗಳಲ್ಲಿ ಕಸ ಎಸೆಯುವುದನ್ನು ತಪ್ಪಿಸಿ. ಸ್ವಚ್ಛತೆಗಾಗಿ ಇರಿಸಲಾಗಿರುವ ತೊಟ್ಟಿಗಳನ್ನು ಮಾತ್ರ ಬಳಸಿಬೇಕು. ಪ್ಲಾಸ್ಟಿಕ್ನಿಷೇಧವನ್ನು ಪಾಲಿಸಬೇಕು. ಶಾಪಿಂಗ್ಗೆ ಹೋದಾಗ ಬಟ್ಟೆಯ ಚೀಲಗಳನ್ನು ಬಳಸಬೇಕು. ನಿಮ್ಮ ಸುತ್ತಮುತ್ತಲಿನಲ್ಲಿ ಕಸ ತುಂಬಿಕೊಂಡಿದ್ದರೆ, ಸಾರ್ವಜನಿಕಸ್ಥಳ ಅಶುದ್ಧವಾಗಿದ್ದರೆ, ಅದರ ಫೋಟೋತೆಗೆದು ಸ್ವಚ್ಛತಾ ಆಫ್ ಅಥವಾ ಮೈಗವ್ ಆಫ್ ಮೂಲಕ ದೂರು ನೋಂದಾಯಿಸಬಹುದಾಗಿದೆ. ಇದರಿಂದ ಸಮಸ್ಯೆ ಪರಿಹಾರವಾಗುವುದರ ಜೊತೆಗೆ ನಮ್ಮ ನಗರದ ದೂರು ನಿವಾರಣಾ ಸಾಮರ್ಥ್ಯವೂ ಹೆಚ್ಚಾಗುತ್ತದೆ. ಸ್ವಚ್ಛತಾ ಸಂಬಂದಿ , ನಿಮ್ಮ ಅಭಿಪ್ರಾಯವನ್ನು ವೋಟ್ಫಾರ್ಮೈಸಿಟಿ ಆಫ್ ಮೂಲಕ ದಾಖಲಿಸಿ. ನಾಗರಿಕರ ಪ್ರತಿಕ್ರಿಯೆಗೆ ಸರ್ವೇಕ್ಷಣೆಯಲ್ಲಿ ಪ್ರತ್ಯೇಕ ಅಂಕಗಳಿದ್ದು, ನಿವಾಸಿಗಳು ತಮ್ಮ ಸಂಪೂರ್ಣ ಬೆಂಬಲ ಮತ್ತು ಸಹಕಾರವನ್ನು ನೀಡುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವ ಹಕ್ಕುಗಳ ಆಯೋಗದ ಹೆಸರು ದುರ್ಬಳಕೆ: ಪ್ರಕರಣ ದಾಖಲು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಹೆಸರನ್ನು ದುರ್ಬಳಕೆ ಮಾಡಿಕೊಂಡು ಸಾರ್ವಜನಿಕರಲ್ಲಿ ಗೊಂದಲ ಮೂಡಿಸಿದ ಆರೋಪದ ಮೇಲೆ ಮಹಿಳೆಯೊಬ್ಬರ ವಿರುದ್ಧ ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ನಗರದ ಮೋಕಾ ರಸ್ತೆಯ ಕೆ.ಆರ್.ಎಸ್ ಫಂಕ್ಷನ್ ಹಾಲ್ನಲ್ಲಿ ಮಾರ್ಚ್ 10 ಮತ್ತು 11 ರಂದು ಕಾರ್ಯಕ್ರಮವೊಂದನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ಪರಿಷತ್ ಎಂಬ ಸಂಸ್ಥೆಯ ಅಧ್ಯಕ್ಷೆ ಜೆ. ಪುಷ್ಪ ಮತ್ತು ಸದಸ್ಯರು, ತಮ್ಮ ಸಂಸ್ಥೆಯೇ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಎನ್ನುವಂತೆ ಬಿಂಬಿಸಿ ಸಾರ್ವಜನಿಕರನ್ನು ದಾರಿ ತಪ್ಪಿಸಿದ್ದಾರೆ ಎಂದು ದೂರಲಾಗಿದೆ.ಈ ಬಗ್ಗೆ ಮಾಹಿತಿ ಸಂಗ್ರಹಿಸಿದ ಪೊಲೀಸರು, ಸರ್ಕಾರಿ ಸಂಸ್ಥೆಯ ಹೆಸರನ್ನು ಕಾನೂನುಬಾಹಿರವಾಗಿ ಬಳಸಿದ್ದಕ್ಕಾಗಿ ಜೆ. ಪುಷ್ಪ ಮತ್ತು ಇತರ ಸದಸ್ಯರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

## ಶ್ರಮ ಸಂಸ್ಕೃತಿಯಿಂದ ಬದುಕು ಉಜ್ವಲ : ರಂಭಾಪುರಿ ಶ್ರೀಗಳು

• ಮಲ್ಲಮ್ಮ ನುಡಿ ವಾರ್ತೆಯಡ್ರಾಮಿ



ಮೇ-22:ಭಗವಂತನ ಸೃಷ್ಟಿಯಲ್ಲಿ ಎಲ್ಲರೂ ಬದುಕಿ ಬಾಳುವ ಅವಕಾಶ ಕೊಟ್ಟಿರುವನು. ಸಾಧನೆಯಿಂದ ಶ್ರೇಯಸ್ಸನ್ನು ಕಾಣಲು ಸಾಧ್ಯ. ಶ್ರಮ ಸಂಸ್ಕೃತಿಯಿಂದಬದುಕು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಶನಿವಾರ ತಾಲೂಕಿನ ಬೆಣ್ಣೂರು ಗ್ರಾಮದ ಶ್ರೀಮದ್ ರಂಭಾಪುರಿ ಶಾಖಾ ಹಿರೇಮಠದ ನೂತನ ಕಟ್ಟಡದ ಉದ್ಘಾಟನೆ-ಶಿವಲಿಂಗ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಮಾನವ ಜೀವನದಲ್ಲಿ ಧರ್ಮ ಅರ್ಥ ಕಾಮ ಮೋಕ್ಷ ಎಂಬ ನಾಲ್ಕು ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸದಿದ್ದರೆ ಜೀವನ ವ್ಯರ್ಥವಾಗುತ್ತದೆ. ಮನುಷ್ಯನಿಗೆ ಬೇಕಾಗಿರುವುದು ಸಂಪತ್ತು ಮತ್ತು ತನ್ನ ಬಯಕೆಗಳನ್ನು ಪೂರೈಸಿಕೊಳ್ಳುವುದಷ್ಟನ್ನೇ ಮನುಷ್ಯ ಗುರಿಯಾಗಿಟ್ಟುಕೊಂಡಿದ್ದಾನೆ. ಆದರೆ ಧರ್ಮದಿಂದ ನಡೆದಾಗ ಭಗವಂತನ ದಯೆಯಿಂದ ಉಳಿದವುಗಳೆಲ್ಲವೂ ಕೂಡ ಪ್ರಾಪ್ತವಾಗುತ್ತವೆ. ವಿದ್ಯೆ ಮತ್ತು ಸಂಪತ್ತು ಗಳಿಸುವಾಗ ಬಹಳ ವರ್ಷ ಬದುಕುತ್ತೇವೆ ಎಂಬ ಆಶಾದಾಯಕ ಭಾವನೆ ಇರಬೇಕು. ಆದರೆ ಧರ್ಮಾಚರಣೆ ಮಾಡುವಾಗ ಯಾವ ಘಳಿಗೆಯಲ್ಲಿ ಮೃತ್ಯು ದೇವತೆ ನಮ್ಮೆಲ್ಲರನ್ನು ಎಳೆದು ಒಯ್ಯುತ್ತಾಳೆ ಎಂಬ ಭಯಭೀತಿಯನ್ನು ಇಟ್ಟುಕೊಂಡು ಧರ್ಮ ಪರಿಪಾಲನೆ ಮಾಡಿಕೊಂಡು ಬರಬೇಕಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ದರ್ಶನದ ಆದರ್ಶ ಚಿಂತನೆಗಳನ್ನು ಬೋಧಿಸಿದ್ದಾರೆ. ಅವುಗಳನ್ನು ಅರಿತು ಆಚರಿಸಿ ಬಾಳಿದಾಗ ಜೀವನ ಸಾರ್ಥಕಗೊಳ್ಳುತ್ತದೆ. ಪ್ರವಚನ ಪ್ರವೀಣ ಶಿವಲಿಂಗಯ್ಯ ಶಾಸ್ತ್ರಿಗಳವರು ಹಳ್ಳಿ ಹಳ್ಳಿಗೆ ಸಂಚರಿಸಿ ಭಕ್ತರಲ್ಲಿ ಜಾಗೃತಿ ಮೂಡಿಸಿ ಧರ್ಮ ಸಂಸ್ಕೃತಿಗಳನ್ನು ಪ್ರಸಾರಪಡಿಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ಭಕ್ತರು ಭಕ್ತಿಯಿಂದ ಕೊಟ್ಟ ದಾನ ಧರ್ಮಗಳನ್ನು ಮಠದ ಅಭಿವೃದ್ಧಿಗಾಗಿ ಮತ್ತು ಭಕ್ತರ ಒಳಿತಿಗಾಗಿ ವಿನಿಯೋಗಿಸಿರುವುದು ಅವರಲ್ಲಿರುವಂಥ ಧರ್ಮ ನಿಷ್ಠೆಯನ್ನು ಕಾಣಬಹುದು. ಶ್ರೀ ಮಠ ಅಭಿವೃದ್ಧಿಯಾಗಿ ಭಕ್ತರಿಗೆ ಮಾರ್ಗದರ್ಶನ ನೀಡಲೆಂದರು. ಆಲೂರು ಹಿರೇಮಠದ ಕೆಂಚವೃಷಭೇಂದ್ರ ಶಿವಾಚಾರ್ಯ ಸ್ವಾಮಿಗಳು ಮತ್ತು ಕೆಂಭಾವಿ ಹಿರೇಮಠದ ಚನ್ನಬಸವ ಶಿವಾಚಾರ್ಯ ಸ್ವಾಮಿಗಳು ಇನ್ನುಳಿದ ಮಠಾಧೀಶರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ್, ಶಿವಶರಣಪ್ಪ ಸಿರಿ, ಹಿರೇಮಠದ ಸಿದ್ದರಾಮಯ್ಯಸ್ವಾಮಿ, ಚಂದ್ರಶೇಖರ ಪುರಾಣಿಕ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಶಿವಲಿಂಗಯ್ಯ ಶಾಸ್ತ್ರಿಗಳು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.ಸಮಾರಂಭಕ್ಕೂ ಮುನ್ನ ಸಾರೋಟ ಭವ್ಯ ಮೆರವಣಿಗೆ ಜರುಗಿತು. ಕುಂಭ ಹೊತ್ತ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು ವೀರಗಾಸೆ ಪುರವಂತರರು ಮತ್ತು ಭಜನಾ ಮಂಡಳಿಯವರು ಪಾಲ್ಗೊಂಡು ಮೆರವಣಿಗೆಗೆ ಮೆರಗು ತಂದರು.



ಗುರುಮಠಕಲ್: ಜಿಲ್ಲೆ ಹಾಗೂ ತಾಲೂಕಿನಲ್ಲಿ ಅಕ್ರಮ ಗೋ ಸಾಗಾಟ ಮತ್ತು ಗೋಹತ್ಯೆ ತಡೆಗೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುವಂತೆ ಹಿಂದೂ ಪರ ಸಂಘಟನೆಗಳು ಗುರುಮಠಕಲ್ ಆರಕ್ಷಕ ನಿರೀಕ್ಷರಾದ ದೌಲತ್ ಎನ್ ಕುರಿಯವರಿಗೆ ಶುಕ್ರವಾರ ಮನವಿ ಪತ್ರ ನೀಡಿದರು.

## ಕಲಬುರಗಿ: ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.22-ಕಲಬುರಗಿ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ 2026-27ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 3ಎ, 3ಬಿ, ಪ.ಜಾ/ಪ.ಪಂ.ವರ್ಗದ ಪಿ.ಯು.ಸಿ, ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಅರ್ಹ ವಿದ್ಯಾರ್ಥಿಗಳು <https://shp.karnataka.gov.in/bcwd> ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಜೂನ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

# ಕಲಬುರಗಿ: ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.22-ಕಲಬುರಗಿ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ 2026-27ನೇ ಸಾಲಿಗೆ ಪ್ರವೇಶ ಪಡೆಯಲು ಎಸ್.ಹೆಚ್.ಪಿ. ಪೋರ್ಟಲ್‌ದಲ್ಲಿ (State Hostel Portal (SHP) ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಪ್ರವರ್ಗ-1, 2J, 2©, 3J, 3©, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ 5ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು <https://shp.karnataka.gov.in/bcwd> ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಜೂನ್ 8 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ತಾಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ, ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ <https://bcwd.karnataka.gov.in/> ವೆಬ್‌ಸೈಟ್‌ನ್ನು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bc-wdhelpline@gmail.com <mailto:bcwdhelpline@gmail.com> ಇ-ಮೇಲ್ ಮೂಲಕ ಅಥವಾ ಜಿಲ್ಲಾ/ತಾಲ್ಲೂಕಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಕೋರಲಾಗಿದೆ.

# ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯ ಸುಧಾರಣಾ ಕ್ರಮಕ್ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸರಿಯಾಗಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಶೌಚಾಲಯಗಳು ಸೇರಿದಂತೆ ಎಲ್ಲಾ ಕಡೆಗೆ ಶುಚಿತ್ವ ಕಾಣಬೇಕು. ಕೈಗೊಂಡ ಎಲ್ಲ ಕ್ರಮಗಳ ಬಗ್ಗೆ ಭಾವಚಿತ್ರ ಸಮೇತ ಜಿಲ್ಲಾಧಿಕಾರಿಗಳಿಗೆ ವರದಿ ಮಾಡಬೇಕು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ ಅವರು ಕಿಮ್ಸನ ಬೋಧಕ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮೇ 21ರಂದು ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಹಾರ ಇಲಾಖೆ, ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.ಆಕಸ್ಮಿಕ ಭೇಟಿ ವೇಳೆ ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಕಣ್ಣಿಗೆ ಅಶುಚಿತ್ವ ರಾಚಿತು. ಇದು ನಿಮ್ಮ ಗಮನಕ್ಕೆ ಬಂದಿಲ್ಲವೇ ಎಂದು ಅಧಿಕಾರಿಗಳಿಗೆ ಪ್ರಶ್ನಿಸಿದ ಅಧ್ಯಕ್ಷರು, ಅಂಗಡಿಯಲ್ಲಿ ಜಾಗ ಇಲ್ಲ ಎಂದು ಆಹಾರ ಪದಾರ್ಥಗಳ ಚೀಲಗಳನ್ನು ಎಲ್ಲೆಂದರಲ್ಲಿ ಬೀಸಾಕುವುದು ಅಶಿಸ್ತನ್ನು ತೋರುತ್ತದೆ ಎಂದರು. ಜಾಗೃತಿ ಸಮಿತಿ ಸದಸ್ಯರ ಫಲಕಗಳನ್ನು ಕಾಣುವಂತೆ ಹಾಕಬೇಕು ಎಂದು ಸೂಚನೆ ನೀಡಿದರು.

ಹಾಸ್ಟೆಲಗಳಿಗೆ ಭೇಟಿ ನೀಡಿದ ವೇಳೆ ವಸತಿ ನಿಲಯದಲ್ಲಿನ ವಿದ್ಯಾರ್ಥಿಗಳಿಗೆ ಕೆಲವು ಮೂಲ ಸೌಕರ್ಯ ಕಲ್ಪಿಸದೇ ಇರುವುದು ಕಂಡು ಬಂದಿದೆ. ಕೆಲ ವಸತಿ ನಿಲಯಗಳಲ್ಲಿ ಮಕ್ಕಳಿಗೆ ಶುದ್ಧ ನೀರು ಸಿಗುತ್ತಿಲ್ಲ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಿಸಿಟಿವಿ ಕ್ಯಾಮರಾ ಅಳವಡಿಸಿಲ್ಲ. ರಾತ್ರಿ ಕಾವಲುಗಾರರು ಇಲ್ಲ. ಲೈಬ್ರರಿಗಳಲ್ಲಿ ಪುಸ್ತಕಗಳಿಲ್ಲ. ಕಂಪ್ಯೂಟರ್ ರೂಮಿನಲ್ಲಿ ಕಂಪ್ಯೂಟರಗಳು ಕಾಣುತ್ತಿಲ್ಲ. ಕೆಲವು ಕಡೆಗಳಲ್ಲಿ ಇರುವ ಕಂಪ್ಯೂಟರಗಳು ಕೆಟ್ಟು ಹೋಗಿವೆ. ನಿಯಮಿತವಾಗಿ ಮೊಟ್ಟೆ ನೀಡುತ್ತಿಲ್ಲ. ಆಹಾರವು ಶುಚಿ ಮತ್ತು ರುಚಿಯಾಗಿಲ್ಲ. ಒಂದೇ



ಕೋಣೆಯಲ್ಲಿ ಹತ್ತಕ್ಕು ಹೆಚ್ಚು ವಿದ್ಯಾರ್ಥಿಗಳನ್ನು ಇರಿಸಿರುವುದು ಕಂಡು ಬಂದಿದೆ. ತೆಗೆದುಕೊಂಡ ದಾಸ್ತಾನಿಗೂ ಬಳಕೆಯಾದ ದಾಸ್ತಾನಿಗೂ ತಾಳೆ ಆಗದಿರುವ ಎಷ್ಟೋ ಲೋಪಗಳ ಅಂಶಗಳನ್ನು ಹಾಸ್ಟೇಲಗಳ ಭೇಟಿ ವೇಳೆ ಕಂಡು ಬಂದಿವೆ. ಆದ್ದರಿಂದ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಉಪ ನಿರ್ದೇಶಕರು ಮತ್ತು ತಾಲೂಕಿನ ಅಧಿಕಾರಿಗಳು ಹಾಗು ಅಲ್ಪಸಂಖ್ಯಾತ ಕಲ್ಯಾಣ ಇಲಾಖಾಧಿಕಾರಿಗಳು ಮತ್ತು ತಾಲೂಕಿನ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸಿ ಕೂಡಲೇ ಎಲ್ಲ ಪರಿಹಾರ ಕ್ರಮಗಳನ್ನು ತೆಗೆದುಕೊಂಡು ಜಿಲ್ಲಾಡಳಿತಕ್ಕೆ ವರದಿ ನೀಡಬೇಕು ಎಂದು ಅಧ್ಯಕ್ಷರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮಧ್ಯಾಹ್ನ ಬಿಸಿ ಊಟ ಯೋಜನೆಯು ವಿದ್ಯಾರ್ಥಿಗಳಿಗೆ ಸಾಕಷ್ಟು ಉಪಯುಕ್ತವಾಗಿದೆ. ಆದರೆ ಈ ಯೋಜನೆಯನ್ನು ಅನುಷ್ಠಾನ ಮಾಡುವಲ್ಲಿ ಅಧಿಕಾರಿಗಳು ನಿರ್ಲಕ್ಷ ?? ವಹಿಸುವುದು ಕಾಣುತ್ತಿದೆ.

ಆಹಾರ ಸಾಮಗ್ರಿಗಳ ಖರೀದಿಗೆ ಸಂಬಂಧಿಸಿದ ದಾಸ್ತಾನು ಸ್ವೀಕೃತಿ ವಹಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿಲ್ಲ. ನಾಮಕಾವಾಸ್ತೆ ಅನ್ನುವ ಹಾಗೆ ಆಹಾರ ನೀಡುವ ಮೆನು ಹಾಕಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಪಾಲಕರ ಕೋರಿಕೆ ಮತ್ತು ವಿದ್ಯಾರ್ಥಿಗಳ ಮನವಿಗೆ ಮಾನ್ಯತೆ ನೀಡಿ ಎಲ್ಲ ಶಾಲೆಗಳಲ್ಲಿ ಮೊಟ್ಟೆಯನ್ನು ಕಡ್ಡಾಯಗೊಳಿಸಬೇಕು ಎಂದು ಸೂಚನೆ ನೀಡಿದರು.

ವಸತಿ ನಿಲಯಗಳಲ್ಲಿ ಹೆಚ್ಚಾಗಿ ರೈಸ್ ಊಟವನ್ನೇ ನೀಡುತ್ತಾರೆ ಎಂದು ವಿದ್ಯಾರ್ಥಿಗಳು ದೂರುತಿದ್ದು, ಇದನ್ನು ಸರಿಪಡಿಸಬೇಕು. ಚಪಾತಿ, ರೊಟ್ಟಿ ಸಮೇತ ಗುಣಮಟ್ಟದ ಊಟ ನೀಡಲು ಕ್ರಮ ವಹಿಸಬೇಕು ಎಂದು ಆಯೋಗದ ಸದಸ್ಯರಾದ ಮಾರುತಿ ಎಂ ದೊಡ್ಡಲಿಂಗಣ್ಣವರ ತಿಳಿಸಿದರು.

ಆಹಾರ ತಯಾರಿಕೆಯನ್ನು ಅಚ್ಚುಕಟ್ಟಾಗಿ ಮಾಡುವ ಬಗ್ಗೆ ಮತ್ತು ರುಚಿ ಶುಚಿಯಾದ ಆಹಾರ ತಯಾರಿಕೆಯ ಬಗ್ಗೆ ವಸತಿ ನಿಲಯಗಳಲ್ಲಿನ ಅಡುಗೆದಾರರಿಗೆ ಕಾಲಕಾಲಕ್ಕೆ ಅರಿವು ಮೂಡಿಸುವ ಕಾರ್ಯಕ್ರಮ ರೂಪಿಸಬೇಕು ಎಂದು ಸದಸ್ಯರಾದ ಕೆ.ಎಸ್.ವಿಜಯಲಕ್ಷ್ಮಿ ?? ಅವರು ಸೂಚನೆ ನೀಡಿದರು.

ಒಂದು ತಿಂಗಳ ಗಡುವು: ಈ ವೇಳೆ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ ಇಟ್ನಾಳ ಅವರು ಮಾತನಾಡಿ, ಕರ್ನಾಟಕ ರಾಜ್ಯ ಆಹಾರ ಆಯೋಗವು ಕೊಪ್ಪಳ ಜಿಲ್ಲೆಗೆ ಆಗಮಿಸಿ, ವಿವಿಧೆಡೆ ಆಕಸ್ಮಿಕ ಭೇಟಿ ಕೈಗೊಂಡು ಗುರುತಿಸಿದ ಲೋಪಗಳ ಬಗ್ಗೆ ಸಭೆಯ ಗಮನಕ್ಕೆ ತಂದಿದ್ದಾರೆ. ಆಯಾ ಇಲಾಖೆಗಳ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸಿ ಈ ವಿಷಯಕ್ಕೆ ಮೊದಲಾದ್ಯತೆ ನೀಡಿ, ಕೈಗೊಂಡ ಕ್ರಮಗಳ ಬಗ್ಗೆ ವರದಿಯನ್ನು ಒಂದು ತಿಂಗಳೊಳಗೆ ಜಿಲ್ಲಾಡಳಿತಕ್ಕೆ ಮತ್ತು ಜಿಲ್ಲಾ ಪಂಚಾಯತ್ ಸಿಇಓ ಅವರಿಗೆ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಗಡುವು ವಿಧಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ವರ್ಣಿತ್ ನೇಗಿ, ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರಾದ ಲಿಂಗರಾಜ ಕೋಟೆ, ಸುಮಂತ್ ರಾವ್, ಎ.ರೋಹಿಣಿ ಪ್ರಿಯ, ಹೆಚ್ಚುವರಿ ಜಿಲ್ಲಾ ಪೊಲೀಸ್ ವಷ್ಠಾಧಿಕಾರಿ ಆರ್.ಹೇಮಂತ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೋಗಲದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬದ ಕಲ್ಯಾಣಾಧಿಕಾರಿಗಳಾದ ಡಾ. ಟಿ.ಲಿಂಗರಾಜು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅಜ್ಮೀರ ಅಲಿ, ಕೊಪ್ಪಳ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತದ ಅಂಕಿತ ಅಧಿಕಾರಿಗಳಾದ ಡಾ. ಅಲಕನಂದ ಮಳಗಿ, ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಆಹಾರ ಇಲಾಖೆ ಉಪನಿರ್ದೇಶಕರಾದ ವಿಶ್ವನಾಥಗೌಡ ಎಂ.ಎನ್. ಅವರು ಸ್ವಾಗತಿಸಿದರು.

# ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 22:ಜಿಲ್ಲೆಯಲ್ಲಿ ಆರೋಗ್ಯ ಸೇವೆಗಳು ಪ್ರತಿಯೊಬ್ಬರಿಗೂ ಸರಿಯಾದ ಸಮಯದಲ್ಲಿ ಲಭ್ಯವಾಗಬೇಕು ಮತ್ತು ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗುರುವಾರ ನಗರದ ಕೆಆರ್‌ಐಡಿಎಲ್ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಆರೋಗ್ಯ ಸುಧಾರಣೆಗೆ ಸಂಬಂಧಿಸಿದಂತೆ ಜಿಲ್ಲಾ ಆರೋಗ್ಯ ಸಂಘದ ಸಭೆ ಜರುಗಿಸಿ ಅವರು ಮಾತನಾಡಿದರು.

ಹೆಚ್ಚುವರಿ 'ನಮ್ಮ ಕ್ಲಿನಿಕ್' ಸ್ಥಾಪನೆಗೆ ಪ್ರಸ್ತಾವನೆ:

ಜಿಲ್ಲೆಯಲ್ಲಿ ಪ್ರಸ್ತುತ 20 ನಮ್ಮ ಕ್ಲಿನಿಕ್‌ಗಳು ಕಾರ್ಯನಿರ್ವಹಿಸುತ್ತಿವೆ. ನಗರ ಪ್ರದೇಶಗಳ ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಜನರಿಗೆ ಸಕಾಲದಲ್ಲಿ ಆರೋಗ್ಯ ಸೇವೆ ಸಿಗುವಂತಾಗಲು, ಅವಶ್ಯಕತೆ ಇರುವ ಕಡೆಗಳಲ್ಲಿ ಹೊಸ ನಮ್ಮ ಕ್ಲಿನಿಕ್‌ಗಳನ್ನು ತೆರೆಯಲು ಪ್ರಸ್ತಾವನೆ ಸಲ್ಲಿಸುವಂತೆ ಸಿಇಓ ಸೂಚಿಸಿದರು.

ತಾಯಿ-ಶಿಶು ಮರಣ ತಡೆಗೆ ಕ್ರಮ:

ಗರ್ಭಿಣಿಯರ ದಾಖಲಾತಿಯನ್ನು ಕಡ್ಡಾಯವಾಗಿ 12 ವಾರಗಳ ಒಳಗಾಗಿ ಮಾಡಬೇಕು. ಇದರಿಂದ ಗರ್ಭಿಣಿಯರಲ್ಲಿ ಆರೋಗ್ಯ ಸಮಸ್ಯೆಗಳಿದ್ದರೆ ಬೇಗನೆ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು ಸಾಧ್ಯವಾಗುತ್ತದೆ ಮತ್ತು



ತಾಯಿ-ಶಿಶು ಮರಣವನ್ನು ತಡೆಯಬಹುದು ಎಂದು ತಿಳಿಸಿದರು.

ಶೇ.100 ಲಸಿಕಾ ಪ್ರಗತಿ ಸಾಧಿಸಿ:

ಹೆರಿಗೆಯಾದ ತಕ್ಷಣ ಮಗುವಿಗೆ ನೀಡಲಾಗುವ ಬಿ.ಸಿ.ಜಿ.,ಓರಲ್ ಪೋಲಿಯೋ ಹಾಗೂ ಹೆಪಟೈಟೀಸ್ ಬಿ ಲಸಿಕೆಗಳ ವಿತರಣೆಯಲ್ಲಿ ಶೇಕಡಾ 100ರಷ್ಟು ಪ್ರಗತಿ ಸಾಧಿಸಬೇಕು ಎಂದು ಕಟ್ಟುನಿಟ್ಟಿನ ಆದೇಶ ನೀಡಿದರು.

ತೊಡಕಿನ ಗರ್ಭಿಣಿಯರ ಆರೈಕೆ:

ಹೆಚ್ಚಿನ ಆರೋಗ್ಯ ಅಪಾಯ ಹೊಂದಿರುವ (ತೊಡಕಿನ) ಗರ್ಭಿಣಿಯರಿಗೆ ಪಿ.ಎಮ್.ಎಸ್.ಎಮ್.ಎ., ಇ.ಪಿ.ಎಮ್.ಎಸ್.ಎಮ್.ಎ ಹಾಗೂ ನಿಯಮಿತ ಆರೋಗ್ಯ ತಪಾಸಣೆಗಳ ಸಮಯದಲ್ಲಿ ವಿಶೇಷ ಆದ್ಯತೆ ನೀಡಿ ಚಿಕಿತ್ಸೆ ನೀಡಬೇಕು ಎಂದು ಅವರು ಸೂಚಿಸಿದರು.

ಹಾಸ್ಟೆಲ್ ಮಕ್ಕಳ ಆರೋಗ್ಯ ತಪಾಸಣೆ:

ಆರ್.ಬಿ.ಎಸ್.ಕೆ ವೈದ್ಯಕೀಯ ತಂಡವು ಜಿಲ್ಲೆಯ ಸುಮಾರು 80 ಹಾಸ್ಟೆಲ್‌ಗಳಿಗೆ ಪ್ರತಿ ತಿಂಗಳು ಕನಿಷ್ಠ ಒಂದು ಬಾರಿಯಾದರೂ ಭೇಟಿ ನೀಡಬೇಕು. ಅಲ್ಲಿನ ಮಕ್ಕಳಿಗೆ ಆರೋಗ್ಯ ತಪಾಸಣೆ ನಡೆಸಿ, ಆರೋಗ್ಯ ಶಿಕ್ಷಣ ನೀಡುವಂತೆ ನಿರ್ದೇಶನ ನೀಡಿದರು.

ಮುಂಗಾರು ಮುನ್ನೆಚ್ಚರಿಕೆ ಹಾಗೂ ಜಾಗೃತಿ:

ಮುಂಗಾರು ಮಳೆ ಪ್ರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ, ಸ್ಥಳೀಯ ಜನಪ್ರತಿನಿಧಿಗಳ ಸಹಕಾರದೊಂದಿಗೆ ಸೊಳ್ಳೆಗಳಿಂದ ಹರಡುವ ಕಾಯಿಲೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಜೊತೆಗೆ ನಾಯಿ ಕಡಿತ ಮತ್ತು ಹಾವು ಕಡಿತದ ಕುರಿತು ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ತಿಳಿಸಿದರು.

ಕುಡಿಯುವ ನೀರು ಹಾಗೂ ಕ್ಷಯರೋಗ ತಪಾಸಣೆ:

ಜಿಲ್ಲೆಯ ಕುಡಿಯುವ ನೀರಿನ ಮೂಲಗಳನ್ನು ನಿಯಮಿತವಾಗಿ ಪರೀಕ್ಷಿಸಬೇಕು ಮತ್ತು ಗ್ರಾಮ ಪಂಚಾಯತ್‌ಗಳೊಂದಿಗೆ ಸಮನ್ವಯ ಸಾಧಿಸಿ ವರದಿಗಳನ್ನು ಪರಿಶೀಲಿಸಬೇಕು. ಜಿಲ್ಲಾ ಆಸ್ಪತ್ರೆ, ಎಲ್ಲಾ ಸಾರ್ವಜನಿಕ ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಕ್ಷಯರೋಗ (ಟಿಬಿ) ತಪಾಸಣೆಯನ್ನು ವ್ಯಾಪಕವಾಗಿ ನಡೆಸಿ, ಆದಷ್ಟು ಬೇಗ ರೋಗ ಪತ್ತೆ ಹಚ್ಚಿ ಚಿಕಿತ್ಸೆ ಆರಂಭಿಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕ್ಷಯ ರೋಗ ನಿರ್ಮೂಲನಾ ಅಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ ಅಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳ ಆರೋಗ್ಯ ಅಧಿಕಾರಿಗಳು ಮತ್ತು ವಿವಿಧ ವೃಂದದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮೇ 26 ರಂದು ಕ್ಯಾಂಪಸ್ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ರೇಡಿಯೋ ಪಾರ್ಕ್ ಪ್ರದೇಶದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬೆಂಗಳೂರಿನ ನರಸಾಪುರದ ಹೋಂಡಾ ಮೋಟಾರ್ ಸೈಕಲ್ ಕಂಪನಿಯಲ್ಲಿ ಅಪ್ರೆಂಟಿಸ್ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಮೇ 26 ರಂದು ಬೆಳಿಗ್ಗೆ 9 ಗಂಟೆಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಕ್ಯಾಂಪಸ್ ಸಂದರ್ಶನ ನಡೆಯಲಿದೆ.

*ಅರ್ಹತೆ:*

ಫಿಟ್ಟರ್, ಟರ್ನರ್, ಎಲೆಕ್ಟ್ರಿಷಿಯನ್, ವೆಲ್ಡರ್, ಇ.ಎಂ., ಎಂ.ಎಂ.ವಿ., ಡೀಸೆಲ್ ಮೆಕ್ಯಾನಿಕ್, ಎಂ.ಇ.ವಿ ವೃತ್ತಿಗಳಲ್ಲಿ ಅಂತಿಮ ವರ್ಷದ ತರಬೇತಿ ಪಡೆಯುತ್ತಿರುವವರು ಅಥವಾ ಐಟಿಐ ಪೂರ್ಣಗೊಳಿಸಿದ ಆಸಕ್ತ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

*ಅಗತ್ಯವಿರುವ ದಾಖಲೆಗಳು:*

ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಐಟಿಐ ಅಂಕಪಟ್ಟಿ, ಎರಡು ಇತ್ತೀಚಿನ ಭಾವಚಿತ್ರಗಳು, ಆಧಾರ್ ಕಾರ್ಡ್ ಪ್ರತಿ, ಬಯೋಡೇಟಾ, ತಮ್ಮ ಸ್ಮಾರ್ಟ್ ಫೋನ್ ಅನ್ನು ತಪ್ಪದೇ ತರಬೇಕು.

ಸೂಚನೆ: ಅಭ್ಯರ್ಥಿಗಳ ವಯಸ್ಸು 18 ವರ್ಷ ಮೇಲ್ಪಟ್ಟಿರಬೇಕು. ಆಯ್ಕೆ ಪ್ರಕ್ರಿಯೆಯು ಲಿಖಿತ ಪರೀಕ್ಷೆ, ಸಂದರ್ಶನ ಮತ್ತು ವೈದ್ಯಕೀಯ ಪರೀಕ್ಷೆಗಳನ್ನು ಒಳಗೊಂಡಿರುತ್ತದೆ.

ಅರ್ಹ ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನದಲ್ಲಿ ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕುಎಂದು ಸಂಸ್ಥೆಯ ಪ್ರಾಚಾರ್ಯ ಕೆ.ಹೆಚ್.ಎಂ. ಪಂಡಿತಾರಾಧ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಕೋಲಾದಲ್ಲಿ ಮೀನುಗಾರರಿಂದ ಶಾಸಕ ಸೈಲ್‌ಅವರಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಪಟ್ಟಣದ ಪಿ.ಎಂ. ಹೈಸ್ಕೂಲ್ ಸಭಾಂಗಣದಲ್ಲಿ ಮೀನುಗಾರರರಕ್ಷಣಾ ವೇದಿಕೆ ಹಾಗೂ ವಿ.ಆರ್. ದೇಶಪಾಂಡೆ ಮೆಮೋರಿಯಲ್‌ಟ್ರಸ್ಟ್ ಹಳಿಯಾಳ ಇವರ ಸಂಯುಕ್ತಆಶ್ರಯದಲ್ಲಿ ನಡೆದ ಮೀನುಗಾರರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಬಡ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ, ಆರ್ಥಿಕ ನೆರವು, ವಿವಿಧಕ್ಷೇತ್ರದಲ್ಲಿ ಸಾಧನೆ ಮಾಡಿದಗಣ್ಯರಿಗೆ ಸನ್ಮಾನಕಾರ್ಯಕ್ರಮದಲ್ಲಿಶಾಸಕ ಸತೀಶ ಸೈಲ್‌ಅವರನ್ನು ಸನ್ಮಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿಪ್ರಮುಖರಾದಸುಜಾತಾಗಾಂವಕರ, ಪಾಂಡುರಂಗಗೌಡ, ಉದಯ ನಾಯಕ, ರಾಜು ಹರಿಕಂತ್ರ, ಎಂ.ಡಿ. ಹರಿಕಂತ್ರ, ವಿಠ್ಠಲದಾಸಕಾಮತ, ಮಹಾಂತೇಶರೇವಡಿ ಹಾಗೂ ಮೀನುಗಾರ ವೇದಿಕೆಯಜಿಲ್ಲಾಧ್ಯಕ್ಷಡಾ. ಹರಿಹರ ವಿ. ಹರಿಕಾಂತ ಮತ್ತಿತರರು ಉಪಸ್ಥಿತರಿದ್ದರು.

# ಹೂಳೆತ್ತುವ ಕಾಮಗಾರಿಯೇ ಅವೈಜ್ಞಾನಿಕ : ಮೂಡಂಗಿ ಆರೋಪ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ತದಡಿ ಬಂದರಿನಲ್ಲಿ ಕಳೆದ ಫೆಬ್ರವರಿಯಲ್ಲಿ 2.65 ಕೋಟಿ ರೂ. ವೆಚ್ಚದಲ್ಲಿ ನಡೆಸಲಾದ ಹೂಳೆತ್ತುವ ಕಾಮಗಾರಿಯು ಅಸಮರ್ಪಕವಾದ ಕಾರಣ ಕಾಮಗಾರಿಯ ಕುರಿತಂತೆ ಬೋಟ್ ನಿರ್ವಾಹಕರು, ಮೀನುಗರಾರು ಮತ್ತು ವಿವಿಧ ಮೀನುಗಾರಿಕೆಯ ಸಂಘಟನೆಗಳಿಂದ ವ್ಯಾಪಕ ತಕರಾರು ವ್ಯಕ್ತವಾಗಿದ್ದರಿಂದ ತದಡಿ ಬಂದರಿನಲ್ಲಿ ಅಧಿಕಾರಿಗಳ ಜೊತೆ ವಿಶೇಷ ಸಭೆ ನಡೆಸಲಾಯಿತು.

ತದಡಿ ಮೀನುಗರರ ಸಹಕಾರಿ ಸಂಘದ ಅಧ್ಯಕ್ಷ ಮಹೇಶ ಮೂಡಂಗಿ ಈ ಬಗ್ಗೆ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿ ಅತೀ ಶೀಘ್ರದಲ್ಲಿ ಕಾಮಗಾರಿಯ ಕೆಲಸವನ್ನು ವ್ಯವಸ್ಥಿತವಾಗಿ ಮಾಡಿ ಮುಗಿಸಿ ಅನುಕೂಲ ಮಾಡಿಕೊಡುವಂತೆ ಒತ್ತಾಯಿಸಿದರು.

ಮಳೆಗಾಲ ಪ್ರಾರಂಭವಾಗುತ್ತಿದ್ದಂತೆ ಬೋಟುಗಳು ಅಳಿವೆ ಪ್ರದೇಶದಲ್ಲಿ ಸಿಲುಕಿಕೊಂಡು ಹಾನಿಯಾಗುವುದನ್ನು ತಪ್ಪಿಸಲು ಕಳೆದ ಫೆಬ್ರವರಿ ತಿಂಗಳಲ್ಲಿ ಹೂಳೆತ್ತುವ ಕಾರ್ಯವನ್ನು ಬಂದರು ಇಲಾಖೆಯ ನಿರ್ವಹಣೆಯಲ್ಲಿ ಕೇರಳದ ಮೆ. ಎಸಿಇ ಕಂಪನಿ ವಹಿಸಿಕೊಂಡಿತ್ತು. ಸ್ಥಳೀಯ ಮೀನುಗಾರಿಕಾ ಧುರೀಣರನ್ನು ಹಾಗೂ ಸಂಬಂಧಿಸಿದವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ತನಗಿಷ್ಟ ಬಂದಂತೆ ಅವೈಜ್ಞಾನಿಕ ಕಾಮಗಾರಿಯನ್ನು ಮುಗಿಸಿ ನಾಪತ್ತೆಯಾಗಿದ್ದಾರೆ. ಅಲ್ಲಲ್ಲಿ ಬೇಡದ ಮಣ್ಣಿನ ಗುಡ್ಡೆ ರಾಶಿ ಹಾಗೆ ಇದ್ದು ಬೋಟ್ ಸಂಚಾರ ಅನುಕೂಲವಾಗುವ ಬದಲು ಇನ್ನಷ್ಟು ಅವಾಂತರಕ್ಕೆ ದಾರಿ ಮಾಡಿಕೊಟ್ಟಂತಾಗಿದೆ. ಕಾರಣ ಇಂತಹ ಅವೈಜ್ಞಾನಿಕ ಕಾಮಗಾರಿಯ ಗುಣಮಟ್ಟ ಪರಿಶೀಲಿಸಿ ಸಂಭಂದಪಟ್ಟ ಇಲಾಖೆಯು ಮುತುವರ್ಜಿ ವಹಿಸಿ ಕಾಮಗಾರಿಯನ್ನು ಸರಿಪಡಿಸಿ ಅನುಕೂಲಮಾಡಿಕೊಡಬೇಕೆಂಬುದು ಸ್ಥಳೀಯರು ಆಗ್ರಹಿಸಿದರು.

ಕಳಪೆ ಕಾಮಗಾರಿಯ ಕುರಿತು ತಮ್ಮ ಆಕ್ರೋಶವನ್ನು ದಿನವೂ ಬೋಟ್ ನಡೆಸುವ ಪರ್ಷಿಯನ್ ಬೋಟ್ ಯೂನಿಯನ್ ಅಧ್ಯಕ್ಷರಾದ ಸುರೇಶ ಹರಿಕಂತ್ರ, ಕಾರ್ಯದರ್ಶಿ ಪ್ರಕಾಶ ಮೂಡಂಗಿ, ಬೋಟ್




ಮಾಲೀಕ ಜಗದೀಶ ಮೂಡಂಗಿ ಇನ್ನೂ ಮುಂತಾದವರು ಅಸಮರ್ಪಕ ಹೂಳೆತ್ತುವ ಕಾಮಗಾರಿಯ ಕುರಿತು ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿ ಕಾಮಗಾರಿಯನ್ನು ಸರಿಯಾದ ರೀತಿಯಲ್ಲಿ ನಡೆಸಿ ಅನುಕೂಲ ಮಾಡಿಕೊಡುವಂತೆ ತಮ್ಮ ಅಭಿಪ್ರಾಯ ತಿಳಿಸಿದರು. ಗುತ್ತಿಗೆ ಪಡೆದ ಕಂಪನಿಯವರು ಸ್ಥಳೀಯರ ಆಕ್ರೋಶಕ್ಕೆ ಮಣಿದು ಬಂದರು ಇಲಾಖೆಯ ನಿರ್ದೇಶನದಂತೆ ಕಾಮಗಾರಿ ಸರಿಪಡಿಸುವ ಭರವಸೆ ನೀಡಿದರು.

ಮೀನುಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ತಳೇಕರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಇಲಾಖೆಯ ಸಹ ನಿರ್ದೇಶಕ ಸಚಿನ್ ಪುತ್ರನ್, ಇಂಜಿನಿಯರ್ ಅನಂತ ಪಟಗಾರ್, ಬಂದರು ಇಲಾಖೆಯ ಹಿರಿಯ ಅಧಿಕಾರಿ ಜಿ.ಎಮ್.2ರಾಥೋಡ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಪರೀಕ್ಷಾ ಕಾರ್ಯ-ಮೌಲ್ಯಮಾಪನಕ್ಕೆ ಅತಿಥಿ ಉಪನ್ಯಾಸಕರಿಂದ ಬಹಿಷ್ಕಾರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಹತ್ತು ತಿಂಗಳ ಮುಂಚೆಯೇ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಿರುವ ಕ್ರಮ ಖಂಡಿಸಿ, ಜೂನ್‌ನಲ್ಲಿ ನಡೆಯಲಿರುವ ಪದವಿ ಪರೀಕ್ಷಾ ಕಾರ್ಯ ಹಾಗೂ ಮೌಲ್ಯಮಾಪನ ಕಾರ್ಯವನ್ನು ಜಿಲ್ಲಾ ಅತಿಥಿ ಉಪನ್ಯಾಸಕರ ಸಂಘ ಬಹಿಷ್ಕರಿಸಿದೆ.



ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ನಡೆದ ಸಂಘದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ ಡಾ.ವೀರಣ್ಣ ಸಜ್ಜನರ್, ಕೊಪ್ಪಳ ವಿಶ್ವವಿದ್ಯಾಲಯ ಅತಿಥಿ ಉಪನ್ಯಾಸಕರನ್ನು ಪಾಠ-ಪ್ರವಚನಗಳಿಗೆ ಹೊರತುಪಡಿಸಿ

ಬೇರೆ ಕಾರ್ಯಗಳಿಗೆ ಬಳಸಿಕೊಳ್ಳಲು ಒಪ್ಪಿಕೊಳ್ಳುತ್ತಿಲ್ಲ. ಅತಿಥಿ ಉಪನ್ಯಾಸಕರ ನ್ಯಾಯಯುತ ಬೇಡಿಕೆಗಳ ಬಗ್ಗೆ ಅಸಡ್ಡೆ ತೋರುತ್ತದೆ ಎಂದು ದೂರಿದರು.

ಕಳೆದ ಹಲವು ವರ್ಷಗಳಿಂದಲೂ ವಿವಿಧ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಇಂದು ಕರ್ತವ್ಯದಿಂದ ಬಿಡುಗಡೆ ಮಾಡಲಾಗಿರುತ್ತದೆ. ಈ ಹಿಂದೆ ಬೇರೆ ಬೇರೆ ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಬಿಓಇ. ಸ್ಕ್ವಾಡ್ ಸೇರಿದಂತೆ ವಿವಿಧ ಪರೀಕ್ಷಾ ಕಾರ್ಯಗಳಲ್ಲಿ ಸಮರ್ಥವಾಗಿ ಬಳಸಿಕೊಳ್ಳಲಾಗುತ್ತಿತ್ತು. ಆದರೆ ಕೊಪ್ಪಳ ವಿಶ್ವವಿದ್ಯಾಲಯವು ಪರೀಕ್ಷಾ ಕಾರ್ಯದಂಥ ಗಂಭೀರ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ನಿರ್ಲಕ್ಷಿಸಿರುವುದು ಸ್ಪಷ್ಟವಾಗಿ ಕಾಣುತ್ತದೆ ಎಂದು ಅವರು ಆರೋಪಿಸಿದರು.ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಈಗಲೂ ಅತಿಥಿ ಉಪನ್ಯಾಸಕರನ್ನು ಈ ಮೇಲೆ ಸೂಚಿಸಿದ ಕಾರ್ಯಗಳಿಗೆ ನಂಬಿಕೆಯಿಂದ ಬಳಸಿಕೊಳ್ಳಲಾಗುತ್ತಿದೆ. ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಕಳೆದ 2023-24ನೇ ಸಾಲಿನಿಂದಲೂ ಈ ಕುರಿತು ಮನವಿ ಸಲ್ಲಿಸಿದಾಗ್ಯೂ ನಮ್ಮ ಮನವಿಯನ್ನು ಪರಿಗಣಿಸದೇ ಮತ್ತು ಜಿಲ್ಲೆಯ ಅತಿಥಿ ಉಪನ್ಯಾಸಕರ ಮೇಲೆ ವಿಶ್ವಾಸವಿಲ್ಲ ಎನ್ನುವ ಧೋರಣೆ ತಾಳಿರುವುದು ನಮಗೆ ಅತ್ಯಂತ ನೋವು ತಂದಿದೆ. ಲೋಪಗಳಾದರೆ ಯಾರು ಜವಾಬ್ದಾರಿ? ಎಂದು ಪ್ರಶ್ನಿಸುವ ವಿಶ್ವವಿದ್ಯಾಲಯಕ್ಕೆ ಪಾಠ-ಪ್ರವಚನಗಳಲ್ಲಿ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಿದವರು ಯಾರು ಎಂಬುದನ್ನು ಅರಿತುಕೊಳ್ಳುವ ಸಮಯವೂ ಇಲ್ಲದಿರುವುದು ವಿಪರ್ಯಾಸ ಎಂದು ಬೇಸರ ವ್ಯಕ್ತಪಡಿಸಿದರು.ಅತಿಥಿ ಉಪನ್ಯಾಸಕರನ್ನು ಹತ್ತು ಕೊಪ್ಪಳ ತಿಂಗಳವರೆಗೆ ಮುಂದುವರಿಸದೇ ಮಧ್ಯದಲ್ಲಿ ಬಿಡುಗಡೆಗೊಳಿಸಿರುವುದರಿಂದ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರು 2025-26ನೇ ಸಾಲಿನ ಪರೀಕ್ಷಾ ಕಾರ್ಯ ಮತ್ತು ಮೌಲ್ಯಮಾಪನ ಕಾರ್ಯವನ್ನು ಬಹಿಷ್ಕರಿಸಲು ನಿರ್ಧರಿಸಿದ್ದೇವೆ ಎಂದರು.

ಅತಿಥಿ ಉಪನ್ಯಾಸಕರನ್ನು ಬಿಓಇ, ಸ್ಕ್ವಾಡ್ ಸೇರಿದಂತೆ ಪರೀಕ್ಷೆಯ ಎಲ್ಲ ಹಂತಗಳ ವಿವಿಧ ಕಾರ್ಯಗಳಲ್ಲಿ ನಮ್ಮನ್ನು ಪರಿಗಣಿಸುವಂತೆ ಮತ್ತು ಹತ್ತು ತಿಂಗಳುಗಳ ಕಾಲ ಸೇವೆಯಲ್ಲಿ ಮುಂದುವರಿಸುವಂತೆ ಆಗ್ರಹಿಸಿ ಕಾಲೇಜಿನ ಪ್ರಾಚಾರ್ಯರ ಮೂಲಕ ಆಯುಕ್ತರಿಗೆ, ಕುಲಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಅತಿಥಿ ಉಪನ್ಯಾಸಕರಾದ ಡಾ.ಪ್ರಕಾಶ ಬಳ್ಳಾರಿ, ಡಾ.ತುಕಾರಾಂ ನಾಯ್ಕ, ಡಾ.ಸಣ್ಣದೇವೇಂದ್ರಸ್ವಾಮಿ, ಡಾ.ಶಿವಬಸಪ್ಪ ಮಸ್ಕಿ, ಜ್ಞಾನೇಶ್ವರ ಪತ್ತಾರ, ಡಾ.ಪ್ರಕಾಶ ಜಡಿಯವರ್, ಡಾ.ವಿಜಯಕುಮಾರ್ ಕೆಂಚಪ್ಪನವರ್, ಡಾ.ಗಿರಿಜಾ ತುರುಮುರಿ, ಡಾ.ವಿಪ್ಲವಿ, ಅಕ್ಕಮಹಾದೇವಿ, ವಿದ್ಯಾ ಮುಳಗುಂದ, ಡಾ.ವಾಣಿ ಜೋಷಿ, ಬಸಮ್ಮ, ರಾಜ್, ಡಾ.ಷಣ್ಮುಖಪ್ಪ, ಬಸವರಾಜ ಕರುಗಲ್, ಡಾ.ಪಾಂಡೇಶ್ ಇತರರು ಇದ್ದರು.

# ರಾಮಕೃಷ್ಣ ನಾಯ್ಕ ಅವರಿಗೆ ವಲಯ ಅರಣ್ಯಾಧಿಕಾರಿಯಾಗಿ ಬಡ್ತಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನಲ್ಲಿ ಉಪವಲಯ ಅರಣ್ಯಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ರಾಮಕೃಷ್ಣ ಹೊನ್ನಪ್ಪ ನಾಯ್ಕ ಇವರು ವಲಯ ಅರಣ್ಯಾಧಿಕಾರಿಯಾಗಿ ಬಡ್ತಿ ಪಡೆದು ಕಾರವಾರದ ಡಿಎಫ್‌ಓ ಕಚೇರಿಯ ಸರ್ವೇ ವಿಭಾಗಕ್ಕೆ ಸೇರ್ಪಡೆಯಾಗಿದ್ದಾರೆ.

ತಾಲೂಕಿನ ಅಂಬಾರಕೊಡ್ಲದ ನಿವಾಸಿಯಾಗಿರುವ ರಾಮಕೃಷ್ಣ ನಾಯ್ಕ ಇವರು ಜಿಲ್ಲೆಯ ಕದ್ರಾ, ಹಿರೇಗುತ್ತಿ, ಹೊಸಕಂಬಿ, ಮಾಸ್ತಿಕಟ್ಟಾ, ಅಂಕೋಲಾ ವಲಯದಲ್ಲಿ ಕಳೆದ 26 ವರ್ಷಗಳಿಂದ



ಸುದೀರ್ಘ ಸೇವೆ ಸಲ್ಲಿಸಿದ್ದರು. ಈಗ ಇವರು ಪದೋನ್ನತಿ ಪಡೆದು ಕರ್ತವ್ಯಕ್ಕೆ ಹಾಜರಾಗಿದ್ದಾರೆ.

ಸನ್ಮಾನ : ಉಪವಲಯ ಅರಣ್ಯಾಧಿಕಾರಿ ಹುದ್ದೆಯಿಂದ ವಲಯ ಅರಣ್ಯಾಧಿಕಾರಿ ಹುದ್ದೆಗೆ ಬಡ್ತಿ ಪಡೆದಿರುವುದಕ್ಕೆ ಮೇ 24 ರಂದು ಮಧ್ಯಾಹ್ನ 3 ಗಂಟೆಗೆ ಪಿ.ಎಂ. ಹೈಸ್ಕೂಲ್ ರೈತಭವನದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿಯವರು ಹಮ್ಮಿಕೊಂಡ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಇವರನ್ನು ಸನ್ಮಾನಿಸಿ ಗೌರವಿಸಲಿದ್ದಾರೆ.

# ರಾಜ್ಯಮಟ್ಟದ ಪಾದರಕ್ಷೆ ತಯಾರಿಕಾ ಸ್ಪರ್ಧೆ

**ಬಳ್ಳಾರಿ:** ನೈಜ ಚರ್ಮ ಕುಶಲಕರ್ಮಿಗಳಲ್ಲಿನ ಕರಕುಶಲತೆ, ಪಾದರಕ್ಷೆ ತಯಾರಿಕೆಯ ನೈಪುಣ್ಯತೆ, ಸೃಜನಶೀಲತೆ ಮತ್ತು ತಾಂತ್ರಿಕ ಕೌಶಲ್ಯಗಳನ್ನು ಗುರುತಿಸಿ ಉತ್ತೇಜಿಸಲು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ (ಲಿಡಕರ್) ವತಿಯಿಂದ ರಾಜ್ಯಮಟ್ಟದ ಸ್ಥಳದಲ್ಲೇ ಪಾದರಕ್ಷಾ ತಯಾರಿಕಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಸ್ಪರ್ಧೆಯು ಜೂನ್ 06 ರಂದು ಬೆಳಿಗ್ಗೆ 11 ರಿಂದ ಸಂಜೆ 05 ಗಂಟೆಯವರೆಗೆ ಬೆಂಗಳೂರಿನ ಕೆಂಗೇರಿಯ ಉಲ್ಲಾಳ ಉಪನಗರದ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಲೆದರ್ ಅಂಡ್ ಫ್ಯಾಷನ್ ಟೆಕ್ನಾಲಜಿ, ಇಲ್ಲಿ ನಡೆಯಲಿದೆ. ಚರ್ಮ ಕುಶಲಕರ್ಮಿಗಳು ತಮ್ಮ ಅದ್ಭುತ ಪ್ರತಿಭೆಯನ್ನು ಪ್ರದರ್ಶಿಸಲು ಇದು ಅತ್ಯುತ್ತಮ ವೇದಿಕೆಯಾಗಿದೆ.

**ಆಕರ್ಷಕ ನಗದು ಬಹುಮಾನಗಳು:** ಪ್ರಥಮ ಬಹುಮಾನ–ರೂ.50 ಸಾವಿರ, ದ್ವಿತೀಯ ಬಹುಮಾನ–ರೂ.30 ಸಾವಿರ, ತೃತೀಯ ಬಹುಮಾನ– ರೂ.20 ಸಾವಿರ ಹಾಗೂ ಸಮಾಧಾನಕರ ಬಹುಮಾನ (ಇಬ್ಬರಿಗೆ)– ತಲಾ ರೂ.10 ಸಾವಿರ.

**ಅರ್ಹತೆಗಳು ಮತ್ತು ನಿಯಮಗಳು:** ಸ್ಪರ್ಧಾಳುಗಳು 18 ರಿಂದ 55 ವರ್ಷದೊಳಗಿರಬೇಕು. ಪರಿಶಿಷ್ಟ ಜಾತಿಗೆ ಸೇರಿದ (ಆರುಂಧತಿಯಾರ್, ಚಮ್ಮಾದಿಯಾ, ಚಮಾರ್, ಚಂಬಾರ್, ಚಮಗಾರ್, ದಕ್ಕಲ್, ದಕ್ಕಲ್‌ವಾರ್, ದಕ್ಕಲಿಗ, ಮಾದರ್, ಮಾದಿಗ್, ಮಾದಿಗ, ಮಿನಿಮಾದಿಗ್, ಜಾಂಬುವುಲು, ಹರಳಯ್ಯ, ಮಾಚಿಗಾರ್, ಮೋಚಿಗಾರ್, ಮೋಚಿ, ಮುಚಿ, ತೆಲುಗು ಮೋಚಿ, ಕಮಾಟಿ ಮೋಚಿ, ರೋಹಿದಾಸ್, ಧೋರ್, ಕಕ್ಕಯ್ಯ, ಕಂಕಯ್ಯ, ಸಮಗಾರ, ಸಮಗಾರ್) ಚರ್ಮ ಕುಶಲಕರ್ಮಿಗಳಾಗಿರಬೇಕು ಅಥವಾ ಅವರ ಕುಟುಂಬದವರಾಗಿರಬೇಕು.

ಪುರುಷ ಅಥವಾ ಮಹಿಳೆಯರ ಒಂದು ಜೊತೆ ಪಾದರಕ್ಷೆಯನ್ನು ಮಾತ್ರ ತಯಾರಿಸಬೇಕು. ಪಾದರಕ್ಷೆ ತಯಾರಿಸಲು ಬೇಕಾಗುವ ಕಚ್ಚಾವಸ್ತು ಹಾಗೂ ಅಗತ್ಯ ಪರಿಕರಗಳನ್ನು ಸ್ಪರ್ಧಾಳುಗಳೇ ಸ್ವತಃ ತರಬೇಕು. ಕೊಲ್ಹಾಪುರಿ ಮಾದರಿಯ ಪಾದರಕ್ಷೆಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಸ್ಪರ್ಧಾಳುಗಳಿಗೆ ಅಂದು ಊಟದ ವ್ಯವಸ್ಥೆ ಮಾಡಲಾಗುವುದು. ಸ್ಪರ್ಧಾಳುಗಳು ಸ್ವಂತ ಖರ್ಚಿನಲ್ಲಿ ಬರಬೇಕಾಗಿದ್ದು, ಸೂಕ್ತ ದಾಖಲಾತಿಗಳನ್ನು ಒದಗಿಸಿದಲ್ಲಿ ನಿಯಮಾನುಸಾರ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ ನೀಡಲಾಗುವುದು.

**ಸಲ್ಲಿಸಬೇಕಾದ ಅಗತ್ಯ ದಾಖಲೆಗಳು:** ಜಾತಿ ಪ್ರಮಾಣ ಪತ್ರ, ವೃತ್ತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ನಿಗಮದಿಂದ ತರಬೇತಿ ಪಡೆದ ದಾಖಲೆ ಅಥವಾ ಇ–ಶ್ರಮ್ ಕಾರ್ಡ್.

ಅರ್ಜಿ ನಮೂನೆಗಳನ್ನು ನಿಗಮದ ಅಧಿಕೃತ ವೆಬ್‌ಸೈಟ್ https://lidkar.com ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಮೇ 30 ರೊಳಗೆ ಕೆಳಗಿನ ವಿಳಾಸಕ್ಕೆ ಅಂಚೆ ಮೂಲಕ ತಲುಪಿಸಬೇಕು.

**ಅರ್ಜಿ ಸಲ್ಲಿಸಬೇಕಾದ ವಿಳಾಸ:** ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಕೇಂದ್ರ ಕಚೇರಿ, ಡಾ.ಬಾಬು ಜಗಜೀವನ ರಾಂ ಲಿಡಕರ್ ಭವನ, ಟ್ಯಾಂಕ್ ಬಂಡ ಏರಿಯಾ, ವಸಂತ ನಗರ, ಬೆಂಗಳೂರು – 560052.

ಹೆಚ್ಚಿನ ಮಾಹಿತಿಗಾಗಿ ನಗರದ ಹೆಚ್.ಆರ್.ಗವಿಯಪ್ಪ ವೃತ್ತದ ಹತ್ತಿರದ ಬುಡಾ ಕಾಂಪ್ಲೆಕ್ಸ್ ನ ಮಳಿಗೆ 24 ರ ಲಿಡ್ಕರ್ ಲೆದರ್ ಎಂಪೋರಿಯಂ ಕಚೇರಿ ಅಥವಾ ಮೊ.8660667128 ಗೆ ಸಂಪರ್ಕಿಸಬಹುದಾಗಿದೆ ಎಂದು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ (ಲಿಡಕರ್)ದ ಜಿಲ್ಲಾ ಸಂಯೋಜಕ ಟಿ.ಸಂಜೀವಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐ.ಇ.ಸಿ. ಅಭಿಯಾನಕ್ಕೆ ಚಾಲನೆ

**ಕಲಬುರಗಿ:** ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ವತಿಯಿಂದ ಜಿಲ್ಲೆಯಲ್ಲಿ ಇದೇ ಮೇ 18 ರಿಂದ 25ರವರೆಗೆ "ಜನ ಭಾಗೀದಾರಿ – ಸಬ್ಸೆ ದೂರ, ಸಬ್ಸ್ ಪೆಹ್ಲೆ" ಎಂಬ ಧರ್ತಿ ಆಭಾ ಜನ ಜಾಗೃತಿ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ವಿಶೇಷ ಐ.ಇ.ಸಿ. (IEC) ಅಭಿಯಾನಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಈಗಾಗಲೇ ಮೇ 18 ರಂದು ಚಾಲನೆ ನೀಡಲಾಗಿದೆ ಎಂದು ಚಿಂಚೋಳಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–1) ಅವರು ತಿಳಿಸಿದ್ದಾರೆ.

DA-JGUA ಯೋಜನೆಯಡಿ ಚಿಂಚೋಳಿ ಹಾಗೂ ಕಾಳಗಿ ತಾಲೂಕಿನ ಒಟ್ಟು 8 ಹಳ್ಳಿಗಳಾದ ಪೆಂಚನಪಳ್ಳಿ, ರುಮನಗೂಡ, ಮೋಘಾ, ಪಸ್ತಾಪೂರ, ರುಸ್ತುಂಪೂರ, ಶೇರಿ, ಕೂಡ್ಲಿ, ತೇಗಲತಿಪ್ಪಿ ಆಯ್ಕೆಯಾಗಿದ್ದು, ಐ.ಇ.ಸಿ. (IEC) ಅಭಿಯಾನದಡಿ ಸದರಿ ಗ್ರಾಮಗಳಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಮೇ 19 ರಂದು ಸದರಿ ಗ್ರಾಮಗಳ ಪರಿಶಿಷ್ಟ ಪಂಗಡದ ಜನಾಂಗದವರಿಗಾಗಿ ಆರೋಗ್ಯ ತಪಾಸಣೆ ಶಿಬಿರ, ಮೇ 20 ರಂದು ಕ್ಷೇತ್ರ ಸಮಿಕ್ಷಾ ನಡಿಗೆ ಹಾಗೂ ಮೇ 21 ರಂದು ಜನರ ಕುಂದು–ಕೊರತೆ ಆಲಿಕೆ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ. ಬುಡಕಟ್ಟು ಪರಿಶಿಷ್ಟ ಪಂಗಡದ ಜನರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳ ಪ್ರಯೋಜನೆ ತಲುಪಿಸುವುದು ಈ ಅಭಿಯಾನದ ಉದ್ದೇಶವಾಗಿದೆ.

# ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ನಿರ್ಭಂಧಿತ ಪ್ರದೇಶ

**ಬಳ್ಳಾರಿ:** ನಗರದ 04 ಪರೀಕ್ಷಾ ಕೇಂದ್ರಗಳಲ್ಲಿ ಮೇ 23 ರಂದು ಮಧ್ಯಾಹ್ನ 02 ರಿಂದ ಸಂಜೆ 05 ಗಂಟೆಯವರೆಗೆ ಡಿಪ್ಲೋಮಾ ಸಿಇಟಿ ಪರೀಕ್ಷೆ ಮತ್ತು ಎಂಇ/ಎಂಟೆಕ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಪಿಜಿಸಿಇಟಿ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀ. ವ್ಯಾಪ್ತಿಯ ಪ್ರದೇಶವನ್ನು ನಿರ್ಭಂದಿತ ಪ್ರದೇಶ ಎಂದು ಜಿಲ್ಲಾ ದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಘೋಷಿಸಿದ್ದಾರೆ.

ಸುಗಮ ಮತ್ತು ಪಾರದರ್ಶಕ ನಿರ್ವಹಣೆಗಾಗಿ, ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರ ಅಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಈ ಆದೇಶ ಹೊರಡಿಸಿದ್ದಾರೆ.

ಪರೀಕ್ಷಾ ಸಮಯದಲ್ಲಿ ಈ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿಗಳು ಮತ್ತು ಇಂಟರ್ನೆಟ್ ಸೆಂಟರ್‌ಗಳನ್ನು ಕಡ್ಡಾಯವಾಗಿ ಮುಚ್ಚುವಂತೆ, ಅನಧಿಕೃತ ವ್ಯಕ್ತಿಗಳು ಮತ್ತು ಗುಂಪುಗಳು ಪರೀಕ್ಷಾ ಕೇಂದ್ರದ ಹತ್ತಿರ ಸುಳಿಯುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ನಿಷೇಧಾಜ್ಞೆಯು ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿ, ಅಧಿಕಾರಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಕರಾಟೆ ಚಾಂಪಿಯನ್‌ಶಿಪ್: ಕರ್ನಾಟಕ ತಂಡಕ್ಕೆ ಪ್ರಶಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಅಸ್ಸಾಂ ರಾಜ್ಯದ ಗುವಾಹಟಿಯ ಬೋಗೆಶ್ವರ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ 24ನೇ ಆಲ್ ಇಂಡಿಯಾ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕ ತಂಡದ ಕರಾಟೆ ಪಟುಗಳು ಅತ್ಯುತ್ತಮ ಸಾಧನೆ ಮಾಡಿ ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ವರ್ಲ್ಡ್ ಟ್ರೆಡಿಷನಲ್ ಶೋಟೋಕನ್ ಕರಾಟೆ ಫೆಡರೇಷನ್ ಆಯೋಜಿಸಿದ್ದ ರಾಷ್ಟ್ರೀಯ ಮಟ್ಟದ ಈ ಪಂದ್ಯಾವಳಿಯಲ್ಲಿ ದೇಶದ ವಿವಿಧ ರಾಜ್ಯಗಳಿಂದ ನೂರಾರು ಕರಾಟೆ ಪಟುಗಳು ಭಾಗವಹಿಸಿದ್ದರು.

ಈ ಸ್ಪರ್ಧೆಯಲ್ಲಿ ಟ್ರೆಡಿಷನಲ್ ಶೋಟೋಕನ್ ಕರಾಟೆ ಅಕಾಡೆಮಿ ಕರ್ನಾಟಕದ ಪರವಾಗಿ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ಕರಾಟೆಪಟುಗಳು ಭಾಗವಹಿಸಿ ವಿವಿಧ ವಿಭಾಗಗಳಲ್ಲಿ ಪದಕಗಳನ್ನು ಗೆದ್ದು ಗಮನ ಸೆಳೆದಿದ್ದಾರೆ. ವಿಶೇಷವಾಗಿ ತೋರಣಗಲ್ ಜಿಂದಾಲ್ ವಿದ್ಯಾಮಂದಿರದ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

12 ವರ್ಷದ ವಯೋಮಿತಿಯ ಕುಮಿತೆ ವಿಭಾಗದಲ್ಲಿ ಯಶ್ ರಾಜ್ ದ್ವಿತೀಯ ಸ್ಥಾನ ಪಡೆದರೆ, 11 ವರ್ಷದ ಕುಮಿತೆ ವಿಭಾಗದಲ್ಲಿ ಅಕ್ಷೂಭ್ಯಾ ತೃತೀಯ ಸ್ಥಾನ ಗಳಿಸಿದ್ದಾರೆ. 10 ವರ್ಷದ ಕುಮಿತೆ ವಿಭಾಗದಲ್ಲಿ ಸಾಗರ್ ಕವಾಸಿ ದ್ವಿತೀಯ ಸ್ಥಾನ ಪಡೆದಿದ್ದು, 9 ವರ್ಷದ ಕುಮಿತೆಯಲ್ಲಿ ರಿಹಾನ್ ಠಾಕೂರ್ ತೃತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ. 8 ವರ್ಷದ ಕುಮಿತೆ ವಿಭಾಗದಲ್ಲಿ ಮಿನೀಷಾ ಮಿಸ್ತ್ರಿ ದ್ವಿತೀಯ ಸ್ಥಾನ ಪಡೆದಿದ್ದಾರೆ. 15 ವರ್ಷ ಮೇಲ್ಪಟ್ಟ ಗ್ರೂಪ್ ಕಟಾ ವಿಭಾಗದಲ್ಲಿ ಪೀಸಾ ಅನುಪ್, ಕೊಮಟ್ಟಿ ವರುಣ್ ಬಾಬು ಹಾಗೂ ಸರಸ್ವತಿ ಕುಲಕರ್ಣಿ ತಂಡ ತೃತೀಯ ಸ್ಥಾನ ಪಡೆದು ಕರ್ನಾಟಕ ತಂಡದ ಸಾಧನೆಯನ್ನು ಮತ್ತಷ್ಟು ಮೆರೆದಿದೆ.

10 ವರ್ಷದ ಕುಮಿತೆ ವಿಭಾಗದಲ್ಲಿ ಧನೀಶ್ ರೆಡ್ಡಿ ದ್ವಿತೀಯ ಸ್ಥಾನ ಪಡೆದರೆ, 13 ವರ್ಷದ ಕುಮಿತೆ ವಿಭಾಗದಲ್ಲಿ ಬಿಂದಿಯಾ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಅದೇ ವಿಭಾಗದಲ್ಲಿ ಅನ್ಮೋಲ್ ಕುಮಾರ್ ತೃತೀಯ ಸ್ಥಾನ ಪಡೆದಿದ್ದಾರೆ.

16 ವರ್ಷದ ಕುಮಿತೆ ವಿಭಾಗದಲ್ಲಿ ಆನಂದ್ ಕವಾಸಿ ತೃತೀಯ ಸ್ಥಾನ ಪಡೆದಿದ್ದು, 18 ವರ್ಷದ ಕಟಾ ವಿಭಾಗದಲ್ಲಿ ಸರಸ್ವತಿ ಕುಲಕರ್ಣಿ ದ್ವಿತೀಯ ಸ್ಥಾನ ಪಡೆದು ಗಮನ ಸೆಳೆದಿದ್ದಾರೆ. 13 ವರ್ಷದ ಕುಮಿತೆ ವಿಭಾಗದಲ್ಲಿ ರೇವಂತ್ ರೆಡ್ಡಿ ತೃತೀಯ ಸ್ಥಾನ ಪಡೆದಿದ್ದಾರೆ. 15 ವರ್ಷದ ಕುಮಿತೆ ವಿಭಾಗದಲ್ಲಿ ಸೂರ್ಯ ದರ್ಶಿನಿ ತೃತೀಯ ಸ್ಥಾನ ಪಡೆದಿದ್ದು, 21 ವರ್ಷದ ಕುಮಿತೆ ವಿಭಾಗದಲ್ಲಿ ನವೀನ ಕೆ. ತೃತೀಯ ಸ್ಥಾನ ಗಳಿಸಿದ್ದಾರೆ. 35 ವರ್ಷದ ವಯೋಮಿತಿಯ ಕುಮಿತೆ ಹಾಗೂ ಕಟಾ ವಿಭಾಗಗಳಲ್ಲಿ ಕೊಂಡಯ್ಯ ದ್ವಿತೀಯ ಸ್ಥಾನ ಪಡೆದು ಹಿರಿಯ ಸ್ಪರ್ಧಿಗಳ ವಿಭಾಗದಲ್ಲೂ ತಮ್ಮ ಸಾಮರ್ಥ್ಯ ಪ್ರದರ್ಶಿಸಿದ್ದಾರೆ.

ರಾಷ್ಟ್ರೀಯ ಮಟ್ಟದ ಈ ಸ್ಪರ್ಧೆಯಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಕರಾಟೆಪಟುಗಳು ತೋರಿದ ಸಾಧನೆಗೆ ಕ್ರೀಡಾಭಿಮಾನಿಗಳು ಹಾಗೂ ಪೋಷಕರು ಸಂತಸ ವ್ಯಕ್ತಪಡಿಸಿದ್ದಾರೆ.

ಪ್ರಶಸ್ತಿ ವಿಜೇತ ಎಲ್ಲಾ ಕರಾಟೆಪಟುಗಳನ್ನು ಟ್ರೆಡಿಷನಲ್ ಶೋಟೋಕನ್ ಕರಾಟೆ ಅಕಾಡೆಮಿಯ ಸಂಸ್ಥಾಪಕರಾದ ಹಿರಿಯ ಕರಾಟೆ ತರಬೇತುದಾರ ಕಟ್ಟೆಸ್ವಾಮಿ, ಅಕಾಡೆಮಿಯ ತಾಂತ್ರಿಕ ನಿರ್ದೇಶಕರಾದ ಸುಭಾಷ್ ಚಂದ್ರ, ಜಿಂದಾಲ್ ವಿದ್ಯಾಮಂದಿರದ ಪ್ರಾಂಶುಪಾಲರು, ಕ್ರೀಡಾ ಆಡಳಿತಾಧಿಕಾರಿಗಳು ಹಾಗೂ ಕರಾಟೆ ತರಬೇತುದಾರರಾದ ಜಡೇಶ್, ನಾಗರಾಜ್ ದಾಸರ್, ಹಲುಗಣ್ಣ ಆನಂದ್, ರಜತ್ ನಾಗರಾಜ್, ಗುರುನಾಥ್, ಮಾರೇಶ್ ಪ್ರಕಾಶ್, ಪ್ರಶಾಂತ್ ಸೋಮಶೇಖರ್, ಕುಮಾರಸ್ವಾಮಿ ಸೇರಿದಂತೆ ಅನೇಕರು ಅಭಿನಂದಿಸಿದ್ದಾರೆ.

# ರಾಜಧನ ಕಟ್ಟದೆ ಇರೋ ಗಣಿಗಾರಿಕೆಗೆ ಶಾಕ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಸಂಸದ ರಾಜಶೇಖರ್ ಹಿಟ್ನಾಳ ಹಾಗೂ ಸಹೋದರ ಶಾಸಕ ರಾಘವೇಂದ್ರ ಹಿಟ್ನಾಳ ಗೂ ದಂಡವಿಧಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಒಟ್ಟು 60 ಕಲ್ಲು ಕ್ವಾರಿಗೆ ದಂಡ ವಿಧಿಸಿದ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಸರ್ಕಾರದ ಖಜಾನೆ ತುಂಬಿಸಲು ರಾಜ್ಯದ ಎಲ್ಲ ಕಲ್ಲು ಕ್ವಾರಿಗೆ ದಂಡ ವಿಧಿಸಲು ಸೂಚನೆ ನೀಡಿ–ರೊ ಇಲಾಖೆಯ ನಿರ್ದೇಶಕರು. ಸದ್ಯ ಸರ್ಕಾರ ಜೊತೆ ಮಾತುಕತೆ ನಡೆಸ್ತೇವೆ ಅಂತ ಎನ್ನುತ್ತಿರೋ ಹಿಟ್ನಾಳ ಬ್ರದರ್ಸ್ ಹೇಳಿದಾರಂತೆ.

ಜನಸಾಮಾನ್ಯರ ಮೇಲೆ ಮಾತ್ರ ಬರೇ ಹಾಕೋದಲ್ಲ ಒಂದು ಜಿಲ್ಲೆಯಲ್ಲಿಯೇ 110 ಕೋಟಿ ರೂಪಾಯಿ ದಂಡ ಕೊಪ್ಪಳ ಜಿಲ್ಲೆ ಒಂದರಲ್ಲಿ ಅಂತಂದ್ರೆ ಅಂದ್ರೆಯೋಚನೆ ಮಾಡಿ ಮತ್ತು ಇವೆಲ್ಲ ರಾಜಕಾರಣಿಗಳ ಒಡೆತನದ ಕಲ್ಲು ಕ್ವಾರಿಗಳು ಇವರಿಗೆಲ್ಲ ಏನೇನು ರೂಲ್ಸ್ ರೆಗ್ಯುಲೇಶನ್ಸ್ ಇರುತ್ತವೆ ಅನ್ನೋದು ಗೊತ್ತಿರಲ್ವಾ ರಾಜಧನ ಕಟ್ಟೋಕೆ ಆಗಲ್ಲ ಅಂದ್ರೆ ಇವ್ರು ಯಾವ ಜನಪ್ರತಿನಿಧಿಗಳು ರಾಜಕಾರಣಿಗಳು ಇವರು ಒಂದು ಜಿಲ್ಲೆಯಲ್ಲಿಯೇ 110 ಕೋಟಿ ರೂಪಾಯಿ ದಂಡ ಕೊಪ್ಪಳ ಜಿಲ್ಲೆ ಒಂದರಲ್ಲಿ ಇನ್ನು ಬೇರೆ ಯಲ್ಲಲ್ಲಿ ಏನೇನೋ ಕಥೆ ಇದಿಯೋ ಗೊತ್ತಿಲ್ಲ. ಸರ್ಕಾರದ ಜೊತೆ ಮಾತಾಡ್ತೀವಿ ಅಂತ ಹೇಳಿದಾರಂತೆ ಹಿಟ್ನಾಳ್ ಬ್ರದರ್ಸ್.

# ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯಗಳ ಅರ್ಜಿ

• ಮಲ್ಲಮ್ಮ ನುಡಿ ವಾರ್ತೆ ಚಿತ್ತಾಪುರ

ಚಿತ್ತಾಪೂರ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2026–27 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಅರ್ಹ ವಿದ್ಯಾರ್ಥಿಗಳು http://shp.karnataka.gov.in/bcwd ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಜೂನ್ 8 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಚಿತ್ತಾಪೂರ ತಾಲ್ಲೂಕಿನ ಎಲ್ಲಾ ವಿವಿಧ ಶಾಲೆಗಳಲ್ಲಿ ಪ್ರವೇಶ ಪಡೆದು 5ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಅಪ್ಲಿಕೇಶನ್ ಪ್ರಿಂಟ್ ತೆಗೆದು ವಸತಿ ನಿಲಯದ ಮೇಲ್ವಿಚಾರಕರಿಗೆ ಸಲ್ಲಿಸಬೇಕು. ತಾಲೂಕಾವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ http://bcwd.karnataka.gov.in ವೆಬ್‌ಸೈಟ್‌ನ್ನು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.helpline@gmail.com ಇ–ಮೇಲ್ ಮುಖಾಂತರ, ಸಹಾಯವಾಣಿ ಸಂಖ್ಯೆ: 8050770004 ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣಾ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಕೋರಲಾಗಿದೆ.

# ವಿದ್ಯಾರ್ಥಿಗಳ ಭವಿಷ್ಯಕ್ಕೆ ನೆರವಾದ ಮಲಬಾರ್ ಚಾರಿಟೇಬಲ್ ಟ್ರಸ್ಟ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಮೂಲ ಆಧಾರವಾಗಿದ್ದು, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ನೆರವು ನೀಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಬಳ್ಳಾರಿ ನಗರ ಶಾಸಕ ನಾರ ಭರತ್ ರೆಡ್ಡಿ ಹೇಳಿದರು.

ನಗರದ ಬಿಡಿಎಎ ಮೈದಾನದ ಸಭಾಂಗಣದಲ್ಲಿ ಮಲಬಾರ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ವಿದ್ಯಾರ್ಥಿವೇತನ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿ ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳು ಆರ್ಥಿಕ ಸಂಕಷ್ಟದ ಕಾರಣದಿಂದ ಉನ್ನತ ಶಿಕ್ಷಣದಿಂದ ದೂರವಾಗುವ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಖಾಸಗಿ ಸಂಸ್ಥೆಗಳು ಹಾಗೂ ದಾನಿಗಳು ಮುಂದೆ ಬಂದು ವಿದ್ಯಾರ್ಥಿಗಳಿಗೆ ನೆರವಾಗುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಲಬಾರ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಜಿಲ್ಲೆಯ 7 ಅನುದಾನಿತ ಕಾಲೇಜುಗಳ 129 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ವಿತರಿಸಲಾಯಿತು. ವಿದ್ಯಾರ್ಥಿಗಳಿಗೆ ನೀಡುತ್ತಿರುವ ಈ ಸಹಾಯಧನವು ಅವರ ವಿದ್ಯಾಭ್ಯಾಸಕ್ಕೆ ಪ್ರೇರಣೆಯಾಗಲಿದ್ದು, ಉನ್ನತ ಗುರಿಗಳನ್ನು ಸಾಧಿಸಲು ಆತ್ಮವಿಶ್ವಾಸ ತುಂಬಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮಾತನಾಡಿದ ಟ್ರಸ್ಟ್ ಪದಾಧಿಕಾರಿಗಳು, ಶಿಕ್ಷಣ ಕ್ಷೇತ್ರದಲ್ಲಿ ಸೇವಾ ಮನೋಭಾವದಿಂದ ಹಲವಾರು ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿಯೂ ಇನ್ನಷ್ಟು ವಿದ್ಯಾರ್ಥಿಗಳಿಗೆ ನೆರವು ನೀಡುವ ಉದ್ದೇಶ ಹೊಂದಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮೆಹತಾಬ್, ಯರ್ರಿಸ್ವಾಮಿ, ಕಪ್ಪಗಲ್ಲು ಚಂದ್ರಶೇಖರ್ ಆಚಾರ್, ಎಮ್ಮಿಗನೂರು ಜಗದೀಶ್, ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಕಾಂಗ್ರೆಸ್ ಮುಖಂಡ ಸುಬ್ಬರಾಯುಡು ಸೇರಿದಂತೆ ಹಲವಾರು ಗಣ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಸ್ವೀಕರಿಸಿ ಸಂತಸ ವ್ಯಕ್ತಪಡಿಸಿದರು. ಪೋಷಕರು ಮತ್ತು ಕಾಲೇಜು ಆಡಳಿತ ಮಂಡಳಿಯವರು ಮಲಬಾರ್ ಚಾರಿಟೇಬಲ್ ಟ್ರಸ್ಟ್‌ನ ಸಮಾಜಮುಖಿ ಕಾರ್ಯವನ್ನು ಶ್ಲಾಘಿಸಿದರು.

# ಮಕ್ಕಳ ಆಟ ಇನ್ ತೋಟ ವಿಶೇಷ ಬೇಸಿಗೆ ಶಿಬಿರ







• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬೇಸಿಗೆ ಶಿಬಿರವು ಮಕ್ಕಳಿಗೆ ಪ್ರಕೃತಿಯ ಪಾಠಶಾಲೆಯಾಗಿದೆ. ವಿವಿಧ ಗಿಡಗಳು, ಹಣ್ಣುಗಳು ಹಾಗೂ ಪಕ್ಷಿಗಳನ್ನು ಕಂಡು ಮಕ್ಕಳು ಹೊಸ ವಿಚಾರಗಳನ್ನು ಕಲಿತಿದ್ದಾರೆ. ಈ ರೀತಿಯ ಬೇಸಿಗೆ ಶಿಬಿರಗಳು ಮಕ್ಕಳಿಗೆ ಪಠ್ಯಪುಸ್ತಕದ ಹೊರಗಿನ ಬದುಕಿನ ಪಾಠಗಳನ್ನು ಕಲಿಸುವ ನೈಜ ಅನುಭವದ ಶಾಲೆಯಾಗಿದೆ ಎಂದು ಕೃಷಿ ವಿಶ್ವವಿದ್ಯಾನಿಲಯದ ಗೌರವಾನ್ವಿತ ಕುಲಪತಿಗಳಾದ ಡಾ. ಎಸ್.ವಿ. ಸುರೇಶ ಅವರು ತಿಳಿಸಿದರು.

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯ ಆವರಣದಲ್ಲಿ ಮಕ್ಕಳ ಕಲಿಕೆಯ ಅಂಗವಾಗಿ ಮೇ 18 ರಿಂದ 22 ರವರೆಗೆ 5 ದಿನಗಳ ಕಾಲ ಆಯೋಜಿಸಲಾಗಿದ್ದ "ಮಕ್ಕಳ ಆಟ ಇನ್ ತೋಟ" ಗಿಡ, ಮರ, ಕೀಟ, ಚಿಟ್ಟೆಗಳ ಜೊತೆ ಒಂದು ವಾರ ಎಂಬ ಶೀರ್ಷಿಕೆಯಡಿಯ ವಿಶೇಷ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಈ ವಿಶೇಷ ಕಾರ್ಯಕ್ರಮದಲ್ಲಿ ತೋಟದಲ್ಲಿ ಮಕ್ಕಳ ಆಟವು ಕೇವಲ ಮನರಂಜನೆಗೆ ಮಾತ್ರ ಸೀಮಿತವಾಗಿರದೆ, ಪ್ರಕೃತಿಯೊಂದಿಗೆ ಬೆರೆಯುವ ಅದ್ಭುತ ಅನುಭವವನ್ನು ನೀಡಿತು. ಹಸಿರು ವಾತಾವರಣದಲ್ಲಿ ಗಿಡ, ಮರಗಳು, ಬಣ್ಣ ಬಣ್ಣದ ಚಿಟ್ಟೆಗಳು ಹಾಗೂ ವಿವಿಧ ಕೀಟಗಳೊಂದಿಗೆ ಬೆರೆಯುವ ಮೂಲಕ ಮಕ್ಕಳು ಪ್ರಕೃತಿಯ ಸೌಂದರ್ಯವನ್ನು ಹತ್ತಿರದಿಂದ ಆಸ್ವಾದಿಸಿದರು. ಶಿಬಿರದ ಅವಧಿಯಲ್ಲಿ ಮಕ್ಕಳಿಗೆ ತೋಟದಲ್ಲಿ ಓಡಾಟ, ಗಿಡ ನೆಡುವುದು, ಗಿಡಗಳಿಗೆ ನೀರು ಹಾಕುವುದು, ಸಸ್ಯಗಳ ಆರೈಕೆ ಮತ್ತು ಪರಿಸರ ಸಂರಕ್ಷಣೆಯ ಬಗ್ಗೆ ಪ್ರಾಯೋಗಿಕವಾಗಿ ತಿಳಿಸಿಕೊಡಲಾಯಿತು. ಶಿಬಿರದ ಕೊನೆಯ ದಿನವಾದ ಇಂದು ಮಕ್ಕಳು ಕೃಷಿ ತಂತ್ರಜ್ಞಾನ ಮಾಹಿತಿ ಕೇಂದ್ರದ ತೋಟದಲ್ಲಿನ ಹೂ, ಹಣ್ಣು, ಸುಗಂಧದ್ರವ್ಯ ಹಾಗೂ ಔಷಧೀಯ ಸಸ್ಯಗಳ ಬಗ್ಗೆ ತಮಗಿರುವ ಜ್ಞಾನವನ್ನು ವಿವರಿಸಿದರು. ಇದೇ ಸಂದರ್ಭದಲ್ಲಿ ಪರಿಸರ ಮಾಲಿನ್ಯ, ಪರಿಸರದ ಅಸಮತೋಲನ ಮತ್ತು ಪ್ರಕೃತಿ ಸಂರಕ್ಷಣೆಯ ಅಗತ್ಯತೆಯನ್ನು ಸರಳವಾಗಿ ಬಿಂಬಿಸುವ, ಪ್ಲಾಸ್ಟಿಕ್ ನಿವಾರಣೆಯಂತಹ ಜಾಗೃತಿ ಮೂಡಿಸುವ ಹಾಗೂ ಗಿಡಗಳನ್ನು ನೆಟ್ಟು ಪರಿಸರವನ್ನು ಹಸಿರಾಗಿಸುವ ಸಂದೇಶವುಳ್ಳ ಅದ್ಭುತ ಮೂಕಾಭಿನಯವನ್ನು ಮಕ್ಕಳು ಪ್ರದರ್ಶಿಸಿದರು. ಈ ಶಿಬಿರದಲ್ಲಿ ಒಟ್ಟು 70 ಮಕ್ಕಳು ಉತ್ಸಾಹದಿಂದ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿಸ್ತರಣಾ ನಿರ್ದೇಶಕರಾದ ಡಾ: ವೈ.ಎನ್. ಶಿವಲಿಂಗಯ್ಯ ಮತ್ತು ಸಹ ವಿಸ್ತರಣಾ ನಿರ್ದೇಶಕರಾದ ಡಾ: ಕೆ.ಪಿ. ರಘುಪ್ರಸಾದ್, ಡಾ: ಸಿ.ಕೆ. ಪ್ರಮಿಳ, ಡಾ: ಪ್ರಹ್ಲಾದ್ ಪಿ ಭಟ್ ಮತ್ತು ಡಾ: ಕೆ. ಪಲ್ಲವಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಕಾರ್ಯಕಾರಿ ಸಮಿತಿ ಸದಸ್ಯರ ಆಯ್ಕೆ



**ಕಂಪ್ಲಿ:** ಇಲ್ಲಿನ ಅತಿಥಿಗೃಹ ಆವರಣದಲ್ಲಿ ಕಂಪ್ಲಿ ಕೈಗಾರಿಕಾ ಸಂಘದ ನೂತನ ಕಾರ್ಯಕಾರಿ ಸಮಿತಿ ಸದಸ್ಯರ ಆಯ್ಕೆ ಜರುಗಿತು. ಎಂ.ಬಾಬುಸಾಬ್ (ಅಧ್ಯಕ್ಷ), ಜಿ.ಸಿ.ನಾಗರಾಜ್ (ಗೌರವಾಧ್ಯಕ್ಷ), ಜಿ. ಶ್ರೀನಿವಾಸ ರಾವ್, ಅಹ್ಮದಾಬ್ (ಉಪಾಧ್ಯಕ್ಷರು), ಎ. ಮೌಲಾಹುಸೇನ್ (ಪ್ರಧಾನ ಕಾರ್ಯದರ್ಶಿ), ಟಿ. ಎಚ್. ಎಂ. ರಾಜಕುಮಾರ್ (ಜಂಟಿ ಕಾರ್ಯದರ್ಶಿ), ಎಂ. ದಾದಾಪೀರ್ (ಖಜಾಂಚಿ), ಎಂ. ತಬ್ರೇಜ್ (ಮಾಧ್ಯಮ ಪ್ರತಿನಿಧಿ), ಕೆ.ಮಸ್ತಾನ್, ಎಲ್ ಮತ್ತು ಅಬ್ದುಲ್, ಕೆ.ಸಲೀಂ, ಗ್ರಿಲ್ ಚಂದ್, ಬೂಸಾರೆ ವಾಸುದೇವ, ಎಲೆಕ್ಟ್ರಿಷಿಯನ್ ಖಾಸೀಂ, ರಾಜಾಸಾಬ್, ಶಂಶುದ್ದೀನ್, ಪೇಂಟರ್ ಮೋಹನಸಿಂಗ್, ಇಮ್ತಿಯಾಜ್ ಖಾನ್, ಕೆ.ಅಲಂಸಾಬ್, ಶಮೀದ್, ಮೆಕ್ಯಾನಿಕ್ ರಮೇಶ್ ಆಯ್ಕೆಯಾದರು.

## ಬೆಂಗಳೂರಿನಿಂದ ವಿಮಾನ ಸೇವೆ ಪುನಾರಂಭ

**ಬೆಂಗಳೂರು:** ಕಲ್ಯಾಣ ಕರ್ನಾಟಕ ಭಾಗದ ಬೀದರ್ ಮತ್ತು ಕಲಬುರಗಿ ಜಿಲ್ಲಾ ಕೇಂದ್ರಗಳಿಗೆ ಕ್ರಮವಾಗಿ ಜೂನ್ 1 ಮತ್ತು ಜೂನ್ 10ರಿಂದ



ಬೆಂಗಳೂರಿನಿಂದ ವಿಮಾನಯಾನ ಸೇವೆಯನ್ನು ಪುನಾರಂಭ ಮಾಡಲಾಗುತ್ತಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಶುಕ್ರವಾರ ತಿಳಿಸಿದ್ದಾರೆ.

ಈ ಬಗ್ಗೆ ಮಾತನಾಡಿರುವ ಅವರು, ಸ್ಟಾರ್ ಏರ್ ಲೈನ್ಸ್ (ಘೋಡಾವತ್ ಎಂಟರ್‌ಪ್ರೈಸಸ್ ಲಿಮಿಟೆಡ್) ಸಂಸ್ಥೆಯು ಬೆಂಗಳೂರು–ಬೀದರ್– ಬೆಂಗಳೂರು ಮತ್ತು ಬೆಂಗಳೂರು–ಕಲಬುರಗಿ–ಬೆಂಗಳೂರು ಮಾರ್ಗದಲ್ಲಿ ವಿಮಾನಯಾನ ಸೇವೆಯನ್ನು ಒದಗಿಸಲಿದೆ. ಇದಕ್ಕೆ ಬೆಂಬಲ ನೀಡಲು ಸರಕಾರವು 28.47 ಕೋಟಿ ರೂ.ಗಳನ್ನು 'ವಯಬಲಿಟಿ ಗ್ಯಾಪ್ ಫಂಡಿಂಗ್' ಆಗಿ ಕೊಡುತ್ತಿದೆ. ಎರಡೂ ಕಡೆಯ ವಿಮಾನ ಪ್ರಯಾಣಕ್ಕೆ ಈಗಾಗಲೇ ಮುಂಗಡ ಬುಕಿಂಗ್ ಕೂಡ ಆರಂಭವಾಗಿದೆ ಎಂದಿದ್ದಾರೆ.

ಕಲಬುರಗಿಗೆ ಇದ್ದ ವಿಮಾನಸೇವೆಯು ನಷ್ಟದ ಕಾರಣ ಸ್ಥಗಿತಗೊಂಡಿತ್ತು. ಬೀದರ್ ಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವಿಶೇಷ ನೆರವಿನಿಂದ ಒಂದು ವಿಮಾನ ಓಡಾಡುತ್ತಿತ್ತು. ಸರಕಾರವು ಕಲ್ಯಾಣ ಕರ್ನಾಟಕ ಭಾಗದ ಕೈಗಾರಿಕೆ, ಶಿಕ್ಷಣ, ಪ್ರವಾಸೋದ್ಯಮ, ಕೃಷಿ, ವಾಣಿಜ್ಯ ವಹಿವಾಟು ಇತ್ಯಾದಿಗಳ ಬೆಳವಣಿಗೆಯನ್ನು ಪರಿಗಣಿಸಿ ಪ್ರಾದೇಶಿಕ ವಿಮಾನಯಾನ ಸಂಪರ್ಕ ಉಪಕ್ರಮದಡಿ ವಿಮಾನಸೇವೆಯನ್ನು ಮತ್ತೆ ಆರಂಭಿಸುತ್ತಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದ 2 ಮತ್ತು 3ನೇ ಸ್ತರದ ನಗರಗಳಿಗೆ ವಿಮಾನ ಸಂಪರ್ಕ ಒದಗಿಸಬೇಕು ಎನ್ನುವುದು ಸರಕಾರದ ಕಾಳಜಿಯಾಗಿದೆ. ಇದರಿಂದ ಪ್ರಾದೇಶಿಕ ಆರ್ಥಿಕ ಅಭಿವೃದ್ಧಿ ಜತೆಗೆ ಮೂಲಸೌಕರ್ಯ ಕೂಡ ಸುಧಾರಿಸಲಿದೆ ಎಂದು ಪಾಟೀಲ ಹೇಳಿದ್ದಾರೆ.

ಬೀದರ್ ಮತ್ತು ಕಲಬುರಗಿಗೆ ವಿಮಾನಸೇವೆಯ ಮರುಆರಂಭಕ್ಕೆಂದು ಸಚಿವರು ಇತ್ತೀಚೆಗೆ ಕಲ್ಯಾಣ ಕರ್ನಾಟಕ ಭಾಗದ ಸಚಿವ ಸಹೋದ್ಯೋಗಿಗಳು ಮತ್ತು ಹಲವು ವಿಮಾನಯಾನ ಸಂಸ್ಥೆಗಳ ಪ್ರಮುಖರ ಜತೆ ಹಲವು ಸುತ್ತಿನ ಸಭೆಗಳನ್ನು ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು.

## ಮಾಧ್ಯಮ ಸಂವಾದದಲ್ಲಿ ಕೆವಿಪಿ




**ಬೆಂಗಳೂರು:** ಮಾಧ್ಯಮ ಸಲಹೆಗಾರ ಹೊಣೆಗಾರಿಕೆ ಹೂವಿನ ಹಾದಿ ಅಲ್ಲ, ಮುಳ್ಳಿನ ಹಾಸಿಗೆ ಇದ್ದ ಹಾಗೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ )ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಬಳಿಕ "ಮಾಧ್ಯಮ–ಸಂವಾದ"ದಲ್ಲಿ ಮಾತನಾಡಿದರು.

ಮಾಧ್ಯಮ ಸಲಹೆಗಾರ ಹುದ್ದೆ ಪ್ರತೀ ದಿನ ಸವಾಲಿನದ್ದು. ಬೆಳಗ್ಗೆ ಎದ್ದು ಪತ್ರಿಕೆಗಳನ್ನು ತಿರುವಿ ಹಾಕುವವರೆಗೂ ನನಗೆ ದುಗುಡ ಇದ್ದೇ ಇರುತ್ತದೆ. ಈ ಸವಾಲುಗಳನ್ನು ಪ್ರತೀ ದಿನ ನಿರ್ವಹಿಸುತ್ತಿದ್ದೇನೆ ಎನ್ನುವ ಸಮಾಧಾನ ಕೂಡ ಇದೆ. ಆದರೆ, ನನಗೆ ಒದಗಿ ಬಂದಿರುವ ಹೊಣೆಗಾರಿಕೆ ಬಗ್ಗೆ ನನಗೆ ಯಾವತ್ತೂ ಭ್ರಮ ನಿರಸನ ಆಗಿಲ್ಲ ಎಂದರು.

**ಸಿಎಂ ಯಾವತ್ತೂ ಹೇಳಿಲ್ಲ:** ಇವತ್ತಿನವರೆಗೂ ಮುಖ್ಯಮಂತ್ರಿಗಳು ಒಂದು ದಿನ ಕೂಡ, " ತಮ್ಮ ವಿರುದ್ಧ ಇಂಥಾ ಚಾನಲ್ ನಲ್ಲಿ ಸುದ್ದಿ ಬಂದಿದೆ. ನೋಡು" ಎನ್ನುವ ಒಂದು ಮಾತನ್ನೂ ಹೇಳಿಲ್ಲ. ಮಾಧ್ಯಮ ಸ್ವಾತಂತ್ರ್ಯಕ್ಕೆ ಮುಖ್ಯಮಂತ್ರಿಗಳು ಯಾವತ್ತೂ ಧಕ್ಕೆ ಆಗದಂತೆ ನೋಡಿಕೊಂಡಿದ್ದಾರೆ ಎಂದರು.

**ಕಠಿಣ ಷರತ್ತುಗಳು ವಾಪಸ್ಸು:** ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ವಿಧಿಸಿರುವ ಕಠಿಣವಾದ ಎರಡು ಷರತ್ತುಗಳನ್ನು ಸಡಿಲಗೊಳಿಸಲು ಸಭೆ ಮಾಡಿ ತೀರ್ಮಾನಿಸಲಾಗಿದೆ. ಈ ಬಗ್ಗೆ ವಾರದಲ್ಲಿ ಆದೇಶ ಹೊರಡಿಸಲಾಗುವುದು. ಇದರಿಂದ ಆರು ಸಾವಿರಕ್ಕೂ ಹೆಚ್ಚಿನ ಪತ್ರಕರ್ತರಿಗೆ ಸವಲತ್ತು ಸಿಗುವ ಸಾಧ್ಯತೆಗಳಿವೆ ಎಂದರು.

ಪತ್ರಕರ್ತರ ಸಂಘ ಮತ್ತು ಪತ್ರಕರ್ತ ಸಮುದಾಯ ಅವರ ಒತ್ತಡದಿಂದಲೇ ರಾಜ್ಯದಲ್ಲಿ 'ಜಾಹಿರಾತು ನೀತಿ' ತರಲಾಗಿದೆ. ವೃತ್ತಿಪರವಾಗಿ ಕಷ್ಟಪಟ್ಟು ಪತ್ರಿಕೆ ಮಾಡುವವರಿಗೆ ನೆರವಾಗಬೇಕು ಎನ್ನುವ ಕಾಳಜಿ ಜಾಹಿರಾತು ನೀತಿಯ ಹಿಂದಿದೆ. ಜಾಹಿರಾತಿ ದರ ಪರಿಷ್ಕರಣೆ ಕೂಡ ಚರ್ಚೆಯಲ್ಲಿದೆ ಎಂದರು.

**ಜಾಹಿರಾತು ನೀಡಿಕೆಯಲ್ಲಿನ ತಾರತಮ್ಯ ನಿವಾರಣೆಗೆ ಕ್ರಮ**

ಪತ್ರಿಕೆಗಳಿಗೆ ಜಾಹಿರಾತು ನೀಡುವ ವಿಚಾರದಲ್ಲಿ ಕೆಲವು ಸಮುದಾಯಗಳಿಗೆ ಮಾತ್ರ ಕೆನೆ ಪದರದ ಮಿತಿ ಹಾಕಿದ್ದು, ಒಂದು ಸಮುದಾಯಕ್ಕೆ ಮಾತ್ರ ಕೆನೆಪದರ ಇಲ್ಲದಿರುವುದರಿಂದ ಬಹುತೇಕ ಸಮುದಾಯಗಳ ಮಾಲೀಕರು, ಸಂಪಾದಕರುಗಳು ವಿಪರೀತ ನಷ್ಟ ಅನುಭವಿಸಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿ ಲೋಪಗಳ ಬಗ್ಗೆ ಸಭೆ ನಡೆಸಿ ಚರ್ಚಿಸಲಾಗಿದೆ. ಜಾಹಿರಾತು ನೀತಿಯಲ್ಲಿ ಬಹುತೇಕ ಸಮಸ್ಯೆಗಳು ಬಗೆಹರಿದಿವೆ ಎಂದರು.

# ಬೆಲೆ ಏರಿಕೆ, ಜನರ ಜೀವನ ಜೊತೆ ಚೆಲ್ಲಾಟ

• ಮಲ್ಲಮ್ಮ ನುಡಿ ವಾರ್ತೆ ಬಂಗಾರಪೇಟೆ

ಇತ್ತೀಚಿನ ದಿನಗಳಲ್ಲಿ ಬಿಜೆಪಿ ಮೋದಿ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಸಿ ಎನ್ ಜಿ ಬೆಲೆಗಳನ್ನು ವಾರದಲ್ಲಿ ಎರಡು ಬಾರಿ ಏರಿಕೆ ಮಾಡಿ ಜನರ ಜೀವನ ಜೊತೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಶಾಸಕ ಎಸ್.ಎನ್ ನಾರಾಯಣಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಶಾಸಕರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹಿಂದೆ ಮನಮೋಹನ್ ಸಿಂಗ್ ರವರ ಕಾಲದಲ್ಲಿ ಕಾಂಗ್ರೆಸ್ ಸರ್ಕಾರ ಇದ್ದಾಗ. 40 ಪೈಸೆ ಏರಿಕೆ ಮಾಡಿದಾಗ ಹಾಗೂ ಗ್ಯಾಸ್ ಬೆಲೆಯನ್ನು 416 ರೂಪಾಯಿಗಳಿಂದ 430 ರೂಪಾಯಿಗಳು ಮಾಡಿದ್ದಕ್ಕೆ ಬೃಹತ್ ಮಟ್ಟದ ಹೋರಾಟ ಗ್ಯಾಸ್ ಸಿಲೆಂಡರ್ ಗಳನ್ನು ತಲೆ ಮೇಲೆ ಇಟ್ಟುಕೊಂಡು ಧರಣಿಗಳನ್ನು ಬಿಜೆಪಿ ಮಾಡುತ್ತಿತ್ತು ಆದರೆ ಇವತ್ತು ಗ್ಯಾಸ್ ನ ಬೆಲೆ ಸಾವಿರ ಗಡಿ ದಾಟಿದೆ. ಇದರ ಪರಿಣಾಮ ಜನಸಾಮಾನ್ಯರ ಮೇಲೆ ಹೊರೆ ಬೀಳುತ್ತಿದೆ ಎಂದರು.

ಆದರೆ ಇದನ್ನೆಲ್ಲವನ್ನು ಮರೆಮಾಚಲು ಸನ್ಮಾನ್ಯ ಮೋದಿಜಿ ರವರು ದೇಶದ ಜನರು ಪೆಟ್ರೋಲ್ ಡೀಸೆಲ್ ಬಳಕೆಯನ್ನು ಮಿತ ಬಳಕೆ ಕಡಿಮೆ ಮಾಡಿ, ಹಾಗೂ ಎಲ್ಲರೂ ಮೆಟ್ರೋ, ಸಾರಿಗೆಯ ಬಸ್ಗಳಲ್ಲಿ ಪ್ರಯಾಣ ಮಾಡಿ ಎಂದು ಕರೆ



ನೀಡಿದೆ. ಅವರ ಕರೆಗೆ ಓ ಗುಟ್ಟು ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಕೇವಲ ಒಂದು ದಿನ ಮಾತ್ರ ಮೆಟ್ರೋ ಪ್ರಯಾಣ ಮಾಡಿದ್ದಾರೆ. ಹಾಗೇನೆ ಕೆಲವು ಮುಖ್ಯಮಂತ್ರಿಗಳು ಸೈಕಲ್ನಲ್ಲಿ ಪ್ರಯಾಣ ಮಾಡಿದ್ದಾರೆ. ಬಿಜೆಪಿಯವರ ಆಡಳಿತ ಹೇಗಿದೆ ಎಂದರೆ ಕೇವಲ ಬೂಟಾಟಿಕೆ ತೋರಿಕೆಗೆ ಮಾತ್ರ ಅವರ ಆಡಳಿತ ಸೀಮಿತವಾಗಿದೆ ಎಂದು ಕಿಡಿಕಾರಿದರು.

ಬಿಜೆಪಿ ಪಕ್ಷದವರು ನಿಜವಾಗಲೂ ಮೋದಿ ಮಾತು ಪಾಲನೆ ಮಾಡುವುದಿಲ್ಲ, ಜನರನ್ನು ಗಿಮಿಕ್ ಮಾಡಲು ಜನರನ್ನು ನಂಬಿಸಲು ಗಿಮಿಕ್ ಮಾತುಗಳನ್ನು ಹಾಡುತ್ತಾರೆ ಎಂದರು.

2014ರಲ್ಲಿ ಮೋದಿಜಿ ರವರು ಕೆಲವು ಪ್ರಣಾಳಿಕೆಗಳನ್ನು ಬಿಡುಗಡೆ ಮಾಡಿದ್ದರು. ಅದರಂತೆ ಭಾರತದ ಜನತೆಯ ಖಾತೆಗೆ 15 ಲಕ್ಷ ಹಾಕುತ್ತೇನೆ ಎಂದರು. ವರ್ಷಕ್ಕೆ ಎರಡು ಕೋಟಿ ಯುವಕರಿಗೆ ಉದ್ಯೋಗ ನೀಡುತ್ತೇನೆ ಎಂದರು. ಆದರೆ ಸರ್ಕಾರಿ ಉದ್ಯೋಗಗಳನ್ನೆಲ್ಲ ಖಾಸಗಿಕರಣ ಮಾಡುತ್ತಿದ್ದಾರೆ. ವಿದ್ಯಾವಂತ ಯುವಕರಿಗೆ ಉದ್ಯೋಗವಿಲ್ಲದೆ ಮಾಡಿರುವಂತಹ ಕೀರ್ತಿ ಗೌರವಾನ್ವಿತ ಮೋದಿಜಿ ಅವರಿಗೆ ಸಲ್ಲುತ್ತದೆ ಎಂದು ವ್ಯಂಗ್ಯವಾಡಿದರು.

ಡಾಲರ್ ಮೌಲ್ಯವು ಈಗ 96 ರೂಪಾಯಿಗೆ ತಲುಪಿದೆ. ಹಿಂದೆ ಕಾಂಗ್ರೆಸ್ ಸರ್ಕಾರ ಇದ್ದಾಗ. ಡಾಲರ್ ಮೌಲ್ಯ 61 ರೂಪಾಯಿಗೆ ಬಂದಾಗ ಬಿಜೆಪಿ ಪಕ್ಷ ಬೊಬ್ಬೆ ಹೊಡೆಯುತ್ತಿತ್ತು. ನಮ್ಮ ಭಾರತ ಅದೋಗತಿಯಾಗುತ್ತದೆ ಎಂದು ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದರು. ಆದರೆ ಈಗ ಡಾಲರ್ ಮೌಲ್ಯ 96 ರೂಪಾಯಿ ತಲುಪಿದರೂ ಜನಸಾಮಾನ್ಯರಿಗೆ ದಿಕ್ಕು ತಪ್ಪಿಸುವ ಕೆಲಸವನ್ನು ಕೆಲ ಅಂದ ಭಕ್ತರು ಮಾಡುತ್ತಿದ್ದಾರೆ ಎಂದು ಹೇಳಿದರು.

ಒಂದು ಕಡೆ ರೂಪಾಯಿ ಮೌಲ್ಯ ಕುಸಿಯುತ್ತಿದೆ. ನಿರುದ್ಯೋಗ ತಾಂಡವಾಡುತ್ತಿದೆ. ದಿನನಿತ್ಯ ಬಳಸುವ ವಸ್ತುಗಳ ಬೆಲೆ ಗಗನಕ್ಕೆ ಏರುತ್ತಿದೆ. ಕರ್ನಾಟಕ ರಾಜ್ಯ ವಸೂಲಿ ಮಾಡುತ್ತಿರುವ ಜಿಎಸ್‌ಟಿ ಹಣವನ್ನ ನಮ್ಮ ಪಾಲಿಗೆ ನೀಡದೆ. ಬಿಹಾರ, ಮಧ್ಯಪ್ರದೇಶಗಳಿಗೆ ಹಂಚುತ್ತಿದ್ದಾರೆ. ಇದು ಮೋದಿ ಅವರ ದುರಾಡಳಿತ ಎಂದರು.

ಹಿಂದೆ ಇಲ್ಲಿ ಒಬ್ಬ ಮಹಾನುಭಾವ ಎಂಪಿಯಾಗಿದ್ದರು ಆಗ ರಾಜ್ಯ ಹಾಗೂ ಕೇಂದ್ರ ಸರ್ಕಾರ ಅವರದೇ ಇತ್ತು. ಐದು ವರ್ಷಗಳಲ್ಲಿ ಯಾವುದೇ ಅಭಿವೃದ್ಧಿ ಮಾಡದೇ ಇದ್ದರೂ ಸಹ ಅವರ ಹೆಸರಿನಲ್ಲಿ ಫೇಕ್ ಐಡಿ ಮಾಡಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ತಾಲೂಕಿನಲ್ಲಿ ಯಾವ ಯಾವ ರಸ್ತೆ ಟೆಂಡರ್ ನಡೆದಿದೆಯೋ ಆ ರಸ್ತೆಗಳನ್ನು ವಿಡಿಯೋ ಮಾಡಿ ಸುಳ್ಳು ಸುದ್ದಿಯನ್ನು ಹಬ್ಬಿಸುತ್ತಿದ್ದಾರೆ. ಅವರಿಗೆ ಬಂಗಾರಪೇಟೆ ಬಗ್ಗೆ ಸರಿಯಾದ ಮಾಹಿತಿ ಗೊತ್ತಿಲ್ಲ, ಬಂಗಾರಪೇಟೆ ತಾಲೂಕಿನಲ್ಲಿ ಎಷ್ಟು ಗ್ರಾಮಗಳಿವೆ. ಎಷ್ಟು ಗ್ರಾಮೀಣ ರಸ್ತೆಗಳಿವೆ. ರಾಷ್ಟ್ರೀಯ ಹೆದ್ದಾರಿಗಳು ಇವೆ ಎಂಬುವುದು ಕನಿಷ್ಠ ಮಾಹಿತಿಯು ಸಹ ಅವರಿಗೆ ಗೊತ್ತಿಲ್ಲ ಪಾಪ. 2013ರ ಹಿಂದೆ ಎಷ್ಟು ರಸ್ತೆಗಳು ಅಭಿವೃದ್ಧಿಯಾಗಿತ್ತೋ ಎಂಬುದು ಅವರಿಗೆ ಗೊತ್ತಿಲ್ಲ ಎಂದರು. ತಾಲೂಕಿನ ಗ್ರಾಮಗಳಲ್ಲಿ ಸಿಮೆಂಟ್ ರಸ್ತೆಗಳು ಪ್ರಾರಂಭವಾಗಿದ್ದು ಶಾಸಕ ಎಸ್.ಎನ್ ನಾರಾಯಣಸ್ವಾಮಿ ಬಂದ ಮೇಲೆ. ಶುದ್ಧ ಕುಡಿಯುವ ನೀರಿನ ಘಟಕಗಳು ಕಂಡಿದ್ದು ನಮ್ಮ ಕಾಂಗ್ರೆಸ್ ಸರ್ಕಾರ ಬಂದ ಮೇಲೆ. ಹೈ ಮಾಸ್ಟ ಲೈಟ್ ಕಂಡಿದ್ದು ನಮ್ಮ ಸರ್ಕಾರದಲ್ಲಿ ಎಂದು ಹೇಳಿದರು.

## ರಮೇಶ ಜಿಗಜಿಣಗಿ ತಮ್ಮ ಶಕ್ತಿ ತೋರಿಸಬೇಕು

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಪೆಟ್ರೋಲ್ ಮತ್ತು ಡೀಸೆಲ್ ದರ ಹೊರೆಯಾಗುತ್ತಿರುವ ಈ ದಿನಗಳಲ್ಲಿ ವಿಜಯಪುರದಿಂದ ಬೆಂಗಳೂರು ಮತ್ತು ಮುಂಬೈಗೆ ಹೆಚ್ಚುವರಿ ರೈಲು ಸೇವೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವ ಮೂಲಕ ಸಂಸದ ರಮೇಶ ಜಿಗಜಿಣಗಿ ತಮ್ಮ ಶಕ್ತಿ ತೋರಿಸಬೇಕು ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.



ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳು ಜಗತ್ತಿಗೆ ಮಾದರಿಯಾಗಿದ್ದು, ಅವುಗಳನ್ನು ಬಿಜೆಪಿ ಆಡಳಿತದಲ್ಲಿರುವ ಸರಕಾರಗಳೂ ನಕಲು ಮಾಡುತ್ತಿವೆ. ಇಂಥ ಸಂದರ್ಭದಲ್ಲಿ ಸಂಸದರು, ರಾಜ್ಯದ ಯೋಜನೆಗಳ ಬಗ್ಗೆ ಪದೇ ಪದೇ ಟೀಕೆ ಮಾಡುತ್ತಿರುವುದು ಹಾಸ್ಯಾಸ್ಪದವಾಗಿದೆ. ಪ್ರಚಾರಕ್ಕಾಗಿ ಹೇಳಿಕೆಗಳನ್ನು ನೀಡುವ ಬದಲು ವಿಜಯಪುರಕ್ಕೆ ವಂದೇ ಭಾರತ ರೈಲು ಸೇವೆಯನ್ನು ಪ್ರಾರಂಭಿಸಲು ಕೇಂದ್ರದ ಮೇಲೆ ಒತ್ತಡ ತರಬೇಕು ಎಂದು ಒತ್ತಾಯಿಸಿದ್ದಾರೆ.

ಕೇಂದ್ರಸರಕಾರದ ವೈಫಲ್ಯದ ಪರಿಣಾಮವಾಗಿ ದಿನೇ ದಿನೇ ಪೆಟ್ರೋಲ್, ಗ್ಯಾಸ್ ಬೆಲೆಗಳು ಹೆಚ್ಚಾಗುತ್ತಿದ್ದು, ಜನಸಾಮಾನ್ಯರಿಗೆ ಹೊರೆಯಾಗುತ್ತಿವೆ. ಪ್ರತಿನಿತ್ಯ ವಿಜಯಪುರ ಜಿಲ್ಲೆಯಿಂದ ಹತ್ತಾರು ಸರಕಾರಿ ಮತ್ತು ಖಾಸಗಿ ಬಸ್ಸುಗಳು ಬೆಂಗಳೂರಿಗೆ ಮತ್ತು ಮುಂಬೈಗೆ ಸಂಚರಿಸುತ್ತವೆ.

ಈ ಸಂದರ್ಭದಲ್ಲಿ ವಿಜಯಪುರದಿಂದ ಹೆಚ್ಚುವರಿ ರೈಲುಗಳನ್ನು ಓಡಿಸಬೇಕು. ರೈಲುಗಳು ವಿದ್ಯುತ್ ಶಕ್ತಿಯ ಮೇಲೆ ಸಂಚರಿಸುತ್ತವೆ. ಇದರಿಂದ ಜನತೆಗೆ ಅನುಕೂಲ ಮಾತ್ರವಲ್ಲ ಪರಿಸರಕ್ಕೂ ಪೂರಕವಾಗಲಿದೆ. ಪಬ್ಲಿಕ್ ಟ್ರಾನ್ಸಪೋರ್ಟ್ ಬಳಸುವುದರಿಂದ ತೈಲ ಬಳಕೆಯೂ ಕಡಿಮೆಯಾಗಲಿದೆ. ಏಳು ಬಾರಿ ಸಂಸದರಾಗಿರುವ ಸಂಸದರು ಕೇಂದ್ರಸರಕಾರದಲ್ಲಿರುವ ತಮ್ಮ ವರ್ಚಸ್ಸನ್ನು ಬಳಸಿ ರೈಲುಗಳ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕು: ಡಿಸಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಮುಂಗಾರು ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸರ್ವಸನ್ನದ್ಧವಾಗಿದ್ದು, ಮಳೆಗಾಲದಲ್ಲಿ ಪ್ರಕೃತಿ ವಿಕೋಪ, ಪ್ರವಾಹದಲ್ಲಿ ಜನ–ಜಾನುವಾರ ಹಾನಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಅಧಿಕಾರಿಗಳು ಮೊದಲಾದ್ಯತೆ ನೀಡುವುದರೊಂದಿಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ಮುಂಗಾರು ಮಳೆ ಅವಧಿಯ ಪೂರ್ವಸಿದ್ಧತೆ ಕುರಿತ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತುರ್ತು ಪರಿಸ್ಥಿತಿಯ ನಿರ್ವಹಣೆಗಾಗಿ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ



ಕೇಂದ್ರಸ್ಥಾನದಲ್ಲೇ ಇರಬೇಕು ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

**ಹೆಲ್ಪ್‌ಲೈನ್ ಸ್ಥಾಪಿಸಿ:** ತಾಲೂಕಾ ಹಂತದಲ್ಲಿ ಸಂಭವಿಸುವ ಪ್ರಕೃತಿ ವಿಕೋಪ ಸಂದರ್ಭದಲ್ಲಿ ತಹಶೀಲ್ದಾರರು ಸ್ಥಳದಲ್ಲಿರಬೇಕು. ಅತ್ಯಂತ ಜವಾಬ್ದಾರಿಯಿಂದ ಹಾಗೂ ಅಚ್ಚುಕಟ್ಟಾಗಿ ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿ ಪರಿಹರಿಸಬೇಕು ಎಂದರು.

ಯಾವುದೇ ಘಟನೆ ಸಂಭವಿಸಿದ ತಕ್ಷಣ ಸ್ಪಂದಿಸಿ, ಸ್ಥಳಕ್ಕೆ ಧಾವಿಸಬೇಕು. ಕಲುಷಿತ ನೀರು, ಕೊಠಡಿ ಸ್ಥಳಾಂತರ ಇತ್ಯಾದಿ ಸಂದರ್ಭದಲ್ಲಿ ತಕ್ಷಣ ಸ್ಪಂದಿಸಬೇಕು. ಕಂಟ್ರೋಲ್ ರೂಂ ವ್ಯವಸ್ಥಿತವಾಗಿ ನಿರ್ವಹಿಸಬೇಕು. ಕಂಟ್ರೋಲ್ ರೂಂನಲ್ಲಿದ್ದವರು ಎಲ್ಲ ಇಲಾಖೆಯ ಸಂಪರ್ಕ ಸಂಖ್ಯೆ ಹೊಂದಿರಬೇಕು ಎಂದರು.

# ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ಗ್ರಾಮೀಣ ಭಾಗದಿಂದ ಬರುವ ಪ್ರತಿಯೊಬ್ಬರಿಗು ಶಕ್ತಿ ಯೋಜನೆ ತುಂಬಾ ಮಹತ್ವದಾಗಿದೆ. ಹೀಗಾಗಿ ಸಮಯಕ್ಕೆ ಸರಿಯಾಗಿ ಬಸ್ಸ್‌ಗಳು ಓಡಿಸುವ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಗ್ಯಾರಂಟಿ ಯೋಜನೆಯ ತಾಲ್ಲೂಕು ಅಧ್ಯಕ್ಷಾ ನೀಲಕಂಠ ರಾಠೋಡ ಹೇಳಿದರು. ಇಲ್ಲಿನ

ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಗ್ಯಾರಂಟಿ ಯೋಜನೆ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿ ಗ್ರಾಮೀಣ ಭಾಗದ ಮಹಿಳೆಯರು ಮತ್ತು ವಿದ್ಯಾರ್ಥಿಗಳು ಶಕ್ತಿ ಯೋಜನೆಯ ಭರವಸೆ ಮೇಲೆ ಪಟ್ಟಣಕ್ಕೆ ಕೆಲಸದ ನಿಮಿತ್ಯ ಆಗಮಿಸುವುದು ಸಾಮಾನ್ಯ. ಆದ್ದರಿಂದ ಸಮಯ ನೋಡಿಕೊಂಡು ಬಸ್ಸ್ ಸಂಚಾರ ಮಾಡಿದರೆ ಎಲ್ಲರಿಗು ಅನುಕೂಲವಾಗುತ್ತದೆ. ಇಲ್ಲ ದಿದ್ದರೆ ಸಾರ್ವಜನಿಕರು ವಿನಾಕಾರಣ ಸಮಸ್ಯೆ



ಎದುರಿಸಬೇಕಾಗುತ್ತದೆ ಅದಕ್ಕೆ ಆಸ್ಪದ ಕೊಡಬಾರದು ಎಂದರು. ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಸ್‌ನಿಲ್ದಾಣಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಶೌಚಾಲಯ ಸೌಲಭ್ಯವನ್ನು ಕಡ್ಡಾಯವಾಗಿ ಮಾಡಬೇಕು ಎಂದು ಸಲಹೆ ನೀಡಿದರು.

ಆಹಾರಧಾನ್ಯ ಫಲಾನುಭವಿಗಳ ದಾಖಲಾತಿಯಲ್ಲಿ ಇರುವ "ಜಿಎಸ್‌ಟಿ" ನೋಂದಣಿಯನ್ನು ಪತ್ರದಲ್ಲಿ ರದ್ದು ಗೊಳಿಸದರೆ ಸಾಲದು. ಅದನ್ನು ಆನಲೈನ್ ನಲ್ಲಿರುವ ನೋಂದಣಿ ರದ್ದು ಪಡಿಸಿದಾಗ ಮಾತ್ರ ಫಲಾನುಭವಿಗಳಿಗೆ ಅನುಕೂಲವಾಗುತ್ತದೆ ಎಂದು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಮೇಶ ಸುಲ್ಪಿ ಮಾತನಾಡಿ ಗ್ಯಾರಂಟಿ ಯೋಜನೆ ಸಭೆಯಲ್ಲಿ ಚರ್ಚೆಯಾದ ವಿಷಯದ ಬಗ್ಗೆ ಕಡ್ಡಾಯವಾಗಿ ಅನುಪಾಲನ ವರದಿಯನ್ನು ಸಲ್ಲಿಸಬೇಕು. ಒಬ್ಬರು ಸಲ್ಲಿಸುತ್ತಿಲ್ಲ ಇದು ಒಳ್ಳೆಯ ಬೆಳವಣಿಗೆ ಅಲ್ಲ. ಹೀಗೆ ಮುಂದುವರೆದರೆ ಅಂಥಹ ಇಲಾಖೆ ಅಧಿಕಾರಿಗಳ ವಿರುದ್ಧ ಜಿಲ್ಲಾ ಪಂಚಾಯತಿಗೆ ಸೂಕ್ತಕ್ರಮಕ್ಕಾಗಿ ಶಿಫಾರಸ್ಸು ಮಾಡಲಾಗುವುದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಗ್ಯಾರಂಟಿ ಯೋಜನೆ ಪ್ರಾರಂಭವಾಗಿನಿಂದಲೂ ಶಕ್ತಿಯೋಜನೆಯಡಿ ಒಟ್ಟು. 2.10 ಕೋಟಿ ಜನರು ಸೌಲಭ್ಯ ಪಡೆದಿದ್ದು, ಒಟ್ಟು–66.30 ಕೋಟಿ ರೂ. ಹಾಗೂ ಗೃಹ ಲಕ್ಷ್ಮೀ ಯೋಜನೆಯಡಿ ಒಟ್ಟು–1638699 ಫಲಾನುಭವಿಗಳು ಲಾಭ ಪಡೆದಿದ್ದು 327 ಕೋಟಿ 98 ಲಕ್ಷ ಹಣ ನೀಡಲಾಗಿದೆ ಎಂದು ಸಭೆಗೆ ಸಂಬಂಧ ಪಟ್ಟ ಅಧಿಕಾರಿಗಳು ಮಾಹಿತಿ ನೀಡಿದರು. ಈ ಸಂದರ್ಬದಲ್ಲಿ ಪ್ರ.ದ.ಸ.ಶಶಿಕಾಂತ ರಾಸೂರೆ, ಐಇಸಿ ಸಂಯೋಜಕ ವೀರಾರೆಡ್ಡಿ, ಡಿಇಒ ಮಹಾದೇವ ಮಂಠಾಳೆ ಹಾಗೂ ಗ್ಯಾರಂಟಿ ಯೋಜನೆಯ ಸದಸ್ಯರು ಮತ್ತು ಇಲಾಖೆ ಅಧಿಕಾರಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶರಣರ ದಿವ್ಯವಾಣಿ–ಸೂಫಿಗಳ ಅಮರವಾಣಿ



**ಧರ್ಮ–ಮರ್ಮ**

● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ಒಡಲಿನ ಹಸಿವೆಂದರೇನು ಎನ್ನುವುದನ್ನು ದೇವರ ದಾಸಿಮಯ್ಯ ಅವರ ಬಾಯಿಂದ ಕೇಳಬೇಕು. 'ಒಮ್ಮೆ ಒಡಲುಗೊಂಡು ನೋಡಾ' ಎಂದು ದೇವರಿಗೆ ಸವಾಲನ್ನೇ ಎಸೆದಿರುವ ಶ್ರೇಷ್ಠ ಶರಣನೀತ. ಏಕೆಂದರೆ ಒಡಲು ಗೊಂಡವ ಹಸಿಯುತ್ತಾನೆ. ಅದಕ್ಕಾಗಿಯೇ ಈ ಒಡಲೆಂಬ ಬಂಡಿಗೆ ಉರಳಿ ಬೀಳದಂತೆ ಶರಣರ ನುಡಿಗಳ ಕಡೆಗೀಲನಿಕ್ಕ ಬಯಸುತ್ತಾನೆ. ಆಹಾರ ವಿಹಾರಗಳ ಮೇಲೆ ನಿಯಂತ್ರಣವಿದ್ದಾಗಲೇ ಮನೋವಿಕಾರಗಳನ್ನು ನಿಯಂತ್ರಣದಲ್ಲಿಟ್ಟುಕೊಳ್ಳಲು ಸಾಧ್ಯ.

**'ಹಸಿವೆಂಬ ಹೆಬ್ಬಾವು, ಬಸಿರಬಂದು ಹಿಡಿದಡೆ**
**ವಿಷವೇರಿತ್ತಯ್ಯ – ಅಪಾದಮಸ್ತಕಕ್ಕೆ**
**ಹಸವಿಗನ್ನವನಿಕ್ಕಿ ವಿಷವನಿಳುಹ ಬಲ್ಲಡೆ**
**ವಸುಧೆ ಯೊಳಗಾತನೆ ಗಾರುಡಿಗ ಕಾಣಾ**
**ರಾಮನಾಥ'**

ಆಹಾರವ ತಿಂದು ಕಾಮಕ್ರೋಧಾದಿಗಳನ್ನು ಹತ್ತಿಕ್ಕುವುದು ಗಾರುಡಿಗನ ಚಮತ್ಕಾರ..! ಆಹಾರವನುಳಿದೂ ಬದುಕಲಿಕ್ಕಾಗದು. ಶಿವಶರಣರು ಬೂಟಾಟಿಕೆಯ ಭಕ್ತಿಯನ್ನು ಖಂಡಿಸಿದ್ದಾರೆ. ಡಾಂಭಿಕ ಭಕ್ತರನ್ನು



ಕಂಡು ಜನ ಮೋಸ ಹೋಗದಿರಲೆಂದು ಇಂಥ ಮಾತುಗಳನ್ನಾಡಿದ್ದಾರೆ. ಈ ಈಶೋಪಾಸನೆಗಾಗಿ ಉಪವಾಸ ವ್ರತಕ್ಕಿಂತಲೂ ಮಿಗಿಲಾಗಿ ಶಿವಶರಣರು, ಸೂಫಿಸಂತರ ದೃಷ್ಟಿಯಲ್ಲಿ ನಿಸ್ಸೀಮ ಭಕ್ತಿ, ಭಗವಂತನಲ್ಲಿ ಅಪಾರ ಪ್ರೇಮವೇ ಸರ್ವಶ್ರೇಷ್ಠವಾದ ತಂತ್ರವಾಗಿದೆ. ಸೂಫಿಗಳ ಪ್ರಕಾರ, ರಂಝಾನ ತಿಂಗಳಲ್ಲಿ ಮುಸಲ್ಮಾನರೆಲ್ಲರೂ ಕಡ್ಡಾಯವಾಗಿ (ರೋಗಿಗಳನ್ನು ಹಾಗೂ ಮಕ್ಕಳನ್ನು ಹೊರತುಪಡಿಸಿ) ರೋಜಾ ವ್ರತಾಚರಿಸಬೇಕು. ಈಗಾಗಲೇ ಹೇಳಿದಂತೆ ಶರಣರು ಕೂಡ ನಿಯಮಿತ ಆಹಾರ, ವ್ರತಾಚರಣೆಯ ಮೂಲಕ ದೇಹ ದಂಡಿಸಿ ದೈವ ಸನ್ನಿಧಿಗೆ ಹತ್ತಿರವಾದಂತೆ, ಸೂಫಿಗಳೂ ಭಕ್ತಿಯ ಹಾದಿಹಿಡಿದು ರೋಜಾ ವ್ರತಾಚರಣೆಯ ಮೂಲಕ ವ್ಯಸನಗಳನ್ನು ತೊರೆದು ಮುಕ್ತಿಯ ಹಂತವನ್ನು ತಲುಪಲು ಶ್ರಮಿಸಿದ್ದು ಕಂಡು ಬರುತ್ತದೆ. ಶರಣ–ಸೂಫಿ ಈ ಎರಡು ಪರಂಪರೆಯಲ್ಲೂ ಇದನ್ನು ಕಾಣಬಹುದಾಗಿದೆ.

ಶರಣರ ದಿವ್ಯವಾಣಿ–ಸೂಫಿಗಳ ಅಮರವಾಣಿ ಶಿವಶರಣರ ಅಂತರಗದ ಅನುಭಾವವೇ ವಚನಗಳ ರೂಪತಳೆದಿದೆ. ಅದು ದಿವ್ಯವಾಣಿಯಂತೆ ಮೊಳಗಿದೆ. ಸೂಫಿಗಳ ಆಧ್ಯಾತ್ಮದ ಅನುಭವದ ಬೋಧನೆಯು ಅಮರ ವಾಣಿಯಾಗಿ ಇಂದಿಗೂ, ಎಂದೆಂದಿಗೂ ಮಾನವನ ಬಾಳಿಗೆ ಬೆಳಕನ್ನು ನೀಡುತ್ತದೆ. ಶೇಖ್ ಹಫೀಜ್, ಅಬುಲ್ ಹಸನ್, ಅಮೀರ್ ಮುಹಮ್ಮದ್ ಅಕ್ರಮ್, ಅಬ್ದುಲ್‌ಕಾದಿರ್‌ಗೀಲಾನಿ, ಮೊಯಿನುದ್ದೀನ್ ಚಿಶ್ತಿ, ಖ್ವಾಜಾಬಂದೇನವಾಜ್, ಅಮೀರ್ ಖುಸ್ರೊ..ಸೇರಿದಂತೆ ನೂರಾರು ಪ್ರಸಿದ್ಧ ಸೂಫಿಗಳ ಬೋಧನೆಯ ಸಾರವೂ ಮನುಕುಲ ಉನ್ನತಿಗೆ ದೀವಿಗೆಯಾಗಿದೆ. ಶರಣರ ಒಂದೊಂದು ವಚನದ ತಿರುಳು, ವಾಕ್ಯ ರಚನೆ, ಪದಪುಂಜಗಳೇನೆಲ್ಲವೂ ಅನುಭಾವದ ರಸದಲ್ಲದ್ದಿ ತೆಗೆದಿಟ್ಟ ಹಾಗಿದೆ. ಸ್ವರೂಪದಲ್ಲಿವು ಗದ್ಯರೂಪವಾಗಿದ್ದರೂ ಕಾವ್ಯಾತ್ಮಕವಾದ ಈ ವಚನಗಳಲ್ಲಿ ಒಂದೊಂದು ಪದ ಸಮುಚ್ಚಯವೂ ಶರಣರು ಕಂಡ ಸತ್ಯದ ಭವ್ಯತೆಯನ್ನು ನಮ್ಮ ಆತ್ಮದ ಕಣ್ಣುಗಳ ಮುಂದೆ ಅನಾವರಣಗೊಳಿಸುತ್ತದೆ. ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ, ಮುಕ್ತಾಯಕ್ಕ, ಚೆನ್ನಬಸವಣ್ಣ, ಅಂಬಿಗರಚೌಡಯ್ಯ, ಮಡಿವಾಳಮಾಚಯ್ಯ ಸೇರಿದಂತೆ ನೂರಾರು ವಚನಕಾರರ ವಚನಗಳಲ್ಲಿ ಮೇಲೆ ಹೇಳಿದ ಅಂಶಗಳನ್ನು ಕಾಣಬಹುದು.

ಸೂಫಿ ಧರ್ಮದ ತಿರುಳು, ಅವರ ಚಿಂತನೆ, ಖವ್ವಾಲಿ, ಸಮಾಗೋಷ್ಠಿ ಹಾಗೂ ಮಸ್ನವಿಗಳ ಗುರಿಯೂ ಇದೇ ಆಗಿದೆ. ಈ ಎರಡೂ ಪರಂಪರೆಗಳು ಸತ್ಯಕ್ಕಾಗಿ ಹಂಬಲಿಸಿವೆ. ದೈವ ಸಾಕ್ಷಾತ್ಕಾರ, ಮಾನವ ಕುಲ ಕೋಟಿಯ ಕಲ್ಯಾಣವೇ ಇವರ ಪರಮ ಗುರಿಯಾಗಿದೆ. ಕೇವಲ ವ್ಯಕ್ತಿ ನಿಷ್ಠವಾದ ಮುಕ್ತಿ ಸಾಧನೆಯ ಗುರಿ ಇಟ್ಟುಕೊಂಡು ಸಮಾಜದಿಂದ, ಜನಸಾಮಾನ್ಯರಿಂದ ದೂರ ಸರಿದು ಎತ್ತರಕ್ಕೆ ನಿಲ್ಲುವ ಸಾಹಸವಲ್ಲ. ಸರ್ವಧರ್ಮ ಸಮನ್ವಯತೆ, ಜಾತಿ ಮತ ಪಂಥಗಳ ಸಂಕೀರ್ಣ ಗೋಡೆಗಳ ತೊಡೆದು ಹಾಕಿ ಮಾನವ ಕುಲವೇ ಒಂದು ಕುಟುಂಬ. ವಿಶ್ವವೇ ನಮ್ಮ ಮನೆ ಎಂದು ಸಾರಿದ ಶರಣರು, ಸಂತರು ಸೂಫಿಗಳು ಸರ್ವ ಧರ್ಮ ಸಮಾನತ್ವ, ಸ್ತ್ರೀ ಸ್ವಾತಂತ್ರ್ಯ ಕಾಯಕ ತತ್ವ, ಅಹಿಂಸೆ, ಪರಮತ ಸಹಿಷ್ಣುತೆಗಳಂಥ ಧೀರೋದ್ದಾತ, ತತ್ವಗಳನ್ನು ಹೊಂದಿದ ಈ ಧರ್ಮಗಳು ವಿಶ್ವಧರ್ಮದ ಲಕ್ಷಣಗಳನ್ನು ಪಡೆದಿವೆ. ಸೂಫಿ ತತ್ವ ಸಿದ್ಧಾಂತಗಳನ್ನು ಗದ್ಯದಲ್ಲಿ ಪದ್ಯಗಳಲ್ಲಿ ನಿರೂಪಿಸಲಾಗಿದೆ. ಆದರೆ, ಶರಣ ಸಾಹತ್ಯಕ್ಕಿದ್ದ ಪ್ರಾಚೀನತೆ ಸೂಫಿ ಸಾಹಿತ್ಯಕ್ಕಿಲ್ಲ ಎನ್ನುವ ತರ್ಕವೂ ಇದೆ. ಭಾರತದಲ್ಲಿ ಸೂಫಿ ಸಾಹಿತ್ಯ ರಚನೆಗೊಳ್ಳಲು ಪ್ರಾರಂಭವಾದುದು ಹದಿಮೂರು, ಹದಿನಾಲ್ಕನೇ ಶತಮಾನದಿಂದೀಚೆಗೆ ಎಂಬ ವಾದವೂ ಉಂಟು. ಸೂಫಿ ಸಾಹಿತ್ಯವು ಎಂದಿನಿಂದ ಪ್ರಾರಂಭವಾಯಿತೆಂಬುದಕ್ಕೆ ನಿಖರವಾದ ದಾಖಲೆ ಅಲಭ್ಯ.

**ಮುಂದುವರೆಯುವುದು...**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)